ಸಂಪುಟ : 13 Volume | ಸಂಚಿಕೆ : 219 Issue | ಪುಟಗಳು : 08 Pages | ಬುಧುವಾರ 15 ಅಕ್ಟೋಬರ್ 2025 | ₹2 | RNINO:KARKAN/2011/48371 | BDR/054/2026-20274 | www.mallammanudi.in | mallammanudi@gmail.com | 9448604450

ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಬಳ್ಳಾರಿ | ವಿಜಯನಗರ | ಕೊಪ್ಪಾಳ & ಬಾಗಲಕೋಟೆ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

MN ಸತ್ಯಮೇವ ಜಯತೆ ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

'ಮಾನವನೆದೆಯಲಿ ಆರದೆ ಉರಿಯಲಿ ದೇವರು ಹಚ್ಚಿದ ದೀಪ , ರೇಗುವ ದನಿಗೂ ರಾಗವು ಒಲಿಯಲಿ ಮೂಡಲಿ ಮಧುರಾಲಾಪ '


– ಲಕ್ಷ್ಮೀನಾರಾಯಣ ಭಟ್ .


2. ತಳಜನತೆಯ ಗಟ್ಟಿ ಧ್ವನಿ: ಜನವಾಡಕರ್

4. ಜಿಲ್ಲಾ ಮಟ್ಟದ ಯುವ ಜನೋತ್ಸವ

8. ವೈದ್ಯಕೀಯ ಕಾಲೇಜಿಗೆ ಪ್ರಶಸ್ತಿ ಪ್ರದಾನ


# ಅಸಂಘಟಿತ ಕಾರ್ಮಿಕರು ರಾಜ್ಯದ ಬಹು ದೊಡ್ಡ ಆಸ್ತಿ: ಲಾಡ



ಮಲ್ಲಮ್ಮ ನುಡಿ ವಾರ್ತೆ

ಬೀದರ,ಅ.14:ಅಸಂಘಟಿತವಲಯದ ಕಾರ್ಮಿಕರುಈರಾಜ್ಯದಬಹುದೊಡ್ಡ ಆಸ್ತಿಎಂದುಕಾರ್ಮಿಕಹಾಗೂಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ ಅವರು ತಿಳಿಸಿದರು.

ಅವರುಮಂಗಳವಾರನಗರದಫಾಳೆ ಕಲ್ಯಾಣ ಮಂಟಪದಲ್ಲಿ ಜಿಲ್ಲಾಡಳಿತ, ಜಿಲ್ಲಾಪಂಚಾಯತ,ಕಾರ್ಮಿಕಇಲಾಖೆ, ಕರ್ನಾಟಕರಾಜ್ಯ ಅಸಂಘಟಿತಕಾರ್ಮಿಕರ ಸಾಮಾಜಿಕಭದ್ರತಾಮಂಡಳಿಹಾಗೂಸಾರಿಗೆ ಇಲಾಖೆಇವರಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಬೀದರ ಜಿಲ್ಲೆಯ ವಿವಿಧವರ್ಗದಅಸಂಘಟಿತಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಹಾಗೂ ವಿವಿಧ ಯೋಜನೆಗಳ ಕುರಿತು ಅರಿವು ಮೂಡಿಸುವಕಾರ್ಯಕ್ರಮಉದ್ಘಾಟಿಸಿ ಮಾತನಾಡಿದರು.ರಾಜ್ಯದದುಡಿಯುವ ಜನರಲ್ಲಿ85% ಅಸಂಘಟಿತ ವಲಯದ ಕಾರ್ಮಿಕರಾಗಿದ್ದಾರೆ.ವಿವಿಧವಲಯದಲ್ಲಿ ಕಾರ್ಯ ನಿರ್ವಹಿಸುವುದರ ಮೂಲಕ ರಾಜ್ಯಕ್ಕೆ ದೊಡ್ಡ ಶಕ್ತಿಯಾಗಿದ್ದಾರೆ. ರಾಜ್ಯದಲ್ಲಿ ಅಸಂಘಟಿತ ವಲಯದಲ್ಲಿ ದುಡಿಯುತ್ತಿರುವಕಾರ್ಮಿಕರಿಗೆಭದ್ರತೆ ಒದಗಿಸುವನಿಟ್ಟಿನಲ್ಲಿಕರ್ನಾಟಕರಾಜ್ಯ ಅಸಂಘಟಿತಕಾರ್ಮಿಕರಸಾಮಾಜಿಕಭದ್ರತಾ ಮಂಡಳಿಯ ಮೂಲಕ 'ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ' ಯನ್ನು ಅನುಷ್ಠಾನಗೊಳಿಸಲಾಗಿದೆ. ಈ ಯೋಜನೆಯಡಿ101 ಅಸಂಘಟಿತವರ್ಗಗಳ ಕಾರ್ಮಿಕರನ್ನುಗುರುತಿಸಲಾಗಿದ್ದು,ಸುಮಾರು 35 ಲಕ್ಷಕಾರ್ಮಿಕರು ಒಳಗೊಂಡಿದ್ದಾರೆ. ಅವರಿಗೆ ಉಚಿತವಾಗಿ ನೊಂದಾಯಿಸಿ ಸ್ಮಾರ್ಟ್‌ಕಾರ್ಡ್‌ನೀಡಲಾಗಿದೆಎಂದರು.

ಬೀದರಜಿಲ್ಲೆಯಲ್ಲಿ59,493ಕಾರ್ಮಿಕರು ನೊಂದಾಯಿಸಿಯಾಗಿದ್ದು ಅವರಿಗೆ ಸ್ಮಾರ್ಟ್‌ಕಾರ್ಡ್‌ನೀಡಲಾಗುತ್ತಿದ್ದು, ಅಪಘಾತಸಂಭವಿಸಿದಲ್ಲಿ1 ಲಕ್ಷಪರಿಹಾರ ನೀಡಲಾಗುವುದು. ಕರ್ನಾಟಕ ರಾಜ್ಯ ಗಿಗ್‌ಕಾರ್ಮಿಕರವಿಮಾಯೋಜನೆಯಡಿ 4 ಲಕ್ಷದವರೆಗೆ ವಿಮಾ ಸೌಲಭ್ಯ ನೀಡಲಾಗುವುದು.

2ನೇ ಪುಟನೋಡಿ

## ಲೋಕಾ ದಾಳಿ: ಸಹಾಯಕ ನಿರ್ದೇಶಕನ ಮನೆ, ಕಚೇರಿಯಲ್ಲಿ ಶೋಧ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 14 : ಜಿಲ್ಲೆಯ ಔರಾದ್ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಧೂಳಪ್ಪ ಅವರ ಮನೆ ಮತ್ತು ಕಚೇರಿಯಲ್ಲಿ ಲೋಕಾಯುಕ್ತ ಪೊಲೀಸರು ಮಂಗಳವಾರ ಶೋಧ ಕೈಗೊಂಡಿದ್ದಾರೆ. ಧೂಳಪ್ಪ ಅವರಿಗೆ ಸೇರಿದ ಇಲ್ಲಿನ ಗುರುನಗರದಲ್ಲಿನ ಮನೆ, ಔರಾದ್ ಕೃಷಿ ಇಲಾಖೆಯ ಎಡಿ ಕಚೇರಿ, ಮುಧೋಳ ಕೃಷಿ ಇಲಾಖೆಯ ಕಚೇರಿ ಹಾಗೂ ಭಾಲ್ಕಿಯ ಕರಡ್ಯಾಳ ಕಚೇರಿಯಲ್ಲಿ ದಾಖಲೆಪತ್ರಗಳನ್ನು ಪರಿಶೀಲಿಸಿದ್ದಾರೆ. ಲೋಕಾಯುಕ್ತ ಎಸ್‌ಪಿ ಸಿದ್ದರಾಜು ಮಾರ್ಗದರ್ಶನದಲ್ಲಿ, ಡಿವೈಎಸ್ಪಿ ಹನುಮಂತ ರೆಡ್ಡಿ ನೇತೃತ್ವದಲ್ಲಿ ಶೋಧ ಕಾರ್ಯ ಕೈಗೊಂಡಿದ್ದಾರೆ. ಧೂಳಪ್ಪ ಅವರು ಅಕ್ರಮ ಆಸ್ತಿ ಗಳಿಸಿದ್ದಾರೆ ಎಂದು ಲೋಕಾಯುಕ್ತ ಪೊಲೀಸರಿಗೆ ದೂರು ಸಲ್ಲಿಸಿದ ಹಿನ್ನೆಲೆಯಲ್ಲಿ ಈ ಶೋಧ ಕೈಗೊಂಡಿದ್ದಾರೆ ಎಂದು ತಿಳಿದು ಬಂದಿದೆ.

## ಸಚಿವೆ ನಿರ್ಮಲಾ ಸೀತಾರಾಮನ್ ಕಲ್ಯಾಣ ಕರ್ನಾಟಕ ಪ್ರವಾಸ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಅ.14:ಬುಧವಾರಅಕ್ಟೋಬರ್15ರಿಂದ ಎರಡು ದಿನ ಕಲ್ಯಾಣ ಕರ್ನಾಟಕದ ಜಿಲ್ಲೆಗಳಾದ ಕಲಬುರ್ಗಿ,ಬೀದರ್,ಕೊಪ್ಪಳ,ಬಳ್ಳಾರಿ,ರಾಯಚೂರು ಹಾಗೂ ಯಾದಗಿರಿಯಲ್ಲಿ ನಡೆಯಲಿರುವ ವಿವಿಧ ಕಾರ್ಯಕ್ರಮಗಳಲ್ಲಿಕೇಂದ್ರ ಹಣಕಾಸುಸಚಿವೆ ಶ್ರೀಮತಿ ನಿರ್ಮಲಾ ಸೀತಾರಾಮನ್ ಭಾಗಿಯಾಗಲಿದ್ದಾರೆ.ಈ ವೇಳೆ ರೈತ ಪ್ರಮುಖರು, ರೈತ ಕೇಂದ್ರಗಳು, ಕೃಷಿ ತರಬೇತಿ ಕೇಂದ್ರಗಳು, ಕೃಷಿ ಉತ್ಪನ್ನಗಳ ಸಂಸ್ಕರಣಾ ಕೇಂದ್ರಗಳಿಗೆ ಭೇಟಿ ನೀಡಿ, ಸಂವಾದ ನಡೆಸಲಿದ್ದಾರೆ. ಕೇಂದ್ರಕ್ಕೆ ಎನ್‌ಡಿಆರ್‌ಎಫ್ ನೆರೆ ಪರಿಹಾರ ಕೋರಿ ರಾಜ್ಯದಿಂದ ಪತ್ರ ಬರೆಯಲು ಸಿದ್ಧತೆ ಬೆನ್ನಲ್ಲೇ ವಿತ್ತ ಸಚಿವೆ ರಾಜ್ಯ ಭೇಟಿ ಕೈಗೊಂಡಿದ್ದಾರೆ.

2ನೇ ಪುಟನೋಡಿ

## ರಾಜ್ಯದ ಹಲವೆಡೆ ಲೋಕಾ ದಾಳಿ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.14: ಬೆಂಗಳೂರು, ಶಿವಮೊಗ್ಗ, ಬಾಗಲಕೋಟೆ ಸೇರಿದಂತೆ ರಾಜ್ಯದ ವಿವಿಧೆಡೆ 12 ಅಧಿಕಾರಿಗಳ ಮನೆಗಳ ಮೇಲೆ ಬೆಳ್ಳಂಬೆಳಗ್ಗೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

ಆದಾಯ ಮೀರಿದ ಆಸ್ತಿ ಗಳಿಕೆ ಆರೋಪದ ಮೇಲೆ ಅಧಿಕಾರಿಗಳ ತಂಡ ಬೆಳ್ಳಂಬೆಳಗ್ಗೆ ದಾಳಿ ನಡೆಸಿದೆ. ದಾವಣಗೆರೆ ಜಿಲ್ಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಯೊಬ್ಬರ ಶಿವಮೊಗ್ಗದ ಮನೆ ಮೇಲೂ ದಾಳಿಯಾಗಿದೆ.

ದಾವಣಗೆರೆಯ ಕರ್ನಾಟಕ ಗ್ರಾಮಿ?ಣ ಮೂಲ ಸೌಕರ್ಯ ಅಭಿವೃದ್ಧಿ ನಿಯಮಿತದ ಎಇಇ ಜಗದೀಶ್ ನಾಯ್ಕ್ ಅವರ ಮನೆ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿ ಪರಿಶೀಲನೆ ನಡೆಸುತ್ತಿದ್ದಾರೆ. ಶಿವಮೊಗ್ಗದ ಸವಳಂಗ ರಸ್ತೆಯ ಶಿವಬಸವ ನಗರದ ಇಂದಿರಾ ಗಾಂಧಿ ಬಡಾವಣೆಯಲ್ಲಿರುವ ಅವರ ಮನೆ ಮೇಲು ದಾಳಿಯಾಗಿದೆ. ದಾವಣಗೆರೆಯಿಂದ ಎರಡು ಜೀಪುಗಳಲ್ಲಿ ಆಗಮಿಸಿರುವ ಲೋಕಾಯುಕ್ತ ಅಧಿಕಾರಿಗಳ ದಾಳಿಯಲ್ಲಿ ಪಾಲ್ಗೊಂಡಿದ್ದಾರೆ.

**ಬೆಂಗಳೂರಲ್ಲಿ ಮೂವರ ಮನೆ ಮೇಲೆ ದಾಳಿ:**

ಬೆಂಗಳೂರಿನಲ್ಲಿ ಮೂವರು ಭ್ರಷ್ಟ ಅಧಿಕಾರಿಗಳ ಮನೆ ಮೇಲೆ ದಾಳಿ ನಡೆದಿದೆ. ವೈದ್ಯಕೀಯ ಅಧಿಕಾರಿ ಮಂಜುನಾಥ್, ಪಿಯು ಬೋರ್ಡ್ ನಿರ್ದೇಶಕಿ ಸುಮಂಗಳ, ಸರ್ವೇಯರ್ ಅಧಿಕಾರಿ ಗಂಗಾ ಮರೀಗೌಡ ಅವರ ಮನೆಗಳ ಮೇಲೆ ಲೋಕಾಯುಕ್ತ ತಂಡ ದಾಳಿ ನಡೆದಿದೆ. ಲೋಕಾಯುಕ್ತ ಎಸ್ಪಿ ಶಿವಪ್ರಕಾಶ್ ದೇವರಾಜ್ ನೇತೃತ್ವದ ತಂಡ ಸುಮಂಗಳ ಅವರ ಕೆಂಗೇರಿಯ ಸ್ಯಾಟಲೈಟ್ ಟೌನ್‌ನಲ್ಲಿರೋ ಮನೆ ಮೇಲೆ ದಾಳಿ ನಡೆಸಿದ್ದು, ಮಹತ್ವದ ದಾಖಲೆಗಳನ್ನ ಪರಿಶೀಲಿಸುತ್ತಿದೆ.

## ವಿಜ್ಞಾನ ಓದಿಯೂ ಮೌಢ್ಯ ನಂಬಿದರೆ ವಿದ್ಯಾರ್ಥಿಗಳು ಓದಿದ್ದೇ ದಂಡ: ಸಿದ್ದರಾಮಯ್ಯ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.14:ವಿಜ್ಞಾನಓದಿಯೂ ಮೌಢ್ಯನಂಬುತ್ತೀರಿಅಂದರೆವಿದ್ಯಾರ್ಥಿಗಳು ಓದಿದ್ದೇ ದಂಡ. ಜಾತಿ ತಾರತಮ್ಯದ ಸಮಾಜದಲ್ಲಿ ಚಲನೆ ಇಲ್ಲ. ಚಲನೆ ಸಿಗಬೇಕಾದರೆವೈಜ್ಞಾನಿಕಮನೋಭಾವ ಮುಖ್ಯ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

ನೃಪತುಂಗ ವಿಶ್ವವಿದ್ಯಾಲಯದ ಆವರಣದಲ್ಲಿನಿರ್ಮಾಣ ಆಗಿದ್ದ ಕಟ್ಟಡ ಉದ್ಘಾಟನೆಮಾಡಿಮಾತನಾಡಿದಅವರು, ವಿದ್ಯೆ ಮತ್ತು ಪ್ರತಿಭೆ ಯಾರ ಅಪ್ಪನ ಮನೆಸ್ವತ್ತಲ್ಲ. ಅವಕಾಶಸಿಗಬೇಕು ಅಷ್ಟೆ. ರಾಮಾಯಣ ಬರೆದ ವಾಲ್ಮೀಕಿ ಬೇಡರ ಜಾತಿಯವರಾದರೆ, ಮಹಾಭಾರತ ಬರೆದ ವ್ಯಾಸರು ಬೆಸ್ತ ಸಮುದಾಯದವರು. ಹೀಗಾಗಿ ವಿದ್ಯೆ, ಪ್ರತಿಭೆ ಯಾರ ಸ್ವತ್ತೂ ಅಲ್ಲ. ಅವಕಾಶಗಳು ಬೇಕು ಅಷ್ಟೆ. ವೈಚಾರಿಕತೆ, ವೈಜ್ಞಾನಿಕತೆ ಬೆಳೆಸಿಕೊಂಡರೆ ನಿಮ್ಮ ಹಾಗೂ ಸಮಾಜದ ಪ್ರಗತಿ ಸಾಧ್ಯ. ಈ ದಿಕ್ಕಿನಲ್ಲಿ ವಿಜ್ಞಾನದ ವಿದ್ಯಾರ್ಥಿಗಳು ಸಮಾಜವನ್ನು ಮುನ್ನಡೆಸಬೇಕು ಎಂದು ಕರೆ ನೀಡಿದರು.

ವಿಜ್ಞಾನದ ಓದು ಮತ್ತು ಅಧ್ಯಯನ ಮಾಡುವವರ ಸಂಖ್ಯೆ ಕಡಿಮೆ ಆಗುತ್ತಿರುವುದು ಅಪಾಯದ ಸಂಗತಿ. ವೈಜ್ಞಾನಿಕ ಮನೋಭಾವ ಮತ್ತು ವಿಜ್ಞಾನದ ಶಿಕ್ಷಣ ಸಮಾಜದ ಮತ್ತು ದೇಶದ ಪ್ರಗತಿಗೆ ಅತ್ಯಗತ್ಯ. ವಿಜ್ಞಾನ ಓದಿದವರೂ ಮೂಢನಂಬಿಕೆ ಮತ್ತು ಕಂದಾಚಾರಕ್ಕೆ ಗಂಟು ಬೀಳುವುದು ಶಿಕ್ಷಣ ಕಲಿಕೆಯಲ್ಲಿನ ಕೊರತೆಯಾಗಿದೆ. ಬಹಳ ಹಿಂದೆಯೇ ಬಸವಾದಿ ಶರಣರು ಮೌಢ್ಯ, ಕಂದಾಚಾರಗಳ ವಿರುದ್ಧ ಕರೆ ನೀಡಿದರು. ಆದರೆ ಇವತ್ತಿಗೂ ಮೌಢ್ಯ ಹೋಗಿಲ್ಲ. ಏಕೆಂದರೆ ನಮ್ಮದು ಜಾತಿ ತಾರತಮ್ಯದ ಸಮಾಜ ಆಗಿರುವುದರಿಂದ ಇದಕ್ಕೆ ಚಲನೆ ಇಲ್ಲ. ಪಟ್ಟಭದ್ರರು ತಾರತಮ್ಯವನ್ನು ಗಟ್ಟಿಗೊಳಿಸುವ ಸಲುವಾಗಿಯೇ ಮೌಢ್ಯವನ್ನು ಬಿತ್ತುತ್ತಾರೆ. ನಾನು ಮೊದಲ ಬಾರಿ ಮುಖ್ಯಮಂತ್ರಿ ಆದಾಗ ಮೌಢ್ಯ ನಿಷೇಧ ಕಾಯ್ದೆ ಜಾರಿಗೆ ತರಲು ಪ್ರಯತ್ನ ಪಟ್ಟರೂ ಸಾಧ್ಯವಾಗಲಿಲ್ಲ. ಅಷ್ಟರಮಟ್ಟಿಗೆ ಮೌಢ್ಯ ಮತ್ತು ಮೌಢ್ಯ ಹಂಚುವ ಪಟ್ಟಭದ್ರರು ಆಳವಾಗಿ ಬೇರು ಬಿಟ್ಟಿದ್ದಾರೆ ಎಂದರು. ವಿಜ್ಞಾನ ಓದಿದವರಿಗೆಲ್ಲಾ ವೈಜ್ಞಾನಿಕ ಮನೋಭಾವ ಇಲ್ಲದಿರುವುದು ದುರಂತ. ವಿಜ್ಞಾನ ಓದಿಯೂ ಹಣೆಬರಹ ಮತ್ತು ಕರ್ಮ ಸಿದ್ಧಾಂತ, ಗ್ರಹಚಾರಗಳನ್ನೆಲ್ಲಾ ನಂಬುತ್ತಾರೆ ಎಂದರೆ ಇವರು ವಿಜ್ಞಾನ ಓದಿದ್ದೇ ದಂಡ ತಾನೇ ಎಂದು ಪ್ರಶ್ನಿಸಿದರು. ದೇಶದ ಪ್ರಧಾನಿ ಆಗಿದ್ದ ಜವಾಹರಲಾಲ್ ನೆಹರು ಅವರು ದೇಶದ ಯುವ ಜನತೆ ವೈಜ್ಞಾನಿಕ ಮನೋಭಾವ ಬೆಳೆಸಿಕೊಳ್ಳಲಿ ಎನ್ನುವ ದೂರದೃಷ್ಟಿ ಹೊಂದಿದ್ದರು.

2ನೇ ಪುಟನೋಡಿ




ಬೆಂಗಳೂರುನಗರದಿಂದಪ್ರಕಟಗೊಳ್ಳುತ್ತಿರುವಪ್ರತಿಷ್ಠಿತಶೈಕ್ಷಣಿಕಮಾಸಪತ್ರಿಕೆಶಿಕ್ಷಣರತ್ನ ಪತ್ರಿಕೆಯು10ನೇವಾರ್ಷಿಕೋತ್ಸವದಲ್ಲಿ ಶಿಕ್ಷಕರ ದಿನಾಚರಣೆ ಆಯೋಜಿಸಿತ್ತು. ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಹಿರಿಯರ ಸಮ್ಮುಖದಲ್ಲಿ ರಾಜ್ಯದ ಹಲವು ಶಿಕ್ಷಕರನ್ನು ಪುರಸ್ಕರಿಸಲಾಯಿತು. ಇದೇ ಸಂದರ್ಭದಲ್ಲಿ ಹಿರಿಯ ಪತ್ರಕರ್ತರಿಗೆ ಸನ್ಮಾನಿಸಿ ಗೌರವಿಸಲಾಯಿತು. ವಂದೇ ಕರ್ನಾಟಕ ಪತ್ರಿಕೆಯ ಸಂಪಾದಕರಾದ ಶ್ರೀಯುತ ಲಿಂಗಯ್ಯ ಕಾಡದೇವರ ಮಠ ಅವರನ್ನು ಸನ್ಮಾನಿಸಿ ಪುರಸ್ಕರಿಸಲಾಯಿತು. ಕಾರ್ಯಕ್ರಮದ ವೇದಿಕೆಯಲ್ಲಿ ಹೆಸರಾಂತ ಚಲನಚಿತ್ರ ನಟ ನಿರ್ದೇಶಕ ಎಸ್.ನಾರಾಯಣ್, ನಿವೃತ್ತ ಪೊಲೀಸ್ ಅಧಿಕಾರಿ ಬಸವರಾಜ ಮಾಲಗತ್ತಿ, ಕನ್ನಡಪ್ರಭ ಪತ್ರಿಕೆಯ ವಿಶ್ರಾಂತ ಸಂಪಾದಕ ವೆಂಕಟನಾರಾಯಣ, ನಿವೃತ್ತ ಪ್ರಧಾನ ಜಿಲ್ಲಾ ನ್ಯಾಯಾಧೀಶರು ಹಾಗೂ ಕರ್ನಾಟಕ ನ್ಯಾಯಾಂಗ ಇಲಾಖಾ ನೌಕರರ ತರಬೇತಿ ಸಂಸ್ಥೆಯ ವಿಶ್ರಾಂತ ಪ್ರಾಂಶುಪಾಲ ನಾ. ನಾರಾಯಣ, ಭಾರತೀಯ ವಿದ್ಯಾಭವನ ಪತ್ರಿಕೋದ್ಯಮ ವಿಭಾಗ ಹಿರಿಯ ಶಿಕ್ಷಕರೂ ಆದ ಶ್ರೀ ಎಂ.ಬಿ. ಜಯರಾಂ ಮತ್ತಿತರರು ಉಪಸ್ಥಿತರಿದ್ದರು.

## ಅಯೋಧ್ಯೆ ಅರ್ಚಕರ ಆಶೀರ್ವಾದ ಪಡೆದ ಮುಸ್ಕಾನ್ ಮಿಶ್ರಾ; ವಜಾ



ಮಲ್ಲಮ್ಮ ನುಡಿ ವಾರ್ತೆ

ಲಖನೌ:ಅ.14:ಸಮಾಜವಾದಿಪಕ್ಷದ ಮಹಿಳಾವಿಭಾಗವುದೊಡ್ಡಹಿನ್ನಡೆಯನ್ನು ಅನುಭವಿಸಿದೆ. ಯುವನಾಯಕಿಮತ್ತು ಸಾಮಾಜಿಕಮಾಧ್ಯಮಪ್ರಭಾವಿಮುಸ್ಕಾನ್ ಮಿಶ್ರಾ ಅವರನ್ನು ಸಮಾಜವಾದಿಪಕ್ಷದ ರಾಷ್ಟ್ರೀಯಕಾರ್ಯದರ್ಶಿಹುದ್ದೆಯಿಂದ ತೆಗೆದುಹಾಕಲಾಗಿದೆ. ಅಯೋಧ್ಯೆಯ ಹನುಮಾನ್‌ಗಢಿ ದೇವಾಲಯದ ಮಹಾಂತ್‌ರಾಜುದಾಸ್ ಅವರೊಂದಿಗಿನ ಭೇಟಿಯ ವೈರಲ್ ವೀಡಿಯೊ ಇದಕ್ಕೆ ಕಾರಣವಾಗಿತ್ತು. ಈ ಭೇಟಿ ಮುಸ್ಕಾನ್ ಗೆದುಬಾರಿಯಾಗಿಪರಿಣಮಿಸಿದೆ. ಇದು ತಮ್ಮ ಸಿದ್ಧಾಂತಗಳಿಗೆವಿರುದ್ಧವಾಗಿದ್ದು ಪಕ್ಷವು ಕಠಿಣ ಕ್ರಮ ಕೈಗೊಂಡಿದೆ ಪಕ್ಷ ಹೇಳಿದೆ.ಮುಸ್ಕಾನ್ ಮಿಶ್ರಾ ಲಖನೌದ 25 ವರ್ಷದಯುವನಾಯಕಿ. ಅವರನ್ನು ಸಮಾಜವಾದಿಪಕ್ಷದಡಿಜಿಟಲ್‌ಪ್ರಚಾರದ ಮುಖವೆಂದು ಪರಿಗಣಿಸಲಾಗಿತ್ತು. ಅವರು ಇನ್‌ಸ್ಟಾಗ್ರಾಮ್‌ನಲ್ಲಿ 6.68 ಲಕ್ಷಕ್ಕೂ ಹೆಚ್ಚು ಅನುಯಾಯಿಗಳನ್ನು ಹೊಂದಿದ್ದಾರೆ. ಪಕ್ಷದ ಪ್ರಚಾರಕ್ಕೆ ಸಂಬಂಧಿಸಿದ ವೀಡಿಯೊಗಳು ಮತ್ತು ಪೋಸ್ಟ್‌ಗಳನ್ನು ಆಗಾಗ್ಗೆ ಹಂಚಿಕೊಳ್ಳುತ್ತಿದ್ದರು. ಅವರು 2024ರ ಸೆಪ್ಟೆಂಬರ್ 21ರಂದು ಸಮಾಜವಾದಿಪಕ್ಷವನ್ನು ಸೇರಿದ್ದು ನಂತರ ಪಕ್ಷದ ರಾಷ್ಟ್ರೀಯಕಾರ್ಯದರ್ಶಿಯಾಗಿ ನೇಮಕಗೊಂಡಿದ್ದರು.

ಅಕ್ಟೋಬರ್ 13ರಂದು ಮುಸ್ಕಾನ್ ಮಿಶ್ರಾ ಅಯೋಧ್ಯೆಯ ಹನುಮಾನ್ ಗಢಿ ದೇವಸ್ಥಾನಕ್ಕೆ ಭೇಟಿ ನೀಡಿದರು. ಅಲ್ಲಿ ಅವರು ಮಹಾಂತ್ ರಾಜು ದಾಸ್ ಅವರನ್ನು ಭೇಟಿ ಮಾಡಿ ಆಶೀರ್ವಾದ ಪಡೆದರು. ಈ ವೀಡಿಯೊ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಯಿತು.

2ನೇ ಪುಟನೋಡಿ

## ತೆಂಗಿನಕಾಯಿ ಕೀಳಲು ಹೋದಾಗ ವಿದ್ಯುತ್ ಪ್ರವಹಿಸಿ ಇಬ್ಬರ ಸಾವು

ಮಲ್ಲಮ್ಮ ನುಡಿ ವಾರ್ತೆ

ಚಾಮರಾಜನಗರ:ಅ.14: ಅಕ್ರಮ ವಿದ್ಯುತ್ ಪ್ರವಹಿಸಿ ಇಬ್ಬರು ಸಾವನ್ನಪ್ಪಿದ ಘಟನೆ ಚಾಮರಾಜನಗರದಲ್ಲಿ ನಡೆದಿದೆ. ಚಾಮರಾಜನಗರ ತಾಲೂಕಿನ ಕೊತ್ತಲವಾಡಿ ಗ್ರಾಮದಲ್ಲಿ ಘಟನೆ ನಡೆದಿದೆ. ಕಾಯಿ ಕೀಳಲು ಕೆಲಸಕ್ಕೆ ಹೋಗಿದ್ದ ಇಬ್ಬರು ದುರ್ಮರಣ ಹೊಂದಿದ್ದಾರೆ. ಕಾಡಂದಿ ಕಾಟದಿಂದ ಜಮೀನಿಗೆ ಅಕ್ರಮ ವಿದ್ಯುತ್ ಅಳವಡಿಸಿದ್ದ ಹಿನ್ನೆಲೆ, ವಿದ್ಯುತ್ ಪ್ರವಹಿಸಿ ಅವಘಡ ಸಂಭವಿಸಿದೆ. ಸ್ವಾಮಿ, ಕೃಷ್ಣ ಮೃತ ದುರ್ದೈವಿಗಳು.

ಗ್ರಾಮದ ಪ್ರಕಾಶ್ ಎಂಬವರ ಜಮೀನಿನಲ್ಲಿ ಘಟನೆ ನಡೆದಿದೆ. ಕೇರಳ ಮೂಲದವರಿಗೆ ಜಮೀನು ಗುತ್ತಿಗೆಯನ್ನು ಕೊಡಲಾಗಿತ್ತು. ಬೆಳೆ ರಕ್ಷಣೆಗೆ ಅಕ್ರಮ ವಿದ್ಯುತ್ ಹಾಯಿಸಿದ್ದರು. ಘಟನೆ ಸಂಬಂಧ ಚಾಮರಾಜನಗರ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಗಡ್ಕರಿ ದೇಶದ ಪ್ರಧಾನಿ ಆಗ್ತಾರೆ ಅದೇ ನವೆಂಬರ್ ಕ್ರಾಂತಿ: ಸಂತೋಷ್ ಲಾಡ್



ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 14 : ನವೆಂಬರ್ ಕ್ರಾಂತಿ, ರಾಜಕೀಯ ಸಂಕ್ರಾಂತಿ ಇತ್ಯಾದಿ ಅಂತೆ-ಕಂತೆಗಳ ನಡುವೆ ಸಿಎಂ ಸಿದ್ದರಾಮಯ್ಯ ಡಿನ್ನರ್ ಮೀಟ್ ಮಾಡಿದ್ದು, ಇನ್ನೂ ಈ ವಿಚಾರವಾಗಿ ಸಚಿವ ಸಂತೋಷ್ ಲಾಡ್ ಪ್ರತಿಕ್ರಿಯೇ ನೀಡಿದ್ದಾರೆ. ಬೀದರ್‌ನಲ್ಲಿ ಮಾತನಾಡಿದ ಅವರು, ಡಿನ್ನರ್ ಮೀಟಿಂಗ್‌ನಲ್ಲಿ ಸಂಪುಟ ಪುನರ್ ರಚನೆ ಬಗ್ಗೆ ಮಾತನಾಡಿಲ್ಲ. ಸಂಪುಟ ಪುನರ್ ರಚನೆ ಮಾಡುವುದಾದ್ರೆ ಎಂ ಡಿ ಸಿಎಂಗೆ ಪೂರ್ಣ ಅಧಿಕಾರ ಇದೆ, ಮಾಡಲಿ. ಅಲ್ಲದೇ ನಮಗೂ ಕೇಂದ್ರದ ನವಂಬರ್ ಕ್ರಾಂತಿ' ಬಗ್ಗೆ ಕುತೂಹಲವಿದೆ. ನಿತಿನ್ ಗಡ್ಕರಿ ಅವರು ಪ್ರಧಾನಿ ಆಗ್ತಾರೆ ಅನ್ನೋ ಮಾಹಿತಿ ಇದೆ ಎಂದು ಹೇಳಿದರು. ಇನ್ನೂ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರದಿಂದ ಆರ್‌ಎಸ್ ಎಸ್ ಬ್ಯಾನ್ ಬಗ್ಗೆ ಮಾತನಾಡಿ, 145 ಕೋಟಿ ಭಾರತೀಯರೂ ದೇಶ ಪ್ರೇಮಿಗಳೇ ಆರ್‌ಎಸ್‌ಎಸ್‌ಗೆ ವಿಶೇಷವಾಗಿ ದೇಶ ಪ್ರೇಮ ಇಲ್ಲ. ಈ ಹಿಂದೇ 3 ಸಾವಿರ ಕೋಟಿ ಖರ್ಚು ಮಾಡಿ ಸರ್ದಾರ್ ವಲ್ಲಭಭಾಯ್ ಪಟೇಲ್ ಪ್ರತಿಮೆ ನಿರ್ಮಾಣ ಮಾಡಿದ್ದು ಅವರು ಕಾಂಗ್ರೆಸ್‌ನಲ್ಲಿ ಇದ್ದಾಗ ಪ್ರತಿಮೆ ಮಾಡಲು ಬಿಜೆಪಿ ವಿರೋಧ ಮಾಡಿದ್ರು ಎಂದು ಕುಟುಕಿದರು.

## ಪಠ್ಯದ ಜೊತೆಗೆ ಕ್ರೀಡೆಗೂ ಮಹತ್ವ ನೀಡಿ: ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಬೀದರ, ಅ.14 : ಕ್ರೀಡೆಗಳು ಪ್ರತಿ ಮನುಷ್ಯನ ಅವಿಭಾಜ್ಯ ಅಂಗ. ಅದರಲ್ಲೂ ವಿದ್ಯಾರ್ಥಿಗಳು ಪಠ್ಯದ ಜೊತೆಗೆ ಮಹತ್ವ ಕ್ರೀಡೆಗಳಿಗೂ ನೀಡುವ ಮೂಲಕ ಭಾಗವಹಿಸಿ ತಮ್ಮ ಪ್ರತಿಭೆ ಮೆರೆಯಬೇಕೆಂದು ಅರಣ್ಯ, ಪರಿಸರ ಮತ್ತು ಜೀವಶಾಸ್ತ್ರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಹೇಳಿದರು.

ಅವರು ನಗರದ ಜಿಲ್ಲಾ ನೆಹರು ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಶಾಲಾ ಶಿಕ್ಷಣ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ 2025-26ನೇ ಸಾಲಿನ ಕಲಬುರಗಿ ವಿಭಾಗ ಮಟ್ಟದ 14/17 ವಯೋಮಿತಿಯೊಳಗಿನ ಬಾಲಕ ಮತ್ತು ಬಾಲಕಿಯರ ವಾಲಿಬಾಲ್ ಪಂದ್ಯಾವಳಿಯನ್ನು ಉದ್ಘಾಟಿಸಿ ಮಾತನಾಡಿದರು.

2ನೇ ಪುಟನೋಡಿ

## ಬೆದರಿಕೆ ಕರೆ, ನಾನು ಹೆದರಲ್ಲ: ಪ್ರಿಯಾಂಕ್ ಖರ್ಗೆ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.14:ವ್ಯವಸ್ಥೆವಿರುದ್ಧಧ್ವನಿ ಎತ್ತಿದಾಗ ಕರೆಗಳು ಬಂದಿವೆ. ಗಾಂಧೀಜಿ, ಅಂಬೇಡ್ಕರ್‌ಗೆ ಬಿಟ್ಟಿಲ್ಲ, ಇನ್ನು ಇವರು ನಮ್ಮನ್ನು ಬಿಡುತ್ತಾರಾ? ಯಾವುದೇ ಕರೆ ಬಂದರೂ ಹೆದರುವುದಿಲ್ಲ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿರುಗೇಟು ನೀಡಿದ್ದಾರೆ.

ಬೆದರಿಕೆ ಕರೆ ವಿಚಾರವಾಗಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಹಿಂದಿ, ಇಂಗ್ಲೀಷ್‌ನಲ್ಲಿ ಮಾತಾನಾಡುತ್ತಾರೆ. ನೋ ಕಾಲರ್ ಐಡಿ, ಅಂತರಾಷ್ಟ್ರೀಯ ನಂಬರ್ ಇದೆ. ಕೆಟ್ಟ ಭಾಷೆಯಿಂದ ನಮಗೆ, ಕುಟುಂಬದವರಿಗೆ, ಕುಟುಂಬದವರ ಪರಿಸ್ಥಿತಿ ಬಗ್ಗೆ ಮಾತಾನಾಡುತ್ತಾರೆ. ಇದು ಸಹಜ, ವಿರೋಧ ಪಕ್ಷದಲ್ಲಿ ಇದ್ದಾಗಲೂ ಎರಡೂ ಮೂರು ಬಾರಿ ದೂರು ಕೊಟ್ಟಿದ್ದೆ. ಬೊಮ್ಮಾಯಿ ಇದ್ರು, ತನಿಖೆ ಮಾಡಿಸಿದರು. ಆಗ ಇದು ಹೊರದೇಶದಿಂದ ಬರುತ್ತಿವೆ ಅಂದರು. ಈಗಲೂ ಅದೇ ನಡೆದಿದೆ ಎಂದರು. ಹಿಂದೆ ಮಲ್ಲಿಕಾರ್ಜುನ ಖರ್ಗೆ ಅವರಿಗೂ ಬೆದರಿಕೆ ಕರೆ ಬಂದಿತ್ತು, ಈಗಲೂ ದೂರು ಇದೆ. ಎಫ್‌ಐಆರ್ ರಿಜಿಸ್ಟರ್ ಮಾಡಬಹುದು, ಆದರೆ ಕಂಡುಹಿಡಿಯೋದು ಕಷ್ಟ. ನಾವ್ಯಾಕೆ ಈ ಸಿದ್ಧಾಂತದಿಂದ ಹಿಂದೆ ಸರಿಯಲಿ? ಈ ತತ್ವದಿಂದ ಗಾಂಧೀಜಿ ಬಲಿ ತೆಗೆದುಕೊಂಡಿಲ್ವಾ? ಸಂವಿಧಾನದಲ್ಲಿ ನಮಗೆ ನಂಬಿಕೆ ಇದೆ. ಇದು ನನ್ನ ಸಿದ್ಧಾಂತ,

2ನೇ ಪುಟನೋಡಿ

**ಕೆಎಲ್ ರಾಹುಲ್ ಅಜೇಯ ಅರ್ಧಶತಕ; ವೆಸ್ಟ್ ವಿಂಡೀಸ್ ವಿರುದ್ಧ ಭಾರತಕ್ಕೆ ಭರ್ಜರಿ ಜಯ; ಸರಣಿ ಕೈವಶ**

# ಆಕ್ಸಿಲೈಫ್ ಆಸ್ಪತ್ರೆ ಉದ್ಘಾಟನೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಕಲಬುರಗಿಯಲ್ಲಿಸಾಕಷ್ಟು ಆಸ್ಪತ್ರೆಗಳುಸ್ಥಾಪನೆಯಾಗಿವೆ,ಆದರೆ ನೂತನವಾಗಿನಿರ್ಮಾಣವಾಗಿರುವ ಆಕ್ಸಿಲೈಫ್ಆಸ್ಪತ್ರೆಯುಸುಸಜ್ಜಿತವಾಗಿ ನಿರ್ಮಿಸಿದ್ದಾರೆ,ಈ ಆಸ್ಪತ್ರೆಯಲ್ಲಿ ಅಳವಡಿಸಿಕೊಂಡಿರುವ ಇನ್ಸ್ಟೂಮೆಂಟ್‌ಗಳಿಂದಲೇತಿಳಿದು ಬರುತ್ತಿದೆ ಇಲ್ಲಿ ಉತ್ತಮವಾದ ಚಿಕಿತ್ಸೆ ದೊರೆ ಯುತ್ತದೆ, ಈ ಭಾಗದ ಜನರು ಈ ಆಸ್ಪತ್ರೆಯ ಲಾಭಪಡೆದಯಬೇಕು ಎಂದು ಕರ್ನಾಟಕಸರಕಾರದವೈದ್ಯಕೀಯ ಸಚಿವ ಡಾ. ಶರಣಪ್ರಕಾಶ ಪಾಟೀಲ ಅವರು ನಗರದ ಕೇಂದ್ರ ಬಸ್ ನಿಲ್ದಾಣದ ಮುಂಭಾಗದಲ್ಲಿರುವ ಸಂತೋಷ ಮಾಲ್ ಪಕ್ಕದಲ್ಲಿ ನೂತನವಾಗಿ ನಿರ್ಮಾಣವಾಗಿರುವ ಆಕ್ಸಿಲೈಫ್ ಆಸ್ಪತ್ರೆಗೆಉದ್ಘಾಟಿಸಿ ಮಾತನಾಡುತ್ತಿದ್ದ ಅವರು, ಕಲ್ಯಾಣ ಕರ್ನಾಟಕ ಭಾಗಕ್ಕೆ ಡಾ. ಮಲ್ಲಿಕಾರ್ಜುನ ಖರ್ಗೆಯವರಿಂದಾಗಿ ಜಾರಿಗೆ ಬಂದಿರುವ ಆರ್ಟಿಕಲ್ 371(ಜೆ) ಇಂದಾಗಿ ಸಾಕಷ್ಟು ವೈದ್ಯಕೀಯ ಮತ್ತು ಇಂಜಿನಿಯರಿಂಗ್ ಸೀಟುಗಳು ನಮ್ಮ ಮಕ್ಕಳಿಗೆ ದೊರೆಯುತ್ತಿವೆ, ಹಾಗಾಗಿ ದೊಡ್ಡದಾಗಿ ಕಲಬುರಗಿ ಬೆಳೆಯುತ್ತಿರುವದರಿಂದ ಈ ಸೌಲಭ್ಯಗಳು ಅವಶ್ಯಕತೆ ಇದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಾಸಕರಾದ ಅಲ್ಲಮಪ್ರಭು ಪಾಟೀಲ, ಖನಿಜ್ ಫಾತಿಮಾ, ವಿಧಾನ ಪರಿಷತ್ ಸದಸ್ಯ ಜಗದೇವ ಗುತ್ತೇದಾರ, ಬೆಂಗಳೂರಿನ ಮಾಜಿ ಮೇಯರ್ ಸಂಪತ್, ಕಾಂಗ್ರೆಸ್ ಮುಖಂಡ ಮಹಾಂತಪ್ಪ ಸಂಗಾವಿ, ಆಸ್ಪತ್ರೆಯ ಅಧ್ಯಕ್ಷರಾದ ಚಂದ್ರಕಾಂತ ಗದ್ದಗಿ, ಆಕ್ಸಿಲೈಫ್ ಆಸ್ಪತ್ರೆಯ ಎಕ್ಸಿಕ್ಯೂಟಿವ್ ಡೈರೆಕ್ಟರ್ ಡಾ. ಚಿನ್ನಮ್ಮ ಗದ್ದಗಿ, ಡಾ. ಪ್ರಿಯಾ ಗದ್ದಗಿ ಮೋದಿ, ಡಾ. ಅನಮೋಲ್ ಮೋದಿ ಸೇರಿದಂತೆ ಅನೇಕರಿದ್ದರು.



ಕಲಬುರಗಿ ನಗರದ ಸಾರ್ವಜನಿಕ ಉದ್ಯಾನವನದಲ್ಲಿರುವ ರೋಟರಿ ಪೌವಲ್ ಹ್ಯಾರಿಸ್ ಸಭಾಂಗಣದಲ್ಲಿ ಗುಬಬರ್ಗಾ ರೋಟರಿ ಕ್ಲಬ್, ಇನರವ್ಹಿಲ್ ಕ್ಲಬ್ ಮತ್ತು ಓಮೇಗಾ ಆಸ್ಪತ್ರೆಯ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಸ್ತನ ಕ್ಯಾನ್ಸರ್ ರೋಗದ ಉಚಿತ ತಪಾಸಣಾ ಶಿಬಿರವನ್ನು ಡಾ. ಮೇಗಾ ಕಮಲಾಪೂರಕರ್, ಡಾ. ಎಸ್.ಎಸ್.ನಿರ್ಣಿ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಗುಬಬರ್ಗಾ ರೋಟರಿ ಕ್ಲಬ್ ಅಧ್ಯಕ್ಷರಾದ ಉದಯ್ ಪಿ. ಹೊಂಗುಂಟಿಕರ್, ಇನರವ್ಹಿಲ್ ಕ್ಲಬ್ ಅಧ್ಯಕ್ಷೆ ಕಲ್ಯಾಣಿ ಚಕ್ಕಿ, ಮಣಿಲಾಲ ಶಹಾ, ಡಾ. ಶ್ರೇಯಾನ್ಸ್ ಕೋಠಾರಿ, ಡಾ. ಮನಾಲಿ ದೇಶಪಾಂಡೆ, ಸಚೀನ ದೇಶಪಾಂಡೆ ಸೇರಿದಂತೆ ಮತ್ತಿತರರಿದ್ದರು.

# ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಪೂರ್ವಭಾವಿ ಸಭೆ 17ಕ್ಕೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 14-ಜಿಲ್ಲಾಡಳಿತದಿಂದ ಅಕ್ಟೋಬರ್ 23ರಂದು ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಆಚರಣೆ ಹಿನ್ನೆಲೆಯಲ್ಲಿ ಪೂರ್ವಭಾವಿ ಸಿದ್ಧತಾ ಸಭೆಯು ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಅಕ್ಟೋಬರ್ 17ರ ಬೆಳಿಗ್ಗೆ 11 ಗಂಟೆಗೆ ನಡೆಯಲಿದೆ. ಸಂಬಂಧಿಸಿದ ಅಧಿಕಾರಿಗಳು ಹಾಗೂ ವಿವಿಧ ಸಮಾಜದ ಮುಖಂಡರು ಸಭೆಗೆ ಹಾಜರಾಗಿ ಸಲಹೆ ಸೂಚನೆಗಳನ್ನು ನೀಡಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಜಿಲ್ಲಾಧಿಕಾರಿಗಳ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

# ಅಪರಿಚಿತ ಮೃತ ವ್ಯಕ್ತಿಗಳ ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.14-ದಿನಾಂಕ:06-10-2025 ರಂದು ಕುಲಾಲಿ ಮತ್ತು ದುದನಿ ರೈಲು ನಿಲ್ದಾಣದ ಮಧ್ಯೆ ರೈಲ್ವೆ ಕೆ.ಎಮ್.ನಂ.-523/24-26ರಲ್ಲಿ ಸುಮಾರು 40 ರಿಂದ 45 ವರ್ಷದ ಅಪರಿಚಿತ ವ್ಯಕ್ತಿಯು ಮೃತಪಟ್ಟಿದ್ದು, ಈವರೆಗೆ ಈ ಮೃತ ವ್ಯಕ್ತಿಯ ವಾರಸುದಾರರು ಯಾರೂ ಪತ್ತೆಯಾಗಿರುವುದಿಲ್ಲ ಎಂದು ವಾಡಿ (ಜಂ) ರೈಲ್ವೆ ಪೊಲೀಸ್ ಠಾಣೆಯ ಸ್ಟೇಷನ್ ಹೌಸ್ ಆಫೀಸರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೃತ ವ್ಯಕ್ತಿಯು 5.4 ಅಡಿ ಎತ್ತರ ಇದ್ದು, ಕಪ್ಪು ಮೈಬಣ್ಣ, ಕೋಲು ಮುಖ, ಉದ್ದನೆಯ ಮೂಗು, ತಲೆಯಲ್ಲಿ ಕಪ್ಪು ಕೂದಲು, ಮುಖದ ಮೇಲೆ ಸಣ್ಣ ಕುರಚಲು ಗಡ್ಡಾ ಮತ್ತು ಮೀಸೆ ಬಿಟ್ಟಿದ್ದು, ಸಾಧಾರಣ ಮೈಕಟ್ಟು ಹೊಂದಿರುತ್ತಾರೆ. ಬಿಳಿ ಬಣ್ಣದ ತುಂಬು ತೋಳಿನ ಫುಲ್‌ಶರ್ಟ್, ಕಪ್ಪು ಬಣ್ಣದ ಪ್ಯಾಂಟ್ ಮತ್ತು ನೀಲಿ ಬಣ್ಣದ ಅಂಡರ್‌ವೇಯರ್ ಧರಿಸಿರುತ್ತಾರೆ. ಅದೇ ರೀತಿ ದಿನಾಂಕ: 11-10-2025 ರಂದು ಬೀದರ ಮತ್ತು ಕಲಬುರಗಿ ರೈಲು ನಿಲ್ದಾಣಗಳ ಮಧ್ಯೆ ರೈಲ್ವೆ ಕೆ.ಎಮ್. ನಂ.-101/6-7 ರಲ್ಲಿ ಸುಮಾರು 30 ರಿಂದ 35 ವರ್ಷದ ಅಪರಿಚಿತ ವ್ಯಕ್ತಿಯು ಮೃತಪಟ್ಟಿದ್ದು, ಈವರೆಗೆ ಈ ಮೃತ ವ್ಯಕ್ತಿಯ ವಾರಸುದಾರರು ಯಾರೂ ಪತ್ತೆಯಾಗಿರುವುದಿಲ್ಲ. ಈ ವ್ಯಕ್ತಿಯು 5.3 ಅಡಿ ಎತ್ತರ ಇದ್ದು, ಗೋಧಿ ಮೈಬಣ್ಣ, ಕೋಲು ಮುಖ, ದಪ್ಪನೆಯ ಮೂಗು, ತಲೆಯಲ್ಲಿ ಕಪ್ಪು ಬಣ್ಣದ ಕೂದಲು, ಮುಖದ ಮೇಲೆ ಕಪ್ಪು ಬಣ್ಣದ ಸಣ್ಣ ಕರುಚಲು ಗಡ್ಡಾ ಮತ್ತು ಮೀಸೆ ಬಿಟ್ಟಿದ್ದು, ಸಾಧಾರಣ ಮೈಕಟ್ಟು ಹೊಂದಿರುತ್ತಾರೆ. ಪಿಂಕ್ ಬಣ್ಣದ ತುಂಬು ತೋಳಿನ ಶರ್ಟ್ ಮತ್ತು ಕೇಸರಿ ಕಾವಿ ಬಣ್ಣದ ಲುಂಗಿ ಧರಿಸಿರುತ್ತಾರೆ. ಈ ಮೃತ ವ್ಯಕ್ತಿಗಳ ವಾರಸುದಾರರು ಯಾರಾದರೂ ಇದ್ದಲ್ಲಿ ರೈಲ್ವೆ ಪೊಲೀಸ್ ಕಂಟ್ರೋಲ್ ರೂಮ್ ಸಂಖ್ಯೆ 080-22871291, ವಾಡಿ ರೈಲ್ವೆ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ 08476-202244 ಹಾಗೂ ರೈಲ್ವೆ ಪೊಲೀಸ್ ಠಾಣೆಯ ಮೊಬೈಲ್ ಸಂಖ್ಯೆ 9480802132ಗೆ ಸಂಪರ್ಕಿಸಲು ಕೋರಿದೆ.

# ಅಕ್ಟೋಬರ್ 15 ರಂದು ಉದ್ಯೋಗ ಮೇಳ ಆಯೋಜನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.14-ಕಲಬುರಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಇದೇ ಅಕ್ಟೋಬರ್ 15ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಕಲಬುರಗಿ ಸರ್ಕಾರಿ ಐಟಿಐ ಕಾಲೇಜು ಹಿಂದುಗಡೆಯಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ಉದ್ಯೋಗಮೇಳವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಫ್ಲೈಟ್‌ಕ್ರಿವ್ ಏವಿಯೇಶನ್ ಅಕಾಡೆಮಿಯಲ್ಲಿ ಸಮಾಲೋಚನಾಕಾರರು, ಇಂಗ್ಲೀಷ್ ಟ್ರೇನಿ, ಟೇಲಿಕಾಲರ್, ಫ್ರಂಟ್ ಆಫೀಸ್ ಎಕ್ಸಿಕ್ಯೂಟೀವ್ ಹುದ್ದೆಗಳಿಗೆ ಯಾವುದೇ ಪದವಿ ಹಾಗೂ ಸ್ನಾತ್ತಕೋತ್ತರ ಪದವಿ ವಿದ್ಯಾರ್ಹತೆ ಹೊಂದಿರಬೇಕು. ವಯೋಮಿತಿ 18 ರಿಂದ 30 ವರ್ಷದೊಳಗಿರಬೇಕು.

ಕಲಬುರಗಿ ಡಾನ್‌ಬಾಸ್ಕೋ ಟೇಕ್‌ದಲ್ಲಿ ಟ್ರೇನರ್ (ಕಸ್ಟಮರ್ ಕೇರ್ ಎಕ್ಸಿಕ್ಯೂಟೀವ್) ಹುದ್ದೆಗೆ ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರಬೇಕು. ವಯೋಮಿತಿ 23 ರಿಂದ 40 ವರ್ಷದೊಳಗಿರಬೇಕು. ಫೀಲ್ಡ್‌ಆಫೀಸರ್ ಹುದ್ದೆಗೆ ಪಿಯುಸಿ ವಿದ್ಯಾರ್ಹತೆ ಹೊಂದಿರಬೇಕು. ವಯೋಮಿತಿ 21 ರಿಂದ 35 ವರ್ಷದೊಳಗಿರಬೇಕು.

ಲಾಹೋಟಿ ಮೋಟಾರ್ಸ್‌ದಲ್ಲಿ ರಿಲೇಷನ್‌ಶೀಫ್ ಮ್ಯಾನೇಜರ್, ಕರ್ಮಶಿಯಲ್ ಎಕ್ಸಿಕ್ಯೂಟೀವ್, ರಿಸೇಪ್‌ನಿಸ್ಟ್/ ಶೋರೂಮ್ ಹೊಸ್ಟೆಸ್ಟ್ ಹುದ್ದೆಗೆ ಯಾವುದೇ ಪದವಿ ಪಾಸಾಗಿರಬೇಕು. ವಯೋಮಿತಿ 18 ರಿಂದ 40 ವರ್ಷದೊಳಗಿರಬೇಕು.

ಅನ್ನಪೂರ್ಣ ಫೈನಾನ್ಸ್‌ದಲ್ಲಿ ಫಿಲ್ಡ್ ಕ್ರೆಡಿಟ್ ಆಫೀಸರ್ ಮತ್ತು ಅಸಿಸ್ಟಂಟ್ ಬ್ರ್ಯಾಂಚ್ ಮ್ಯಾನೇಜರ್ ಹುದ್ದೆಗಳಿಗೆ ಪಿಯುಸಿ/ಐಟಿಐ/ ಡಿಪ್ಲೋಮಾ/ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರಬೇಕು. ವಯೋಮಿತಿ 18 ರಿಂದ 28 ವರ್ಷದೊಳಗಿರಬೇಕು. ಯುನಿಟ್ ಮ್ಯಾನೇಜರ್ ಹುದ್ದೆಗೆ ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರಬೇಕು. ವಯೋಮಿತಿ 21 ರಿಂದ 32 ವರ್ಷದೊಳಗಿರಬೇಕು. ಜೋಯಾಲುಕ್ಕಾಸ್‌ದಲ್ಲಿ ಸೆಲ್ಸ್ ಎಕ್ಸಿಕ್ಯೂಟಿವ್ ಮತ್ತು ಸೆಲ್ಸ್‌ಟ್ರೇನಿ ಹುದ್ದೆಗೆ ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರಬೇಕು. ವಯೋಮಿತಿ 18 ರಿಂದ 32 ವರ್ಷದೊಳಗಿರಬೇಕು.

ಆಸಕ್ತಿಯುಳ್ಳ ಅಭ್ಯರ್ಥಿಗಳು ತಮ್ಮ ಎಲ್ಲಾ ಅಂಕಪಟ್ಟಿಗಳ ಝೆರಾಕ್ಸ್, ರೆಸ್ಯೂಮ್ (ಬಯೋಡೆಟಾ) ಭಾವಚಿತ್ರಗಳು ಹಾಗೂ ಆಧಾರ್‌ಕಾರ್ಡ್ ದೊಂದಿಗೆ ಮೇಲ್ಕಂಡ ದಿನದಂದು ನಡೆಯುವ ಉದ್ಯೋಗಮೇಳದಲ್ಲಿ ಭಾಗವಹಿಸಬೇಕು. ಉದ್ಯೋಗಮೇಳದಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಯಾವುದೇ ತರಹದ ಭತ್ಯೆಯನ್ನು ನೀಡಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯನ್ನು ಹಾಗೂ ಕಚೇರಿ ದೂರವಾಣಿ ಸಂಖ್ಯೆ 08472-274846ಗೆ ಸಂಪರ್ಕಿಸಲು ಕೋರಲಾಗಿದೆ.

# ಶಿಕ್ಷಣದ ಜೊತೆಗೆ ವೈಚಾರಿಕ ವೈಜ್ಞಾನಿಕ ಪ್ರಜ್ಞೆ ಮುಖ್ಯ: ಪ್ರೊ. ವಿಜಯಲಕ್ಷ್ಮಿ ಗಡ್ಡೆ.



(ವರದಿ.ಡಿ.ಕೆ. ಪ್ರಹ್ಲಾದ ಜಿ.)


ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:ಅ.14-ಸ್ನಾತ-ಕೋತ್ತರ ಪದವಿ ಪಡೆಯುವ ಜೊತೆಗೆ ವೈಚಾರಿಕ ವೈಜ್ಞಾನಿಕ ಪ್ರಜ್ಞೆ ಮುಖ್ಯ. ಸಮಾಜದ ಅರಿವಿನ ದಾರಿಯಾಗಿ ನಮ್ಮ ವಿದ್ಯೆ ಪದವಿಗಳಿರಬೇಕು ಎಂದು ಬಿಡಿಪಿಸಿ ನಿರ್ದೇಶಕಿ ಪ್ರೊ. ವಿಜಯಲಕ್ಷ್ಮಿ ಗಡ್ಡೆ ಹೇಳಿದರು.

ನಗರದ ಶ್ರೀ ಬಸವೇಶ್ವರ ದೇವಸ್ಥಾನ ಶಿಕ್ಷಣ ಸಂಸ್ಥೆಯ ಶ್ರೀ ಬಸವೇಶ್ವರ ಸ್ನಾತಕೋತ್ತರ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಸ್ನಾತಕೋತ್ತರ ಅಂತಿಮ ವರ್ಷದ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದಲ್ಲಿ ಮಾತನಾಡಿದ ಅವರು, ಸಮಾಜದಲ್ಲಿನ ಸಮಸ್ಯೆ ಮತ್ತು ಸವಾಲುಗಳು ಎದುರಿಸಲು ಸಜ್ಜಾಗುವ ಮನಸ್ಥಿತಿಯೇ ಶಿಕ್ಷಣದ್ದಾಗಿದೆ ಎಂದರು.

ಬಿಡಿಪಿಸಿ ನಿರ್ದೇಶಕ ಮಲ್ಲಯ್ಯಸ್ವಾಮಿ ಹಿರೇಮಠ ಮಾತನಾಡಿ, ಮೌಲ್ಯಾಧಾರಿತ ಶಿಕ್ಷಣ ಜೀವನದ ಹೊಸ ದಿಕ್ಕಿಗೆ ಕಾರಣವಾಗಿದೆ. ಶಿಕ್ಷಣದ ಜೊತೆಗೆ ಸಂಸ್ಕಾರ, ಮೌಲ್ಯಗಳು ಅಗತ್ಯ ಇವೆ. ಶಿಕ್ಷಣದ ಜೊತೆಗೆ ಸಂಸ್ಕಾರ, ಸಂಸ್ಕೃತಿ, ಭಾರತೀಯ ಮೌಲ್ಯಗಳು ಕಲಿಯುವುದು ಈಗ ಹೆಚ್ಚು ಅಗತ್ಯವಿದೆ ಎಂದರು. ಈ ಸಂದರ್ಭದಲ್ಲಿ

ಬಿಡಿಪಿಸಿ ಅಧ್ಯಕ್ಷರಾದ ಬಸವರಾಜ ಕೋರಕೆ ಅಧ್ಯಕ್ಷತೆ ವಹಿಸಿದ್ದರು. ಕೋಶಾಧ್ಯಕ್ಷ ರಾಜಕುಮಾರ ಹೊಳಕುಂದೆ, ಕಾರ್ಯದರ್ಶಿ ವಿವೇಕಾನಂದ ಹೊದಲೂರೆ, ನಿರ್ದೇಶಕರಾದ ಸುಭಾಷ್ ಹೊಳಕುಂದೆ, ಕಾಶಪ್ಪ ಸಕ್ಕರಭಾವಿ, ರೇವಣಪ್ಪ ರಾಯವಾಡೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಪ್ರ. ಡಾ. ಶಾಂತಲಾ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ. ಬಸವರಾಜ ಖಂಡಾಳೆ ನಿರೂಪಿಸಿ ವಂದಿಸಿದರು.



ಕಲಬುರಗಿ: ನಗರಕ್ಕೆ ಆಗಮಿಸಿದ ವಿಶ್ವ ಹಿಂದೂ ಪರಿಷತ್ ಕೇಂದ್ರಿಯ ಕಾರ್ಯದರ್ಶಿಗಳಾದ ಶ್ರೀ ಗೋಪಾಲಜಿ ಅವರನ್ನು ಖ್ಯಾತ ಉದ್ಯಮಿಗಳು ಹಾಗೂ ಬಿಜೆಪಿ ಮುಖಂಡರಾದ ಗಿರಿರಾಜ ಯಳಮೇಲಿ ಅವರು ಸನ್ಮಾನಿಸಿದರು. ಈ ಸಂದರ್ಭದಲ್ಲಿ ಹಿರಿಯ ಪರ್ತಕರ್ತರಾದ ಪ್ರಭಾಕರ ಜೋಶಿ ಇದ್ದರು.

# ಉದ್ಯಮಶೀಲತಾಭಿವೃದ್ಧಿ ಕಾರ್ಯಕ್ರಮ: ಹೆಸರು ನೋಂದಣಿಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.14-ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಬೆಂಗಳೂರು ಮತ್ತು ಕರ್ನಾಟಕ ಉದ್ಯಮಶಿಲತಾಭಿವೃದ್ಧಿ ಕೇಂದ್ರ (ಸಿಡಾಕ್) ಕಲಬುರಗಿ ಇವುಗಳ ಸಂಯುಕ್ತಾಶ್ರಯದಲ್ಲಿ ಸ್ವಯಂ ಉದ್ಯಮಗಳನ್ನು ಪ್ರಾರಂಭಿಸಲು ಆಸಕ್ತಿಯುಳ್ಳ ಕಲಬುರಗಿಯ ಪರಿಶಿಷ್ಟ ಜಾತಿಯ ಮಹಿಳಾ ಮತ್ತು ಪುರುಷ ಅಭ್ಯರ್ಥಿಗಳಿಗೆ 2025ರ ಅಕ್ಟೋಬರ್ ಮಾಹೆಯಲ್ಲಿ ಹತ್ತು ದಿನಗಳ ಕಾಲ ಉದ್ಯಮಶೀಲತಾಭಿವೃದ್ಧಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ಕಲಬುರಗಿ ಸಿಡಾಕ್ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಸಕ್ತಿಯಿರುವ ವಯೋಮಿತಿ 20 ರಿಂದ 45 ವರ್ಷದೊಳಗಿನ, ಕನಿಷ್ಠ ಎಸ್.ಎಸ್.ಎಸ್.ಎಲ್.ಸಿ. ಉತ್ತೀರ್ಣ/ಅನುತ್ತೀರ್ಣರಾದ ಪರಿಶಿಷ್ಟ ಜಾತಿಯ ಮಹಿಳಾ ಮತ್ತು ಪುರುಷ ಅಭ್ಯರ್ಥಿಗಳು ಜಂಟಿ ನಿರ್ದೇಶಕರು, ಸಿಡಾಕ್, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ (ವಿಭಾಗೀಯ ಕಛೇರಿ) ಸಿಓಇ ಕಟ್ಟಡ, ಸರ್ಕಾರಿ ಬಾಲಕರ ಐಟಿಐ ಆವರಣ, ಎಂ.ಎಸ್.ಕೆ. ಮಿಲ್ ರಸ್ತೆ, ಕಲಬುರಗಿ-585102 ಮತ್ತು ಮೊಬೈಲ್ ಸಂಖ್ಯೆ 8884872109 / 9108972833 ಸಂಖ್ಯೆಗಳಿಗೆ ಕರೆ ಮಾಡಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ ಅವರು ತಿಳಿಸಿದ್ದಾರೆ.

ನಾಲ್ಕನೇ ಸ್ವಾಭಿಮಾನಿ ಕಲ್ಯಾಣ ಪರ್ವಕ್ಕೆ ಸಂಭ್ರಮದ ತೆರೆ.

# ಡಿ.7 ರಂದು ಉಸ್ಮಾನಾಬಾದನಲ್ಲಿ ಲಿಂಗಾಯತ ಮಹರ್ಯಾಲಿ: ಚನ್ನಬಸವಾನಂದ ಶ್ರೀಗಳು.

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಅ. 14- ಡಿಸೆಂಬರ್ 7ರಂದು ಮಹಾರಾಷ್ಟ್ರದ ಉಸ್ಮಾನಾಬಾದನಲ್ಲಿ ಅಖಿಲ ಭಾರತ ಲಿಂಗಾಯತ ಸಮನ್ವಯ ಸಮಿತಿ ವತಿಯಿಂದ ಲಿಂಗಾಯತ ಮಹರ್ಯಾಲಿ ಆಯೋಜಿಸಲಾಗಿದೆ ಎಂದು ಬೆಂಗಳೂರಿನ ಶ್ರೀ ಚನ್ನಬಸವೇಶ್ವರ ಜ್ಞಾನಪೀಠದ ಪೀಠಾಧ್ಯಕ್ಷರಾದ ಪೂಜ್ಯ ಶ್ರೀ ಜಗದ್ಗುರು ಡಾ. ಚನ್ನಬಸವಾನಂದ ಸ್ವಾಮೀಜಿ ನುಡಿದರು.

ಇಲ್ಲಿನ ಸಸ್ತಾಪುರ ಬಂಗ್ಲಾ ಸಮೀಪದ ಎಂ.ಎಂ. ಬೇಗ್ ಸಭಾಮಂಟಪದಲ್ಲಿ ರಾಷ್ಟ್ರೀಯ ಬಸವದಳ, ಲಿಂಗಾಯತ ಧರ್ಮ ಮಹಾಸಭಾ ಹಾಗೂ ಕ್ರಾಂತಿಗಂಗೋತ್ರಿ ಅಕ್ಕನಾಗಲಾಂಬಿಕಾ ಮಹಿಳಾ ಗಣ ಇವರುಗಳ ಸಂಯುಕ್ತಾಶ್ರಯದಲ್ಲಿ ನಡೆಯುತ್ತಿರುವ 4ನೇ ಸ್ವಾಭಿಮಾನಿ ಕಲ್ಯಾಣ ಪರ್ವದ ಸಮಾರೋಪ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದರು. ಪೂಜ್ಯ ಶ್ರೀ ಸದ್ಗುರು ಮಾತೆ ಸತ್ಯಾದೇವಿ ಬಸವ ಮಂಟಪ ಬೀದರ ಅವರು ಮಾತನಾಡಿ ಗುರು ಭಕ್ತಿಯನ್ನು ಮೈಗೂಡಿಸಿಕೊಂಡು ಶರಣರಿಗೆ ಶರಣಾರ್ಥಿ ಸಲ್ಲಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ಸಂಘಟನೆ ಒಡೆಯದಂತೆ ಕಾರ್ಯಕರ್ತರು ನೋಡಿಕೊಳ್ಳಬೇಕು. ರಾಷ್ಟ್ರೀಯ ಬಸವ ದಳ ಇಂದಿಗೂ ಗಟ್ಟಿಯಾಗಿರಲು ಧರ್ಮಶ್ರದ್ಧೆ, ತತ್ವನಿಷ್ಠೆ ಹಾಗೂ ಲಿಂಗಾನಂದ ಸ್ವಾಮೀಜಿ ಮತ್ತು ಮಾತೆ ಮಹಾದೇವಿ ತಾಯಿ ಪರಿಶ್ರಮ ಕಾರಣವಾಗಿದೆ. ಸಂಘಟನೆಗೆ ಇನ್ನೂ ಹೆಚ್ಚಿನ ಒತ್ತುಕೊಡಿ ಎಂದರು.

ಚಿಕ್ಕಮುನವಳ್ಳಿಯ ಪೂಜ್ಯ ಶ್ರೀ ಶಿವಪುತ್ರ ಸ್ವಾಮೀಜಿ ಮಾತನಾಡಿ ದೇವನೊಬ್ಬನೇ ತಂದೆ ಮನುರೆಲ್ಲರೂ ಒಂದೇ ಎನ್ನುವ ಶರಣರ ಸಂದೇಶ ಎಲ್ಲಾ ಧರ್ಮಿಯರಿಗೂ ಅನ್ವಯಿಸುತ್ತದೆ. ಏಕದೇವೋಪಾಸಕರಾಗಿ ಬದುಕಬೇಕೆಂದು ಕರೆ ನೀಡಿದರು. ಬಸವ ಕಲ್ಯಾಣದ ಮಣ್ಣು ಹಣೆಗೆ ಹಚ್ಚಿಕೊಂಡರೆ ಬದುಕು ಸಾರ್ಥಕವಾಗುತ್ತದೆ. ಅವಿಮುಕ್ತಕ್ಷೇತ್ರ ಬಸವಕಲ್ಯಾಣವನ್ನು ಅಂತರಾಷ್ಟ್ರೀಯ ತಾಣವಾಗಿ ಮಾಡಲು ಎಲ್ಲರೂ ಪ್ರಯತ್ನಿಸಬೇಕೆಂದರು.

ಖಾದ್ರಿ ವೆಲ್ಫೇರ್ ಸೊಸೈಟಿ ಧಾರವಾಡದ ಉಪಾಧ್ಯಕ್ಷರಾದ ಪೂಜ್ಯ ಸೂಫಿ ಸಂತ ಪಿರೆ ತರಿಕತ್ ಅಬ್ದುಲ್ ರಜಾಕ್ ಮಾತನಾಡಿ ಚನ್ನಬಸವಾನಂದ ಸ್ವಾಮೀಜಿ ಕಾರ್ಯ ಶ್ಲಾಘನೀಯವಾಗಿದೆ. ಅವರ ಹೋರಾಟಕ್ಕೆ ಎಲ್ಲರೂ ಸಹಕರಿಸಬೇಕೆಂದು ತಿಳಿಸಿದರು.

ನಿವೃತ್ತ ಕೃಷಿ ವಿವಿ ಡೀನ್ ಡಾ.ಸುರೇಶ ಪಾಟೀಲ ಧ್ವಜಾರೋಹಣ ನೆರವೇರಿಸಿದರು. ಅಕ್ಕನಾಗಲಾಂಬಿಕಾ ಮಹಿಳಾ ಗಣದ ಶರಣೆಯರಿಂದ ಬಸವ ಪೂಜೆ ನೆರವೇರಿತು. ಕು. ವಚನ ಸಾಹಿತ್ಯ ಅವರಿಂದ ವಚನ ನೃತ್ಯ ಜರುಗಿತು. ಕಾರ್ಯಕ್ರಮದಲ್ಲಿ ಪೂಜ್ಯಶ್ರೀ ಬಸವಪ್ರಭು ಸ್ವಾಮೀಜಿ ಕಲ್ಯಾಣಮಹಾಮನೆಗುಣತೀರ್ಥವಾಡಿ, ಪೂಜ್ಯ ಮಾತೆ ಶಾಂತಾದೇವಿ, ಭಾಗ್ಯವಂತಿ ಮಾತಾಜಿ ಬೀದರ, ಪ್ರಮುಖರಾದ ಎಸ್.ದಿವಾಕರ್, ಬಸವರಾಜ ಪಾಟೀಲ ಶಿವಪುರ, ಶಶಿಕುಮಾರ ಪಾಟೀಲ, ಬಸವರಾಜ ಪಾಟೀಲ ಚಿಕ್ಕಪೇಟ, ಶಿವರಾಜ ಪಾಟೀಲ ಅತಿವಾಳ, ಶಿವಶರಣಪ್ಪ ಪಾಟೀಲ ಹಾರೂರಗೇರಿ, ಕೆ.ಶರಣಪ್ರಸಾದ ಬೆಳಗಾವಿ, ಜೈರಾಜಹತ್ತಿ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಶಿವಕುಮಾರ ಪಾರ ನಿರೂಪಿಸಿದರು. ಜೊತಿ ಕಟಾಳೆ ಸ್ವಾಗತಿಸಿದರು. ದೀಲಿಪ ಬಿರಾದಾರ ವಂದಿಸಿದರು.



ಸ್ವಾಭಿಮಾನಿದಲ್ಲಿ ಆರು ನಿರ್ಣಯಗಳನ್ನು ಕೈಗೊಳ್ಳಲಾಯಿತು.

ಡಿ. 7ರಂದು ಮಹಾರಾಷ್ಟ್ರದ ಉಸ್ಮಾನಾಬಾದನಲ್ಲಿ ಲಿಂಗಾಯತ ಮಹರ್ಯಾಲಿ ಆಯೋಜನೆ.

2026ರ ಜನವರಿ ತಿಂಗಳಲ್ಲಿ ಲಿಂಗಾಯತ ಧರ್ಮಕ್ಕೆ ಮಾನ್ಯತೆಗಾಗಿ ದಿಲ್ಲಿ ಚಲೋ ಆಯೋಜನೆ.

ನ್ಯಾ. ಗವಾಯಿ ಮೇಲೆ ಶೂ ಎಸೆದ ವಕೀಲ ಕಿಶೋರ ಮೇಲೆ ಕಾನೂನು ಕ್ರಮ ಕೈಗೊಳ್ಳದಿದ್ದರೆ ಹೋರಾಟ.

ಕನ್ನೇರಿ ಮಠದ ಸ್ವಾಮಿಗಳು ಬಸವ ತತ್ವದ ಸ್ವಾಮಿಗಳಿಗೆ ಅವಹೇಳನ ಮಾಡಿದ್ದು ಖಂಡಿಸುತ್ತೇವೆ

ನವೆಂಬರ್ ನಿಂದ ಕರ್ನಾಟಕ ಮಹಾರಾಷ್ಟ್ರದ ತೆಲಂಗಾಣ, ಆಂಧ್ರಪ್ರದೇಶ, ತಮಿಳುನಾಡು ಸೇರಿದಂತೆ ಆರು ರಾಜ್ಯಗಳಲ್ಲಿ ಲಿಂಗಾಯತ ಧರ್ಮ ಜಾಗೃತಿ ಅಭಿಯಾನ ಆರಂಭಿಸುವುದು ಮತ್ತು

ನವೆಂಬರ್ 14ಕ್ಕೆ ದುಬೈನಲ್ಲಿ ಚನ್ನಬಸವೇಶ್ವರ ಜಯಂತಿ ಆಚರಣೆ ಮಾಡುವ ನಿರ್ಣಯಗಳನ್ನು ಕೈಗೊಳ್ಳಲಾಯಿತು. ಈ ನಿರ್ಣಯಗಳನ್ನು ಪೂಜ್ಯ ಶ್ರೀ ಜಗದ್ಗುರು ಡಾ. ಚನ್ನಬಸವಾನಂದ ಸ್ವಾಮೀಜಿ ಮಂಡಿಸಿದರು. ಸಭೀಕರು ಕರತಾಡನ ಮೂಲಕ ಒಪ್ಪಿಗೆ ಸೂಚಿಸಿದರು.



ಬಸವಕಲ್ಯಾಣ :- ಇಲ್ಲಿನ ಸಮಿಪ ಇರುವ ಎಂ. ಎಂ. ಬೇಗ ಸಭಾ ಮಂಟಪದಲ್ಲಿ 4 ನೇ ಸ್ವಾಭಿಮಾನ ಕಲ್ಯಾಣ ಪರ್ವದ ಸಮಾರೋಪ ಸಮಾರಂಭದ ದಿವಸ ಷಟಸ್ಥಲ ಧ್ವಜಾರೋಹಣ ನೆರವೇರಿಸಲಾಯಿತು. ಈ ಸಂದರ್ಭದಲ್ಲಿ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಅಪರಿಚಿತ ಮೃತ ವೃದ್ಧನ ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.14-ಕಲಬುರಗಿ ರೈಲು ನಿಲ್ದಾಣದ ವೇದಿಕೆ ನಂ.2ರ ರೈಲ್ವೆ ಹಳಿಯ ಮಧ್ಯದಲ್ಲಿ ಸುಮಾರು 60 ರಿಂದ 65 ವರ್ಷದ ಅಪರಿಚಿತ ವೃದ್ಧನು ಮೃತಪಟ್ಟಿದ್ದು, ಈವರೆಗೆ ಈ ಮೃತ ವೃದ್ಧನ ವಾರಸುದಾರರು ಯಾರೂ ಪತ್ತೆಯಾಗಿರುವುದಿಲ್ಲ ಎಂದು ವಾಡಿ (ಜಂ) ರೈಲ್ವೆ ಪೊಲೀಸ್ ಠಾಣೆಯ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೃತ ವೃದ್ಧನು 5.1 ಅಡಿ ಎತ್ತರ ಇದ್ದು, ಗೋಧಿ ಮೈಬಣ್ಣ, ದುಂಡವಾದ ಮುಖ, ಉದ್ದನೆಯ ಮೂಗು, ತಲೆಯಲ್ಲಿ ಕಪ್ಪು ಮತ್ತು ಬಿಳಿ ಮಿಶ್ರಿತ ಬಣ್ಣದ ಕೂದಲು, ಮುಖದ ಮೇಲೆ ಬಿಳಿ ಬಣ್ಣದ ಸಣ್ಣ ಕರುಚಲು ಗಡ್ಡಾ ಮತ್ತು ಮೀಸೆ ಬಿಟ್ಟಿದ್ದು, ಸಾಧಾರಣ ಮೈಕಟ್ಟು ಹೊಂದಿರುತ್ತಾರೆ. ಹರಿದು ಹೋದ ಬಿಳಿ ಬಣ್ಣದ ತೋಳಿನ ಶರ್ಟ್, ನೀಲಿ ಮತ್ತು ಹಸಿರು ಮಿಶ್ರಿತ ಇರುವ ಚಕ್ಸ್ ಲುಂಗಿ, ಬಲಗೈಯಲ್ಲಿ ಕೆಂಪು ಮತ್ತು ಹಳದಿ ಬಣ್ಣದ ದಾರ, ಹಸಿರು ಬಣ್ಣದ ಅಂಡರವೇಯರ್ ಮತ್ತು ಸೊಂಟದಲ್ಲಿ ಬಿಳಿ ಬಣ್ಣದ ಉಡದಾರ ಇರುತ್ತದೆ. ಈ ಮೃತ ವ್ಯಕ್ತಿಯ ವಾರಸುದಾರರು ಯಾರಾದರೂ ಇದ್ದಲ್ಲಿ ರೈಲ್ವೆ ಪೊಲೀಸ್ ಕಂಟ್ರೋಲ್ ರೂಮ್ ಸಂಖ್ಯೆ 080-22871291, ವಾಡಿ ರೈಲ್ವೆ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ 08476-202244 ಹಾಗೂ ರೈಲ್ವೆ ಪೊಲೀಸ್ ಠಾಣೆಯ ಮೊಬೈಲ್ ಸಂಖ್ಯೆ 9480802132ಗೆ ಸಂಪರ್ಕಿಸಲು ಕೋರಿದೆ.

# ಅಡುಗೆ ಸಿಬ್ಬಂದಿ ಸುರಕ್ಷತೆಗೆ ಆದ್ಯತೆ ಕೊಡಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ. ಪಟ್ಟಣದ ಸಂಗಮೇಶ್ವರ ಪ್ರೌಢಶಾಲೆಯಲ್ಲಿ ಮಂಗಳವಾರ ತಾಲೂಕುಮಟ್ಟದ ಅಡುಗೆಸಹಾಯಕರ ತರಬೇತಿ ನಡೆಸಲಾಯಿತು. ತರಬೇತಿ ಶಿಬಿರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅಗ್ನಿಶಾಮಕ ಠಾಣೆ ಅಧಿಕಾರಿ ದತ್ತಾತ್ರೇಯ ಅಡುಗೆ ಸಿಬ್ಬಂದಿಯವರು ಮೊದಲು ಸುರಕ್ಷತೆಗೆ ಆದ್ಯತೆ ನೀಡಬೇಕು, ನಂತರ ಸ್ವಚ್ಛತೆ ಮತ್ತು ರುಚಿಗೆ ಮಹತ್ವ ಕೊಡಿ. ತಾವು ಸುರಕ್ಷಿತವಾಗಿದ್ದರೆ ಎಲ್ಲವೂ ವ್ಯವಸ್ಥಿತವಾಗಿರುತ್ತದೆ ಎಂದು ಹೇಳಿದರು. ಅಕ್ಷರ ದಾಸೋಹ ಯೋಜನೆಯ ಸಹಾಯಕ ನಿರ್ದೇಶಕ ಮಲ್ಲಿನಾಥ ಸಜ್ಜನ್ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಆರೋಗ್ಯ ಇಲಾಖೆಯ ಚಂದ್ರಶೇಖರ್ ಮಾತನಾಡಿ, ಅಡುಗೆ ಸಿಬ್ಬಂದಿಗಳು ಆರೋಗ್ಯಕ್ಕೆ ಹೆಚ್ಚು ಕಾಳಜಿ ವಹಿಸಬೇಕು, ಬಿಸಿಯೂಟದ ಅಡುಗೆ ಸಿಬ್ಬಂದಿ ಆರೋಗ್ಯವಾಗಿದ್ದರೆ ಶಾಲೆಯ ಎಲ್ಲ ಮಕ್ಕಳೂ ಆರೋಗ್ಯವಾಗಿರುವರು ಎಂದು ಹೇಳಿದರು. ಸಭೆಯಲ್ಲಿ ಸಂಗಮೇಶ್ವರ ಪ್ರೌಢಶಾಲೆ ಮುಖ್ಯ ಗುರು ವಿಶ್ವನಾಥ್ ಪಕ್ಕ ಹಾಗೂ ಅವರ ಸಹ ಸಿಬ್ಬಂದಿಯವರು ಉಪಸ್ಥಿತದ್ದರು. ತರಬೇತಿಗೆ ತಾಲೂಕಿನ ವಿವಿಧ ಸರಕಾರಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಾಲೆ ಮುಖ್ಯ ಅಡಿಗೆರವರು ಹಾಗೂ ಸಹಾಯಕ ಅಡಿಗೆಯವರು ಭಾಗವಹಿಸಿದ್ದರು. ಇದೇವೇಳೆ ಅಡುಗೆ ಸಿಬ್ಬಂದಿಗಳಿಗೆ ಆರೋಗ್ಯ, ಶಾಲಾ ಸ್ವಚ್ಛತೆ, ಅಡುಗೆ ಮಾಡುವ ರೀತಿ ಹಾಗೂ ಅಗ್ನಿ ಅವಘಡಗಳು ಸಂಭವಿಸದ ರೀತಿಯಲ್ಲಿ ಮುನ್ನೆಚ್ಚರಿಕೆ ಕ್ರಮಗಳು. ಆಹಾರಧಾನ್ಯ ಸುರಕ್ಷತೆ ಬಗ್ಗೆ ತಿಳಿಸಲಾಯಿತು.

# ಪ್ರತಿಯೊಬ್ಬ ವ್ಯಕ್ತಿಗೂ ಮಾನಸಿಕ ಆರೋಗ್ಯ ರಕ್ಷಣೆ, ಚಿಕಿತ್ಸೆ ಪಡೆಯುವ ಹಕ್ಕಿದೆ




ಯಾದಗಿರಿ:ಅ.14:ಸಾಮಾನ್ಯವಾಗಿ ಎಲ್ಲರೂಒತ್ತಡವನ್ನುಹಾಗೂಜೀವನದ ಸವಾಲುಗಳನ್ನು ಸಮರ್ಥವಾಗಿ ನಿರ್ವಹಿಸುವ ಸಾಮರ್ಥ್ಯವನ್ನು ಹೊಂದಿರುತ್ತಾರೆ.ಆದರೆಒತ್ತಡವನ್ನು ಮತ್ತುಸವಾಲುಗಳನ್ನುಎದುರಿಸದೆ ಖಿನ್ನತೆ ಮತ್ತು ಆತಂಕದಂತಹ ಮಾನಸಿಕಆರೋಗ್ಯಸಮಸ್ಯೆಗಳನ್ನು ಬೆಳೆಸಿಕೊಳ್ಳುವ ಸಾಧ್ಯತೆ ಇರುತ್ತದೆ. ಈಗಮಾನಸಿಕಅಸ್ವಸ್ಥೆಗಳಿಗೆಚಿಕಿತ್ಸೆಯು ಎಲ್ಲಾ ಕಡೆ ಲಭ್ಯಯಿರುತ್ತದೆ ಮತ್ತು ಪ್ರತಿಯೊಬ್ಬ ವ್ಯಕ್ತಿಗೂ ಮಾನಸಿಕ ಆರೋಗ್ಯ ರಕ್ಷಣೆ ಮತ್ತು ಚಿಕಿತ್ಸೆಯನ್ನು ಪಡೆಯುವ ಹಕ್ಕಿದೆ ಎಂದು ಯಾದಗಿರಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀ ಮರುಳಸಿದ್ದಾರಾಧ್ಯ ಎಚ್.ಜೆ ಅವರು ಹೇಳಿದರು.

ಯಾದಗಿರಿ ನಗರದ ಜಿಲ್ಲಾ ನ್ಯಾಯಾಲಯದ ಸಭಾಂಗಣದಲ್ಲಿ 2025ರ ಅಕ್ಟೋಬರ್ 10 ರಂದು ಇತ್ತೀಚಿನ ನಡೆದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ವಕೀಲರ ಸಂಘ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಂಯುಕ್ತಾಶ್ರಯದಲ್ಲಿ "ವಿಶ್ವ ಮಾನಸಿಕ ಆರೋಗ್ಯ ದಿನಾಚಾರಣೆ" ಅಂಗವಾಗಿ ಕಾನೂನು ಅರಿವು ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಾಮಾನ್ಯವಾಗಿ ಎಲ್ಲರೂ ಒತ್ತಡವನ್ನು ಹಾಗೂ ಜೀವನದ ಸವಾಲುಗಳನ್ನು ಸಮರ್ಥವಾಗಿ ನಿರ್ವಹಿಸುವ ಸಾಮರ್ಥ್ಯವನ್ನು ಹೊಂದಿರುತ್ತಾರೆ. ಆದರೆ ಒತ್ತಡವನ್ನು ಮತ್ತು ಸವಾಲುಗಳನ್ನು ಎದುರಿಸದೆ ಖಿನ್ನತೆ ಮತ್ತು ಆತಂಕದಂತಹ ಮಾನಸಿಕ ಆರೋಗ್ಯ ಸಮಸ್ಯೆಗಳನ್ನು ಬೆಳೆಸಿಕೊಳ್ಳುವ ಸಾಧ್ಯತೆ ಇರುತ್ತದೆ ಎಂದರು.

ಭಾರತದಲ್ಲಿ ಆತ್ಮಹತ್ಯೆ ಮಾಡಿಕೊಳ್ಳುವ ಪ್ರಕರಣಗಳು ಹೆಚ್ಚಾಗುತ್ತಿವೆ ಅದರಲ್ಲೂ ಮಕ್ಕಳು ಹಾಗೂ ಯುವಕರು ಭಯ, ಕೋಪ ಮತ್ತು ದುಃಖ ಮುಂತಾದ ಎಲ್ಲಾ ಮಾನವನ ಭಾವನೆಗಳನ್ನು ಎದುರಿಸಲು ಪರದಾಡುತ್ತಿದ್ದು, ಮತ್ತು ಆತಂಕದಿಂದಾಗಿ ಮತ್ತು ಸಮಸ್ಯೆ ಎದುರಿಸದೆ ಆತ್ಮಹತ್ಯೆಗೆ ಶರಣಾಗುತ್ತಿದ್ದಾರೆ. ಮನುಷ್ಯ ದಿನೆ ದಿನೆ ತನ್ನ ಜೀವನದ ಮಾನಸಿಕ ಸಮತೋಲನಗಳನ್ನುಕಳೆದುಕೊಳ್ಳುತ್ತಿದ್ದಾನೆ ಎಂದು ತಿಳಿಸಿದರು.

ಕುಟುಂಬದಲ್ಲಿನ ಸಣ್ಣ ಪುಟ್ಟ ಸಮಸ್ಯೆಗಳನ್ನು ಸಹ ಎದುರಿಸಲಾಗದ ಸಂದರ್ಭಗಳನ್ನು ತಂದುಕೊಳ್ಳುತ್ತಿದ್ದಾರೆ ಎಂದು ಮಾನ್ಯರು ತಮ್ಮ ಸರಳ ಭಾಷೆಯಲ್ಲಿ ನೆರೆದ ಸಭಿಕರಿಗೆ ಮನದಟ್ಟುವಂತೆ ವಿಶ್ಲೇಷಿಸಿದರು. ಗಂಡು ಮತ್ತು ಹೆಣ್ಣು ಎಂಬ ಭೇದ ಭಾವನೆಯನ್ನು ಕಾಣದೆ ಮಾನಸಿಕ ರೋಗ ಎಲ್ಲರಲ್ಲಿಯೂ ಕಾಡುತ್ತಿರುತ್ತಾದೆ. ಆದ್ದರಿಂದ ಯಾರೂ ಸಹಾ ತಮ್ಮ ಜೀವನದಲ್ಲಿಯ ಪ್ರತಿಯೊಂದು ಸಮಸ್ಯೆಯಿಂದ ಒತ್ತಡ, ಅತಂಕ ಮತ್ತು ಖಿನ್ನತೆಯಿಂದ ಬಳಲದೆ ಅವುಗಳಿಂದ ಹೊರ ಬರಬೇಕಾಗಿದೆ. ಮಾನಸಿಕ ಸಮಸ್ಯೆಗಳಿಗೆ ಸಹಾಯವಾಣಿ ಸಂ.14416 ಕರೆ ಮಾಡಿ ತಮ್ಮ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದ ಮನೋ ವೈದ್ಯರಾದ ಅಮಿತ್ ಕುಮಾರ ಅವರು ಮಾತನಾಡಿ, ಮಾನಸಿಕ ಆರೋಗ್ಯ ಎಂದರೇನು ಎಂಬುದರ ಬಗ್ಗೆ ವಿಶ್ಲೇಷಿಸಿದರು. ಗಂಡು ಅಥವಾ ಹೆಣ್ಣು ತಮ್ಮ ಸಾಮರ್ಥ್ಯಗಳನ್ನು ಅರಿತುಕೊಂಡು ಜೀವನ ನಡೆಸಬೇಕು ಎಂದು ತಿಳಿಸಿದರು.

ಈಗ ಮಾನಸಿಕ ಅಸ್ವಸ್ಥೆಗಳಿಗೆ ಚಿಕಿತ್ಸೆಯು ಎಲ್ಲಾ ಕಡೆ ಲಭ್ಯಯಿರುತ್ತದೆ ಮತ್ತು ಪ್ರತಿಯೊಬ್ಬ ವ್ಯಕ್ತಿಗೂ ಮಾನಸಿಕ ಆರೋಗ್ಯ ರಕ್ಷಣೆ ಮತ್ತು ಚಿಕಿತ್ಸೆಯನ್ನು ಪಡೆಯುವ ಹಕ್ಕಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿಕೊಂಡಿದ್ದ, ವಕೀಲರು ಮತ್ತು ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಶ್ರೀ ಆರ್.ಎಸ್.ಪಾಟೀಲ್ ಅವರು ಮಾತನಾಡಿ, ಎಲ್ಲರೂ ತಮ್ಮ ದೈಹಿಕ ಮತ್ತು ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಬೇಕೆಂದು ತಿಳಿಸಿದರು.

ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಶ್ರೀ ಮರೆಯಪ್ಪ ಕಾರ್ಯಕ್ರಮ ನಿರೂಪಿಸಿದರು. ಪ್ರಾರ್ಥನ ಗೀತೆ ವಕೀಲರಾದ ಶ್ರೀ ಆನಂದ ಕುಮಾರ ಸ್ವಾಮಿ ಹಾಡಿದರು. ವಕೀಲರಾದ ಶ್ರೀ ಭೀಮಾಶಂಕರ್ ಆಶನಾಳ್ ವಂದಿಸಿದರು.

ಈ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾಗಿ ಯಾದಗಿರಿ ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರನ್ಯಾಯಾಧೀಶರು ಶ್ರೀ.ಎ.ಈರಣ್ಣ, ಯಾದಗಿರಿ ಹಿರಿಯ ಸಿವಿಲ್ ನ್ಯಾಯಾಧೀಶರು ಶ್ರೀ ಬಾಳಾಸಾಹೇಬ್ ವಡವಾಡೆ, ಯಾದಗಿರಿ ಪ್ರಧಾನ ಸಿವಿಲ್ ಜೆ.ಎಮ್.ಎಫ್.ಸಿ ನ್ಯಾಯಾಧೀಶರು ಶ್ರೀ ಅರುಣ್ ಚೌಗುಲೆ, ಯಾದಗಿರಿ ಹೆಚ್ಚುವರಿ ಸಿವಿಲ್ ಜೆ..ಎಂ.ಎಫ್.ಸಿ ನ್ಯಾಯಾಧೀಶರು ಶ್ರೀ ರಾಹುಲ್ ರಾವ್, ನ್ಯಾಯಾಲಯದ ಹಿರಿಯ ಹಾಗೂ ಕಿರಿಯ ವಕೀಲರು, ನ್ಯಾಯಾಲಯದ ಸಿಬಂಧಿಗಳು ಹಾಗೂ ಕಕ್ಷಿದಾರರು ಉಪಸ್ಥಿತರಿದ್ದರು.

# ಅ.16 ರಂದು ಜಿಲ್ಲಾ ಮಟ್ಟದ ಯುವ ಜನೋತ್ಸವ

ಯಾದಗಿರಿ : ಅ 14 : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯಾದಗಿರಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಸರ್ವ ಯುವಕ ಯುವತಿ ಸಂಘಗಳು ಸಂಯುಕ್ತಾಶ್ರಯದಲ್ಲಿ ಯಾದಗಿರಿ ಜಿಲ್ಲಾ ಮಟ್ಟದ ಯುವ ಜನೋತ್ಸವ ಕಾರ್ಯಕ್ರಮವನ್ನು ಯಾದಗಿರಿ ನಗರದ ಚಿತ್ತಾಪೂರ ರಸ್ತೆ ಸರಕಾರಿ ಪ್ರಥಮ ದರ್ಜೆ ಪದವಿ ಮಹಾವಿದ್ಯಾಲಯ ಸಭಾಂಗಣದಲ್ಲಿ 2025ರ ಅಕ್ಟೋಬರ್ 16ರ ಗುರುವಾರ ರಂದು ಬೆಳಿಗ್ಗೆ 10.30 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ ಅವರು ಜಿಲ್ಲಾ ಮಟ್ಟದ ಯುವ ಜನೋತ್ಸವ ಕಾರ್ಯಕ್ರಮ ಉದ್ಘಾಟಿಸುವರು.

ಕರ್ನಾಟಕ ವಿಧಾನ ಪರಿಷತ್ತು ವಿರೋಧ ಪಕ್ಷದ ನಾಯಕ ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ, ಹಾಗೂ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಶ್ರೀ ಬಾಬುರಾವ್ ಚಿಂಚನಸೂರು ಅವರ ಘನ ಉಪಸ್ಥಿತಿಯಲ್ಲಿ ನೆರವೇರಲಿದೆ.

ಯಾದಗಿರಿ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಅವರು ಕಾರ್ಯಕ್ರಮ ಅಧ್ಯಕ್ಷತೆ ವಹಿಸುವರು.

ರಾಯಚೂರು ಲೋಕಸಭಾ ಸದಸ್ಯರು ಶ್ರೀ ಜಿ.ಕುಮಾರ ನಾಯಕ ಹಾಗೂ ಕಲಬುರಗಿ ಲೋಕಸಭಾ ಸದಸ್ಯರು ಶ್ರೀ ರಾಧಾಕೃಷ್ಣದೊಡ್ಡಮನಿ ಮುಖ್ಯ ಅತಿಥಿಗಳಾಗಿ ಆಗಮಿಸುವರು.

ವಿಧಾನ ಪರಿಷತ್ತು ಸದಸ್ಯರು ಶ್ರೀ ಬಿ.ಜಿ.ಪಾಟೀಲ್, ಡಾ.ಚಂದ್ರಶೇಖರ ಬಿ.ಪಾಟೀಲ್, ಶ್ರೀ ಶಶೀಲ್ ಜಿ.ನಮೋಶಿ, ಗುರುಮಠಕಲ್ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಶರಣಗೌಡ ಕಂದಕೂರ, ಸುರಪುರ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ರಾಜಾ ವೇಣುಗೋಪಾಲ ನಾಯಕ, ಯಾದಗಿರಿ ನಗರಸಭೆ ಅಧ್ಯಕ್ಷರು ಕು.ಲಲಿತಾ ಅನಪೂರ, ಯಾದಗಿರಿ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರು ಶ್ರೀ ಬಾಬುರಾವ್ ಕಾಡ್ಲೂರ,

ವಿಶೇಷ ಆಹ್ವಾನಿತರಾಗಿ ಪಾಲ್ಗೊಳ್ಳುವರು.

ನಗರಸಭೆ ಸರ್ವಸದಸ್ಯರು, ಯಾದಗಿರಿ ಸಾರ್ವಜನಿಕರು ಕ್ರೀಡಾಪಟುಗಳು, ಯುವಕ ಯುವತಿ ಸಂಘಗಳು, ಸಮಸ್ತ ನಾಗರಿಕರು ಹಾಗೂ ಮಾಧ್ಯಮದವರು, ಸರ್ವರಿಗೂ ಆದರದ ಸುಸ್ವಾಗತವನ್ನು ಯಾದಗಿರಿ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀ ಲವೀಶ್ ಒರಡಿಯಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ್ ಶಂಕರ, ಯಾದಗಿರಿ ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಶ್ರೀ ರಾಜು ಬಾವಿಹಳ್ಳಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧ ಬೇಡಿಕೆಗಾಗಿ ಸಚಿವ ಸೋಮಣ್ಣ ಅವರಿಗೆ ಕಂದಕೂರು ಮನವಿ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ತಮ್ಮ ಮತಕ್ಷೇತ್ರವಾದ ಗುರುಮಠಕಲ್ ವ್ಯಾಪ್ತಿಯ ರೈತರ ಜೀವನಾಡಿಯಾಗಿರುವ ಹತ್ತಿಕುಣಿ ಮತ್ತು ಸೌದಾಗರ ಡ್ಯಾಂ ಮೂಲಕ ಕೊನೆ ಭಾಗದ ರೈತರ ಹೊಲಗಳಿಗೆ ನೀರು ಹರಿಸಲು ಬೇಕಾದ ಕಾಮಗಾರಿ ಕೈಗೊಳ್ಳಲು ಕೇಂದ್ರ ಸರ್ಕಾರದಿಂದ ವಿಶೇಷ ಅನುದಾನ ಮಂಜೂರು ಮಾಡಿ

ಸುವಂತೆಯೇ ಶಾಸಕ ಶರಣಗೌಡ ಕಂದಕೂರು ಅವರು ಕೇಂದ್ರದ ಜಲಶಕ್ತಿ ಹಾಗೂ ರೈಲ್ವೆ ಖಾತೆಗಳ ರಾಜ್ಯ ಸಚಿವ ವಿ.ಸೋಮಣ್ಣ ಅವರಿಗೆ ಮನವಿ ಮಾಡಿದರು. ಸೋಮವಾರ ಬೆಂಗಳೂರಿನಲ್ಲಿ ಸಚಿವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ ಅವರು, ಸಾವಿರಾರು ಎಕರೆ ಜಮೀನು ಈ ಎರಡು ಡ್ಯಾಂಗಳ ವ್ಯಾಪ್ತಿಗೆ ಬರುತ್ತದೆ. ಆದರೇ ಸಕಾಲಕ್ಕೇ

ನೀರಿನ ಕೊರತೆ ಬಹಳ ವರ್ಷಗಳಿಂದ ಕಾಡುತ್ತಿದೆ. ಹೀಗಾಗಿ ಸಾಕಷ್ಟು ಬೆಳೆ ಬೆಳೆಯಬೇಕಾದ ರೈತರಿಗೆ ಅನುಕೂಲವಾಗಲು ಬೇಕಾದ ಅನುದಾನ ಮಂಜೂರು ಮಾಡುವಂತೆಯೇ ಮನವಿಯಲ್ಲಿ ವಿವರಿಸಿದ್ದಾರೆ.

ಕಡೆಚೂರ್ – ಬಾಡಿಯಾಳ ಕೈಗಾರಿಕಾ ಪ್ರದೇಶದಲ್ಲಿನ ರೈಲ್ವೆ ಕೋಚ್ ತಯಾರಿಕೆ ಹೆಚ್ಚಿಸಿ ನಮ್ಮ ಭಾಗದ ಯುವಕರಿಗೆ ಉದ್ಯೋಗ ನೀಡಬೇಕು. ತಾಂತ್ರಿಕ ಶಿಕ್ಷಣ ಸೇರಿದಂತೆಯೇ ವಿವಿಧ ಪದವಿಗಳನ್ನು ಮತ್ತು ಪಿಯುಸಿ ಪಾಸಾದ ಸಾವಿರಾರು ಯುವಕರು ಕೆಲಸವಿಲ್ಲದೇ ತೊಂದರೆಯಲ್ಲಿದ್ದಾರೆ. ಅನಿವಾರ್ಯವಾಗಿ ಗುಳೆಹೋಗುವಂತಹ ಸ್ಥಿತಿ ಇದೆ. ಕಾರಣ, ನಮ್ಮಲ್ಲಿಯೇ ಇರುವ ರೈಲ್ವೆ ಕೋಚ್ ತಯಾರಿಕೆ ಹೆಚ್ಚಿಸಿದರೇ ಅನೇಕರಿಗೆ ಕೆಲಸ ಸಿಗುತ್ತದೆ. ಜನರು ಕೂಡಾ



> ಹತ್ತಿಕುಣಿ, ಸೌದಾಗರ ಡ್ಯಾಂ ವ್ಯಾಪ್ತಿಯ ರೈತರ ಹೊಲಗಳಿಗೆ ನೀರುಣಿಸುವ
> ಕಾಮಗಾರಿಗಾಗಿ ಅನುದಾನ ನೀಡಲು ಮನವಿ.

ಇಲ್ಲಿಯೇ ಉಳಿದು ಇದರ ಜೊತೆಗೆ ಕೃಷಿ ಕಾಯಕ ಮಾಡಿಕೊಂಡು ಬದುಕಬಹುದು. ಅದಕ್ಕಾಗಿ ಈ ಬೇಡಿಕೆ ಕಾರ್ಯರೂಪಕ್ಕೆ ತರಬೇಕೆಂದು ಶಾಸಕರು ಸಚಿವರಿಗೆ ವಿವರಿಸಿದರು. ಈ ಭಾಗದ

ಜನರ ಬಹುದಿನಗಳ ಬೇಡಿಕೆಯಾಗಿರುವ ನಿಲ್ಲಿಸಲಾದ ಕಲಬುರಗಿ – ರಾಯಚೂರು ಇಂಟರ್ ಸಿಟಿ ರೈಲ್ವೆ ಪುನರ್ ಆರಂಭಿಸಬೇಕೆಂದು ಸಚಿವರಿಗೆ ಸಲ್ಲಿಸಿದ ಮನವಿಯಲ್ಲಿ ಶಾಸಕ ಶರಣಗೌಡ ಕಂದಕೂರು ಕೋರಿದ್ದಾರೆ. ಈ ಬೇಡಿಕೆಗಳ ಮನವಿ ಸ್ವೀಕರಿಸಿದ ಸಚಿವರು, ಸಕರಾತ್ಮಕವಾಗಿ ಸ್ಪಂಧಿಸಿದರು.

# ಕಡೆಚೂರು ನಲ್ಲಿ ಇನ್ ಕ್ಯುಬೇಶನ್ ಕಾರ್ಯಾಗಾರ ಯಶಸ್ವಿ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ, ಅ.14: ಜಿಲ್ಲೆಯ ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳಿಗೆ (ಎಂ.ಎಸ್.ಎಂ.ಇ) ಉತ್ತೇಜನ ನೀಡುವ ಹಾಗೂ ಹೊಸ ಉದ್ಯಮಶೀಲರನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ, ಜಿಲ್ಲಾ ಕೈಗಾರಿಕಾ ಕೇಂದ್ರ, ಯಾದಗಿರಿ ಮತ್ತು ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ(ಜಿಟಿಟಿಸಿ), ಕಡೇಚೂರು ಇವರ ಸಂಯುಕ್ತಾಶ್ರಯದಲ್ಲಿ ಇಂದು ಒಂದು ದಿನದ "ಇನ್‌ಕ್ಯುಬೇಶನ್ ಕಾರ್ಯಾಗಾರ ಮತ್ತು ವ್ಯಾಪಾರ ಮೇಳ"ವನ್ನು ಯಶಸ್ವಿಯಾಗಿ ಆಯೋಜಿಸಲಾಯಿತು.

ನಗರದ ಕಡೇಚೂರು ಕೈಗಾರಿಕಾ ಪ್ರದೇಶದಲ್ಲಿರುವ ಜಿಟಿಟಿಸಿ ಕೇಂದ್ರದಲ್ಲಿ ನಡೆದ ಈ ಕಾರ್ಯಾಗಾರವನ್ನು ಜಿಟಿಟಿಸಿ ಪ್ರಾಚಾರ್ಯರಾದ ಶ್ರೀ ರವಿಚಂದ್ರ ಅವರು ಜ್ಯೋತಿ ಬೆಳಗಿಸುವುದರ ಮೂಲಕ ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು, "ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಉದ್ಯಮಗಳು ಉಳಿದು ಬೆಳೆಯಲು ಹೊಸ ತಂತ್ರಜ್ಞಾನ ಮತ್ತು ಕೌಶಲ್ಯ ಅತ್ಯಗತ್ಯ. ಜಿಟಿಟಿಸಿ ಕೇಂದ್ರವು ಉದ್ಯಮಶೀಲರಿಗೆ ಬೇಕಾದ ತಾಂತ್ರಿಕ ತರಬೇತಿ ಮತ್ತು ಬೆಂಬಲ ನೀಡಲು ಸದಾ ಸಿದ್ಧವಿದೆ" ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರಾದ ಶ್ರೀ ಬಿ. ಸತೀಶ್ ಕುಮಾರ್ ಅವರು ಮಾತನಾಡಿ, "ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಖಂಚಿಕ (ಖಚುಟಿರಿ ಚಿಟಿಜ ಒಭಿ–ಭಿಜಟಜಡಿಚಿಣುಟಿರಿ ಒಖಒಇಕಜಡಿ–ಜಿಖಡಿಟಚಿಟಿಭಿಜ) ಯೋಜನೆಯು ದೇಶದ ಎಂ.ಎಸ್.ಎಂ.ಇ ಗಳಿಗೆ ಹೊಸ ಚೈತನ್ಯ ನೀಡಲಿದೆ. ಈ ಯೋಜನೆಯಡಿಯಲ್ಲಿ ಸಿಗುವ ಸೌಲಭ್ಯಗಳು, ಸಾಲ ಮತು ಮಾರುಕಟ್ಟೆ ಅವಕಾಶಗಳನ್ನು ಜಿಲ್ಲೆಯ ಉದ್ಯಮಿಗಳು ಸದುಪಯೋಗಪಡಿಸಿಕೊಳ್ಳಬೇಕು. ಇನ್‌ಕ್ಯುಬೇಶನ್ ಕಾರ್ಯಕ್ರಮಗಳು ಹೊಸ ಆಲೋಚನೆಗಳಿಗೆ ವೇದಿಕೆ ಕಲ್ಪಿಸುತ್ತವೆ" ಎಂದು ಕರೆ ನೀಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಕಲಬುರಗಿಯ ಶರಣಬಸವ ವಿಶ್ವವಿದ್ಯಾಲಯದ ಬಿಸಿನೆಸ್ ಇನ್‌ಕ್ಯುಬೇಶನ್ ವಿಭಾಗದ ಮುಖ್ಯಸ್ಥರಾದ ಡಾ. ಬಸಂತಿ ಗಂಟಿ ಅವರು, "ಒಂದು ಯಶಸ್ವಿ ಉದ್ಯಮಕ್ಕೆ ಕೇವಲ ಹಣ ಹೂಡಿಕೆ ಮುಖ್ಯವಲ್ಲ, ಬದಲಾಗಿ ಹೊಸ ಆವಿಷ್ಕಾರ, ಸರಿಯಾದ ಮಾರ್ಗದರ್ಶನ ಮತ್ತು ವ್ಯವಹಾರದ ಜ್ಞಾನವೂ ಅಷ್ಟೇ ಮುಖ್ಯ. ಇನ್‌ಕ್ಯುಬೇಶನ್ ಕೇಂದ್ರಗಳು ಈ ಎಲ್ಲಾ ಅಂಶಗಳನ್ನು ಒಂದೇ ಸೂರಿನಡಿ ಒದಗಿಸುತ್ತವೆ" ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಜಿಲ್ಲಾ ಪಂಚಾಯತ್‌ನ ಉಪ ನಿರ್ದೇಶಕ (ಗ್ರಾಮೀಣ) ಶ್ರೀ ಮುಕುಂದ್ ರೆಡ್ಡಿ ಪಾಟೀಲ್ ಅವರು ಮಾತನಾಡಿ, ಗ್ರಾಮೀಣ ಯುವಕರು ಇಂತಹ ಕಾರ್ಯಾಗಾರಗಳ ಪ್ರಯೋಜನ ಪಡೆದು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಜಿಲ್ಲಾ ಕೈಗಾರಿಕಾ ಕೇಂದ್ರದ ಸಹಾಯಕ ನಿರ್ದೇಶಕರಾದ ಶ್ರೀ ಎಂ.ಸಲೀಮ್ ಮತ್ತು ಶ್ರೀ ಮಹೇಶ್ ಅವರು ಕಾರ್ಯಕ್ರಮದ ಆಯೋಜನೆಯ ನೇತೃತ್ವ ವಹಿಸಿದ್ದರು. ಕಾಲೇಜಿನ ಸಿಬ್ಬಂದಿ ವರ್ಗದವರಾದ ವೆಂಕಟ್ ರಾವ್ ಪ್ರಿಯಾಂಕಾ, ಪ್ರದೀಪ್ ಕುಮಾರ್, ಹನುಮಂತ, ಶ್ರೀನಿವಾಸ, ಸುಮ, ಅಕ್ಷಯ್, ಅಂಕುಶ, ಹುಸೇನ್ ,ಬಾಲಾಜಿ, ಸುಕಮುನಿ ಮತ್ತು ಮಂಜುನಾಥ್, ಹಾಗೂ ತರಬೇತಿ ನಿರತ ವಿದ್ಯಾರ್ಥಿಗಳು ಕಾರ್ಯಾಗಾರದ ಪ್ರಯೋಜನ ಪಡೆದರು. ಶ್ರೀ ವೆಂಕಟರಾವ್

# ವಿದ್ಯುತ್ ಸಮಸ್ಯೆ ಆಗದಂತೆ ಸೇವೆ ಒದಗಿಸಲು ಜೆಸ್ಕಾಂ ಬದ್ಧ: ಭಾಜಪೇಯಿ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಜನ ಸಾಮಾನ್ಯರಿಗೆ ಹಾಗೂ ರೈತರಿಗೆ ಯಾವುದೇ ರೀತಿಯ ವಿದ್ಯುತ್ ಸಂಪರ್ಕದ ಸಮಸ್ಯೆ ಆಗದಂತೆ ನೋಡಿಕೊಳ್ಳುವ ಜವಾಬ್ದಾರಿ ನಮ್ಮ ಜೆಸ್ಕಾಂ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ನಿಭಾಯಿಸುವ ಶಕ್ತಿ ಹೊಂದಿದ್ದಾರೆ ಎಂದು ಕಲ್ಯಾಣ ಕರ್ನಾಟಕ ವಿದ್ಯುತ್ ಸರಬರಾಜು ಕಂಪನಿ ನಿಯಮಿತ ವಿಭಾಗದ ಮುಖ್ಯ ವ್ಯವಸ್ಥಾಪಕ ಕೃಷ್ಣ ಭಾಜಪೇಯಿ ಹೇಳಿದರು.

ಮಂಗಳವಾರ ಯಾದಗಿರಿ ಭೀಮಾ ನದಿಯ ಪ್ರವಾಹಕ್ಕೆ ವಿದ್ಯುತ್ ಸಂಪರ್ಕ ಸ್ಥಗಿತಗೊಂಡಿದ್ದ ಸಮೀಪದ ಬೀರನಾಳ ಹಾಗೂ ನಾಯ್ಕಲ್ ಗ್ರಾಮಗಳಿಗೆ ಭೇಟಿ ನೀಡಿ ಸ್ಥಳೀಯ ರೈತರ ಅಹವಾಲುಗಳನ್ನು ಸ್ವೀಕರಿಸಿದರು.

ಈ ವೇಳೆ ವಿದ್ಯುತ್ ಸಮಸ್ಯೆಗೆ ಶೀಘ್ರ ಸ್ಪಂದಿಸಿ ದುರಸ್ತಿ ಕಾರ್ಯ ಮಾಡಿದ ಜೆಸ್ಕಾಂ ಅಧಿಕಾರಿಗಳಿಗೆ ಸಿಬ್ಬಂದಿಗಳಿಗೆ ಸ್ಥಳೀಯ ರೈತಾಪಿ ವರ್ಗದ ಜನರು ಮೆಚ್ಚುಗೆಯಿಂದ ಹರ್ಷ ವ್ಯಕ್ತಪಡಿಸಿ ವಿಶೇಷವಾಗಿ ಗೌರವಿಸಿ ಸನ್ಮಾನಿಸಿದರು. ಸನ್ಮಾನ ಸ್ವೀಕರಿಸಿ ಮಾತನಾಡಿದ ಭಾಜಪೇಯಿ ಅವರು,

ಭೀಮಾ ನದಿಯ ಪ್ರವಾಹಕ್ಕೆ ನದಿ ತೀರದ ಗ್ರಾಮೀಣ ಪ್ರದೇಶದ



ಬಡ ರೈತ ಜನಸಾಮಾನ್ಯರಿಗೆ ಸೂಕ್ತ ವಿದ್ಯುತ್ ಸಂಪರ್ಕ ಒದಗಿಸಿ ಕೊಡಲು ಜೆಸ್ಕಾಂ ಸಿಬ್ಬಂದಿಗಳು ಹಗಲು ರಾತ್ರಿ ಎನ್ನದೆ ಕಾರ್ಯ ಮಾಡುತ್ತಿದ್ದಾರೆ ರೈತಾಪಿ ವರ್ಗದ ಜನರಿಗೆ ಉತ್ತಮ ಸೇವೆ ನೀಡುತ್ತೇವೆ ಎಂದು ಹೇಳಿದರು. ಪ್ರವಾಹ ಹೊಂದಿದ ಜನರಿಗೆ ನಮ್ಮ ಜೆಸ್ಕಾಂ ಅಧಿಕಾರಿವೃಂದ ವಿದ್ಯುತ್ ಸಂಪರ್ಕದ ಉಪಕರಣಗಳನ್ನು ಪೂರ್ವದಲ್ಲೇ ಕ್ರೂಢೀಕರಿಸಿಕೊಂಡು ನಿಗದಿತ ಕಾರ್ಯ ಸಮಯಕ್ಕಿಂತ ಪೂರ್ವದಲ್ಲಿ ತಯಾರಿಮಾಡಿಕೊಂಡು ಸೂಕ್ತ ವಿದ್ಯುತ್ ಸೌಲಭ್ಯ ಒದಗಿಸಲು

ಸದಾ ಮುಂದೆ ಇರುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಕಾರ್ಯನಿರ್ವಾಹಕ ಅಭಿಯಂತರ ರಾಘವೇಂದ್ರ ಡಿ ಮಾತನಾಡಿ,

ಭೀಮಾ ನದಿಯ ತೀರದ ಗ್ರಾಮಗಳಲ್ಲಿ ಪ್ರವಾಹದಿಂದ ವಿದ್ಯುತ್ ಸಂಪರ್ಕ ಕಂಬಗಳು ಟ್ರಾನ್ಸ್ ಫಾರಂಗಳ ನೆಲಕಚ್ಚಿದ್ದು, ನೂತನ ಕಂಬ ಹಾಗೂ ಟ್ರಾನ್ಸ್ ಫಾರಂಗಳನ್ನು ಅಳವಡಿಸುವ ಕಾರ್ಯ ಜೆಸ್ಕಾಂ ವತಿಯಿಂದ ನಡೆಯುತ್ತಿದೆ ಅತೀ ಶೀಘ್ರದಲ್ಲೇ ದುರಸ್ಥಿ ಕಾರ್ಯ ಮುಗಿದು ಸೂಕ್ತ ವಿದ್ಯುತ್ ವ್ಯವಸ್ಥೆ ಕಲ್ಪಿಸಿಕೊಡಲಾಗುವುದು ಎಂದರು.

ಈ ಸಂಧರ್ಭದಲ್ಲಿ ಸಹಾಯಕ ಕಾರ್ಯ ನಿರ್ವಹಕಾರುಗಳಾದ ಸಂಜೀವ್ ಕುಮಾರ್,ಎಖಿ ರಾಠೋಡ್,ಮಾರ್ಕಂಡೇಶ್ವರ, ಶಾಖಾಧಿಕಾರಿ ಥಾಮಸ್, ವಿದ್ಯುತ್ ಗುತ್ತಿಗೆದಾರ ಮೊಹಮ್ಮದ್ ರಫೀಕ್, ಸೇರಿದಂತೆ ಇನ್ನಿತರ ಜೆಸ್ಕಾಂ ಸಿಬ್ಬಂದಿಗಳು ಇದ್ದರು.

# ಬ್ಯಾಂಕ ಎ.ಟಿ.ಎಮ್‌ಗಳ ಸಮಗ್ರ ಭದ್ರತೆ, ಸುರಕ್ಷತೆಗೆ ಸಿಸಿಟಿವಿ, ಸೆಕ್ಯೂರಿಟಿ ಗಾರ್ಡ್ಗಳ ನೇಮಕಕ್ಕೆ ಸೂಚನೆ

ಯಾದಗಿರಿ : ಅ 14 : ಯಾದಗಿರಿ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಬ್ಯಾಂಕುಗಳ ವ್ಯವಸ್ಥಾಪಕರು ಮತ್ತು ಸಿಬ್ಬಂದಿಗಳನ್ನು ಬರಮಾಡಿಕೊಂಡು ಬ್ಯಾಂಕ ಹಾಗೂ ಎ.ಟಿ.ಎಮ್‌ಗಳ ಸಮಗ್ರ ಭದ್ರತೆ, ಸುರಕ್ಷತೆಗೆ ಸಂಬಂಧಿಸಿದಂತೆ ಆರ್.ಬಿ.ಐ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡಬೇಕು ಎಂದು ಯಾದಗಿರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ ಶಂಕರ ಅವರು ಹೇಳಿದರು. ನಗರದ ಯಾದಗಿರಿ ಜಿಲ್ಲಾ ಪೊಲೀಸ್ ಕಾರ್ಯಾಲಯದಲ್ಲಿ 2025ರ ಅಕ್ಟೋಬರ್ 13 ರಂದು ಇತ್ತೀಚಿನ ನಡೆದ ಜಿಲ್ಲಾಡಳಿತ, ಜಿಲ್ಲಾ ಪೊಲೀಸ್ ಇಲಾಖೆ ಸಂಯೋಗದೊಂದಿಗೆ ಬ್ಯಾಂಕ್ ಹಾಗೂ ಎ.ಟಿ.ಎಮ್‌ಗಳ ಸಮಗ್ರ



ಭದ್ರತೆ ಸುರಕ್ಷತೆ ವಿಷಯಗಳ ಕುರಿತು ಅವರು ಮಾತನಾಡಿದರು. ಬ್ಯಾಂಕ್ ಹಾಗೂ ಎ.ಟಿ.ಎಮ್‌ಗಳ ಸಮಗ್ರ ಭದ್ರತೆ, ಸುರಕ್ಷತೆಗೆ ಸಂಬಂಧಿಸಿದಂತೆ ಆರ್.ಬಿ.ಐ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡುವಂತೆ ಹಾಗೂ ಕಡ್ಡಾಯವಾಗಿ ಜಿಲ್ಲೆಯ ಎಲ್ಲಾ ಬ್ಯಾಂಕ್ ಮತ್ತು ಎ.ಟಿ.ಎಮ್‌ಗಳಿಗೆ ಸಿಸಿಟಿವಿ ಹಾಗೂ ಸೆಕ್ಯೂರಿಟಿ ಗಾರ್ಡ್ಗಳು ನೇಮಕ ಮಾಡಬೇಕು ಎಂದು ತಿಳಿಸಿದರು. ಬ್ಯಾಂಕ್ ವ್ಯವಸ್ಥಾಪಕರುಗಳಿಗೆ ನಿರ್ದೇಶನ ನೀಡಲಾಯಿತು, ಹಾಗೂ ಬ್ಯಾಂಕ್ ಎ.ಟಿ.ಎಮ್‌ಗಳ ಭದ್ರತೆ ಹಾಗೂ ಸುರಕ್ಷತೆಗೆ ಸಂಬಂಧಿಸಿದ ಇನ್ನಿತರ ವಿಷಯಗಳ ಕುರಿತು ಚರ್ಚಿಸಲಾಯಿತು ಎಂದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್, ಯಾದಗಿರಿ ಲೀಡ್ ಬ್ಯಾಂಕ್ ವ್ಯವಸ್ಥಾಪಕರು, ಯಾದಗಿರಿ ಸೊಸೈಟಿ ಸಂಘಗಳ ಉಪ ನಿಬಂಧಕರು, ಬ್ಯಾಂಕ ವ್ಯವಸ್ಥಾಪಕರು, ಸಿಬ್ಬಂದಿಗಳು, ಇನ್ನಿತರರು ಉಪಸ್ಥಿತರಿದ್ದರು.

# ‘ಹೆಣ್ಣುಮಕ್ಕಳ’ ಪ್ರಗತಿ ‘ರಾಷ್ಟ್ರದ’ ಪ್ರಗತಿ : ಸುರೇಖಾ

ಮಲ್ಲಮ್ಮ ನುಡಿ ವಾರ್ತೆ

ಸುರಪುರ : ಅ.14:ಕೆಂಭಾವಿ "ಪಟ್ಟಣ"ದಲ್ಲಿ

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿಯಮಿತ ಬೆಂಗಳೂರು, ಯಾದಗಿರಿ ಜಿಲ್ಲಾ ಸಹಕಾರ ಒಕ್ಕೂಟ ನಿಯಮಿತ ಯಾದಗಿರಿ, ಹಾಗೂ ಸಹೋದರಿ ನಿವೇದಿತ ಮಹಿಳಾ ಸಹಕಾರ ಸಂಘ ನಿಯಮಿತ ಕೆಂಭಾವಿ ಇವರ ಸಂಯುಕ್ತಾಶ್ರಯದಲ್ಲಿ ಮಹಿಳಾ ಕ್ಲಸ್ಟರ್ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಮಹಿಳಾ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷೆ ಶ್ರೀಮತಿ ಸುರೇಖಾ ಜಾಗೀರ್ದಾರ್ ಅವರು ಮಾತನಾಡಿ,

"ಹೆಣ್ಣುಮಕ್ಕಳು ಇಂದಿನ ಯುಗದಲ್ಲಿ ಯಾವುದೇ ಕ್ಷೇತ್ರದಲ್ಲೂ ಹಿಂದೆ ಉಳಿಯಬಾರದು. ಸರ್ಕಾರದಿಂದ ದೊರೆಯುತ್ತಿರುವ ಅನೇಕ ಸವಲತ್ತುಗಳು, ಕಲ್ಯಾಣಯೋಜನೆಗಳು ಹಾಗೂ ಪ್ರೋತ್ಸಾಹಧನಗಳನ್ನು ಸದುಪಯೋಗಪಡಿಸಿಕೊಂಡು ಸಾವಲಂಭಿಯಾಗಿ, ಆತ್ಮವಿಶ್ವಾಸದಿಂದ ಬದುಕಬೇಕು," ಎಂದು ಹೇಳಿದರು.



ಅವರು ಮುಂದುವರಿದು,

"ಹೆಣ್ಣುಮಕ್ಕಳು ಶಿಕ್ಷಣ, ಉದ್ಯೋಗ ಹಾಗೂ ಸಣ್ಣಮಟ್ಟದ ಉದ್ಯಮಗಳಲ್ಲಿ ತೊಡಗಿ ಜೀವನದಲ್ಲಿ ಯಶಸ್ಸು ಸಾಧಿಸಬೇಕು. ತರಬೇತಿಗಳು ಅವರ ಜೀವನದಲ್ಲಿ ಕೌಶಲ್ಯವೃದ್ಧಿಗೆ ಹಾಗೂ ಆತ್ಮವಿಶ್ವಾಸಕ್ಕೆ ದಾರಿ ತೋರಿಸುತ್ತವೆ," ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ಶ್ರೀಮತಿ ಮಧು ಬಂದೆ ಸಂಘದ ಅಧ್ಯಕ್ಷರು ವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ಶ್ರೀಮತಿ ಶಾಂತಾಬಾಯಿ ಪಾಟೀಲ್ (ಸಂಘದ ನಿರ್ದೇಶಕಿ), ಶ್ರೀಮತಿ ಸುನಿತಾ ಪಾಟೀಲ್ (ಮೇಲ್ವಿಚಾರಕಿ, ಕೆಂಭಾವಿ), ಹಾಗೂ ವಿಶೇಷ ಉಪನ್ಯಾಸಕರಾಗಿ ಶ್ರೀಮತಿ ಸವಿತಾ ಪಾಲ್ಕಿ ಉಪಸ್ಥಿತರಿದ್ದರು.

ಕಾರ್ಯಕ್ರಮದ ವ್ಯವಸ್ಥಾಪಕರಾಗಿ ಸುರಪುರ,

ಸ್ವಾಗತ ಮತ್ತು ನಿರೂಪಣೆಯನ್ನು ಶ್ರೀಮತಿ ಸುಜಾತ ಮಠ (ಜಿಲ್ಲಾ ಸಹಕಾರಿ ಶಿಕ್ಷಕಿ, ಯಾದಗಿರಿ) ನಿರ್ವಹಿಸಿದರು.

ವಂದನಾರ್ಪಣೆ ಶ್ರೀಮತಿ ಲೀಲಾವತಿ (ಸಂಘದ ಕಾರ್ಯದರ್ಶಿ) ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ಮಹಿಳೆಯರು ವಿವಿಧ ಕೌಶಲ್ಯಾಭಿವೃದ್ಧಿ ವಿಚಾರಗಳಲ್ಲಿ ತರಬೇತಿ ಪಡೆದರು ಹಾಗೂ ಆತ್ಮವಿಶ್ವಾಸದಿಂದ ಮುಂದೆ ಸಾಗುವ ನಿಶ್ಚಯ ವ್ಯಕ್ತಪಡಿಸಿದರು.

# ಅ.30ರ ವರೆಗೆ ಫಲಾನುಭವಿ ಆಧಾರಿತ ಯೋಜನೆಗಳ ಅವಧಿ ವಿಸ್ತರಣೆ


ಯಾದಗಿರಿ : ಅ 14 : ಫಲಾನುಭವಿ ಆಧಾರಿತ ಯೋಜನೆಗಳ ಅವಧಿ ವಿಸ್ತರಿಸಿದೆ ಎಂದು ಯಾದಗಿರಿ ಜಿಲ್ಲಾ ಅಂಗವಿಕಲರ ಮತ್ತು ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಶರಣಪ್ಪ ಅವರು ತಿಳಿಸಿದ್ದಾರೆ. ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಫಲಾನುಭವಿ ಆಧಾರಿತ ಯೋಜನೆಗಳಾದ ಆಧಾರ ಯೋಜನೆ, ಸಾಧನ ಸಲಕರಣೆ ಯೋಜನೆ, ಬ್ಯಾಟರಿ ಆಪರೇಟರ್ ವ್ಹೀಲ್‌ಚೇರ್, ವೈದ್ಯಕೀಯ ಮರುಪಾವತಿ, ಶಿಶು ಪಾಲನಾ ಭತ್ಯೆ, ಪ್ರೋತ್ಸಾಹ ಧನ, ಯಂತ್ರಚಾಲಿತ ದ್ವಿಚಕ್ರ ವಾಹನ, ಹೊಲಿಗೆ ಯಂತ್ರ, ಟಾಕಿಂಗ್ ಲ್ಯಾಪ್ ಟಾಪ್, ನಿರುದ್ಯೋಗ ಭತ್ಯೆ, ಬ್ರೈಲ್ ಕಿಟ್ ಯೋಜನೆ, ಸಾಧನೆ, ಪ್ರತಿಭೆ ಯೋಜನೆಗಳಿಗೆ ಅರ್ಜಿ ಅವಧಿಯನ್ನು 2025ರ ಅಕ್ಟೋಬರ್ 30ರ ವರೆಗೆ ವಿಸ್ತರಿಸಿದೆ. ಅರ್ಜಿ ಸಲ್ಲಿಸದೇ ಇರುವ ವಿಶೇಷಚೇತನರು ಕೊನೆಯ ದಿನಾಂಕದಂದು ಕಾಯದೇ ಸೇವಾ ಸಿಂಧು ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ವಿಕಲಚೇತನರ ಸಹಾಯವಾಣಿ ಕೇಂದ್ರ ದೂ.ಸಂ.08473 253531, ತಾಲೂಕ ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತ ಯಾದಗಿರಿ ಭೀಮರಾಯ ಮೊ.ನಂ.9742865853, ಸುರಪುರ ಮಾಳಪ್ಪ ಮೊ.ನಂ.9945373847, ಶಹಾಪೂರ ನಾಗರಾಜ ಮೊ.ನಂ.8296107462ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಗೆ ಸೇರಲು ಹೊಸದಾಗಿ ಅರ್ಜಿ ಸಲ್ಲಿಸಿ: ಪಾಲಿಕೆ ಆಯುಕ್ತ ಜುಬಿನ್ ಮೊಹಪಾತ್ರ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 14–ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಸಿದ್ದಪಡಿಸಲಾಗುತ್ತಿರುವ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಹೆಸರು ಇರುವ ಮತದಾರರು ಸಹ ನಮೂನೆ 19ರಲ್ಲಿ ಹೊಸದಾಗಿ ಅರ್ಜಿ ಸಲ್ಲಿಸಬೇಕಿರುತ್ತದೆ ಎಂದು ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಸಹಾಯಕ ಮತದಾರರ ನೋಂದಣಾಧಿಕಾರಿಗಳು ಆಗಿರುವ ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬೀನ್ ಮಹೋಪಾತ್ರ ಅವರು ತಿಳಿಸಿದ್ದಾರೆ.

ಅರ್ಜಿ ನಮೂನೆ 19ರಲ್ಲಿ ಅರ್ಜಿ ಸ್ವೀಕರಿಸಲು 2025ರ ನವಂಬರ್ 06 ಕೊನೆಯ ದಿನಾಂಕ ಆಗಿರುತ್ತದೆ. 2025ರ ನವಂಬರ್ 25ರಂದು ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುವುದು. ಹಕ್ಕು ಮತ್ತು ಆಕ್ಷೇಪಣೆಗಳಿಗೆ 2025ರ ನವಂಬರ್ 25ರಿಂದ 2025ರ ಡಿಸೆಂಬರ್ 10ರವರೆಗೆ ಕಾಲಾವಕಾಶ ನೀಡಲಾಗಿದೆ. 2025ರ ಡಿಸೆಂಬರ್ 30ರಂದು ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಣೆ ಮಾಡಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ. ಭಾರತದ ಪ್ರಜೇಯಾಗಿರುವ ಆಯಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸಾಮಾನ್ಯ ನಿವಾಸಿಯಾಗಿರುವ ಹಾಗೂ ದಿನಾಂಕ:01–11–2025 ಮೊದಲ 6 ವರ್ಷಗಳ ಅವಧಿಯಲ್ಲಿ ಸೆಕೆಂಡರಿ ದರ್ಜೆಯಲ್ಲಿ ಪ್ರೌಢ ಶಾಲೆಗಿಂತ ಕಡಿಮೆ ಇಲ್ಲದ ನಿರ್ಧಿಷ್ಟಪಡಿಸಿದಂತಹ ರಾಜ್ಯದೊಳಗಿನ ಯಾವುದೇ ಸರ್ಕಾರದಿಂದ ಮಾನ್ಯತೆ ಪಡೆದ ಶೈಕ್ಷಣಿಕ ಸಂಸ್ಥೆಗಳಲ್ಲಿ ಒಟ್ಟು ಕನಿಷ್ಟ 03 ವರ್ಷ ಬೋಧನಾ ವೃತ್ತಿಯಲ್ಲಿ ನಿರತವಾಗಿರುವ ಪ್ರತಿಯೊಬ್ಬ ವ್ಯಕ್ತಿಯು ಮತದಾರರ ಪಟ್ಟಿಯಲ್ಲಿ ತನ್ನ ಹೆಸರನ್ನು ಸೇರಿಸಲು ಅರ್ಹನಾಗಿರುತ್ತಾನೆ. ಹಾಗೆ ನಿರ್ಧಷ್ಟಪಡಿಸಿದ ಶೈಕ್ಷಣಿಕ ಸಂಸ್ಥೆಗಳ ಪಟ್ಟಿಯು ಮೊದಲನೇ ಅನುಸೂಚಿಯಲ್ಲಿ ತಿಳಿಸಲಾದ ಅಧಿಕಾರಿಗಳ ಬಳಿ ಇರುತ್ತದೆ.



ಖುದ್ದಾಗಿ ಅಥವಾ ಅಂಚೆ ಮುಖಾಂತರ ಒಟ್ಟಾರೆಯಾಗಿ ಸಲ್ಲಿಸಿದ ಅರ್ಜಿಗಳನ್ನು ಮತದಾರರ ನೋಂದಣಾಧಿಕಾರಿಯು ಮತದಾರರ ಪಟ್ಟಿಯಲ್ಲಿ ಸೇರ್ಪಡೆಗಾಗಿ ಪರಿಗಣಿಸತಕ್ಕದ್ದಲ್ಲ. ಆದರೆ ಸಂಸ್ಥೆಯ ಮುಖ್ಯಸ್ಥರು ಅವರ ಸಿಬ್ಬಂದಿಯವರ ಎಲ್ಲಾ ಅರ್ಜಿಗಳನ್ನು ಒಟ್ಟಾಗಿ ಮತದಾರರ ನೋಂದಣಾಧಿಕಾರಿಗಳಿಗೆ ಕಳುಹಿಸಬಹುದು. ಒಂದೇ ಕುಟಂಬದ ಎಲ್ಲಾ ಸದಸ್ಯರು ನಮೂನೆ 19 ರಲ್ಲಿ ಅರ್ಜಿಗಳನ್ನು ಕುಟುಂಬ ಯಾವುದಾದರೂ ಸದಸ್ಯರು ಸಲ್ಲಿಸಬಹುದು ಹಾಗೂ ಪ್ರತಿ ಸದಸ್ಯನಿಗೆ ಸಂಬಧಿಸಿದಂತೆ ಸಂಸ್ಥೆ ಮೂಲ ಪ್ರಮಾಣ ಪತ್ರಗಳನ್ನು ಒದಗಿಸಿ. ಪ್ರಮಾಣ ಪತ್ರವನ್ನು ಪರಿಶೀಲಿಸಿಕೊಳ್ಳಬೇಕು. ಅರ್ಜಿಯಲ್ಲಿನ ತಪ್ಪು ಅಥವಾ ತಪ್ಪೆಂದು ಅವನು ತಿಳಿದಿರುವ ಅಥವಾ ನಂಬುವಂತಹ ಅಥವಾ ಸತ್ಯವೆಂದು ನಂಬಲಾಗದಿರುವಂತಹ ಹೇಳಿಕೆಗಳನ್ನು ಅಥವಾ ಘೋಷಣೆಗಳನ್ನು ಮಾಡುವ ಯಾವುದೇ ವ್ಯಕ್ತಿಯನ್ನು ಪ್ರಜಾಪ್ರಾತಿನಿಧ್ಯ ಅಧಿನಿಯಮ 1950 ರ 31 ನೇ ಪ್ರಕರಣದ ಮೇರೆಗೆ ಶಿಕ್ಷೆಗೆ ಗುರಿಪಡಿಸಲಾಗುವುದು. ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಬಯಸುವ ಪ್ರತಿಯೊಬ್ಬರು ಅರ್ಜಿ ನಮೂನೆ 19 ನ್ನು ಭರ್ತಿಮಾಡಿ ಅದರೊಂದಿಗೆ ಶೈಕ್ಷಣಿಕ ಸಂಸ್ಥೆಗಳಲ್ಲಿ 1ನೇ ನವಂಬರ್ 2025ಕ್ಕೆ ಮೊದಲು 6 ವರ್ಷಗಳ ಅವಧಿಯಲ್ಲಿ ಒಟ್ಟು ಕನಿಷ್ಟ 3 ವರ್ಷ ಭೋದನಾ ವೃತ್ತಿಯಲ್ಲಿ ನಿತವಾಗಿರುವ ಬಗ್ಗೆ ಶೈಕ್ಷಣಿಕ ಸಂಸ್ಥೆಗಳಿಂದ ಅನುಬಂಧ –2 ರಲ್ಲಿ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.

ಯಾವುದೇ ವ್ಯಕ್ತಿ ಅಂಚೆ ಮೂಲಕ ಮತದಾರರ ನೋಂದಣಾಧಿಕಾರಿಗಳು, ಸಹಾಯಕ ಮತದಾರರ ನೋಂದಣಾಧಿಕಾರಿಗಳು. ಗೊತ್ತುಪಡಿಸಿದ ಅಧಿಕಾರಿಗೆ ಸಲ್ಲಿಸಿದಲ್ಲಿ ಅಂತಹ ಅರ್ಜಿದಾರರಿಗೆ ಗೊತ್ತುಪಡಿಸಿದ ಅಧಿಕಾರಿಯು ವಿಚಾರಣೆಗೆ ಹಾಜರಾಗಲು ನೋಟಿಸ್ ನೀಡುತ್ತಾರೆ. ವಿಚಾರಣೆಗೆ ಹಾಜರಾಗದೇ ಅಥವಾ ದಾಖಲೆಗಳನ್ನು ಹಾಜರುಪಡಿಸದಿದ್ದಲ್ಲಿ ಅರ್ಜಿಗಳು ತಿರಸ್ಕೃತಗೊಳ್ಳುತ್ತವೆ. ಬಲ್ಕ (ಗುಚ್ಛಗಳಲ್ಲಿ) ಅರ್ಜಿಗಳನ್ನು ಸ್ವೀಕರಿಸುವುದಿಲ್ಲ.

ಕರ್ನಾಟಕ ಈಶಾನ್ಯ ಶಿಕ್ಷಕರ ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳು ಇದ್ದಲ್ಲಿ ಮತದಾರರ ನೊಂದಣಾಧಿಕಾರಿಗಳು ಹಾಗೂ ಸಹಾಯಕ ಮತದಾರರ ನೊಂದಣಾಧಿಕಾರಿಗಳ ಕಚೇರಿಯಲ್ಲಿ ಮತ್ತು ಸಂಬಂಧಪಟ್ಟ ವಿಧಾನಸಭಾ ಮತಕ್ಷೇತ್ರದ ಸಹಾಯಕ ಮತದಾರರ ನೊಂದಣಾಧಿಕಾರಿಗಳ ಕಾರ್ಯಾಲಯದಲ್ಲಿ (ಮಹಾನಗರ ಪಾಲಿಕೆ ಹಾಗೂ ತಹಸೀಲ ಕಾರ್ಯಾಲಯದಲ್ಲಿ) ನಿಗದಿಪಡಿಸಿದ ಕಾಲಮಿತಿಯೊಳಗ ಸಲ್ಲಿಸತಕ್ಕದ್ದು. ಅರ್ಹ ಶಿಕ್ಷಕರು ಹೆಚ್ಚಿನ ಆಸಕ್ತಿ ವಹಿಸಿ ಈ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಂಡು ಸುಭದ್ರ ಹಾಗೂ ಪ್ರಜಾಪ್ರಭುತ್ರ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕೆಂದು ಅರ್ಹ ಮತದಾರರಲ್ಲಿ ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬೀನ್ ಮಹೋಪಾತ್ರ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ತಾಲ್ಲೂಕು ಮಟ್ಟದ ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ನೀಡಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 14–: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಮಾಧ್ಯಮ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ತಾಲ್ಲೂಕು ಮಟ್ಟದ ಪತ್ರಕರ್ತರು ತಮ್ಮ ವೃತ್ತಿ ನಿರತ ಚಟುವಟಿಕೆಗಳ ಸಂಬಂಧ ತಮ್ಮ ಜಿಲ್ಲಾದ್ಯಂತ ಉಚಿತವಾಗಿ ಸಂಚರಿಸಲು ಅನುಕೂಲವಾಗುವಂತೆ ಉಚಿತ ಬಸ್ ಪಾಸ್ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪತ್ರಕರ್ತರು ತಾವು ಕಾರ್ಯನಿರ್ವಹಿಸುತ್ತಿರುವ ಮಾಧ್ಯಮ ಸಂಸ್ಥೆಗಳಿಂದ ಸೇವಾ ಪ್ರಮಾಣಪತ್ರ, ಶಿಫಾರಸ್ಸು ಪತ್ರ ಮತ್ತು 11 ತಿಂಗಳುಗಳ ವೇತನಪತ್ರ (ಲೈನೇಜ್/ಸಂಭಾವನೆ/ಕಮೀಷನ್ ಪಡೆದಿರುವ ದಾಖಲೆ)ಗಳನ್ನು ಅಥವಾ ವೇತನ ಜಮಾ ಆಗಿರುವ ಮಾಹಿತಿ ಇರುವಂತಹ ಬ್ಯಾಂಕ್ ಸ್ಟೇಟಮೆಂಟ್ ಲಗತ್ತಿಸಿ "ಸೇವಾಸಿಂಧು" ಪೋರ್ಟಲ್ (ಃಣಣಠಿ://ಜತಿಘಿಟಿಜಱಣ. ಇಚಿಡಿಟಿಚಿಣಚಿಞಚಿ.ರಾತಿ.ಟಿ) ಮೂಲಕ ಆನ್ ಲೈನ್ ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು.

ಆನ್ ಲೈನ್ ನಲ್ಲಿ ಸಲ್ಲಿಸಲಾದ ಅರ್ಜಿ ಮತ್ತು ಲಗತ್ತಿಸಲಾಗಿರುವ ದಾಖಲೆಗಳ ಒಂದು ಪ್ರತಿಯನ್ನು ಆಯಾ ಜಿಲ್ಲೆಯ ವಾರ್ತಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು.

ಸ್ವೀಕೃತ ಅರ್ಜಿಗಳನ್ನು ಆಯ್ಕೆ ಸಮಿತಿಯ ಸಭೆಯಲ್ಲಿ ಪರಿಶೀಲಿಸಿ ಬಸ್ ಪಾಸ್ ಮಂಜೂರು ಮಾಡಲಾಗುತ್ತದೆ.

ರಾಜ್ಯದ ಎಲ್ಲ ತಾಲ್ಲೂಕುಗಳ ಅರ್ಹ ಪತ್ರಕರ್ತರು ಕೂಡಲೇ "ಸೇವಾಸಿಂಧು"ಪೋರ್ಟಲ್ ಮೂಲಕ ಅರ್ಜಿಗಳನ್ನು ಸಲ್ಲಿಸುವುದರ ಮೂಲಕ ಈ ಸದುಪಯೋಗ ಪಡೆದುಕೊಳ್ಳಬಹುದು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ನಿಂಬಾಳ್ಕರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೊಬೈಲ್ ರೀಚಾರ್ಜ್ ಮಾಡದ್ದಕ್ಕೆ ಪತಿ ಮೇಲೆ ಸಿಟ್ಟು; ಬೆಂಗಳೂರಿನಲ್ಲಿ ಪತ್ನಿ ಆತ್ಮಹತ್ಯೆ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಪತಿ ಮೊಬೈಲ್ ರೀಚಾರ್ಜ್ ಮಾಡಲಿಲ್ಲ ಎಂಬ ಕಾರಣಕ್ಕೆ ಪತ್ನಿ ಆತ್ಮಹತ್ಯೆ ಮಾಡಿಕೊಂಡ ಘಟನೆ ಕೆಂಗೇರಿಯಲ್ಲಿ ನಡೆದಿದೆ.

ಭಾರತವನ್ನು ಸೋಲಿಸಲು ಕಾಯುತ್ತಿರುವ ಆಸೀಸ್ ಗೆ ದೊಡ್ಡ ಆಘಾತ!: ಮೊದಲ ಪಂದ್ಯಕ್ಕೆ ಇಬ್ಬರು ಸ್ಟಾರ್ ಆಟಗಾರರು ಅಲಭ್ಯ

ಹೌದು, ಕೆಂಗೇರಿಯಲ್ಲಿ 28 ವರ್ಷದ ಗೃಹಿಣಿ ಶಿಖಾ ದೇವಿ ತನ್ನ ಪತಿ ಜೊತೆ ಮೊಬೈಲ್ ರೀಚಾರ್ಜ್ ವಿಚಾರಕ್ಕೆ ಜಗಳವಾಡಿದ್ದರು. ಇದೇ ಸಿಟ್ಟಿನಲ್ಲಿದ್ದ ಅವರು ತಮ್ಮ ಮನೆಯ ತಾರಸಿಯಿಂದ ಜಿಗಿದು ತಮ್ಮ ಪ್ರಾಣ ಕಳೆದುಕೊಂಡಿರುವುದಾಗಿ ಮಾಹಿತಿ ತಿಳಿದುಬಂದಿದೆ. ಘಟನಾ ಸ್ಥಳಕ್ಕೆ ಆಗಮಿಸಿದ ಕೆಂಗೇರಿ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ರೀಚಾರ್ಜ್ ಮಾಡದಿದ್ದಕ್ಕೆ ಆತ್ಮಹತ್ಯೆ

ಸಾಮಾನ್ಯವಾಗಿ ಆತ್ಮಹತ್ಯೆ ಮಾಡಿಕೊಳ್ಳಲು ಹೆಚ್ಚಾಗಿ ಕೇಳುವುದು, ಮಾನಸಿಕ ಕಿರುಕುಳ, ದೈಹಿಕವಾಗಿ ಹಿಂಸೆ ಸೇರಿ ಇನ್ನಿತರ ವಿಚಾರಗಳಿಗೆ ಆತ್ಮಹತ್ಯೆ ಪ್ರಕರಣಗಳು ಬೆಳಕಿಗೆ ಬರುತ್ತವೆ. ಆದರೆ, ಇತ್ತೀಚೆಗೆ ಮೊಬೈಲ್ ಕೊಡಿಸದಿದ್ದಕ್ಕೆ, ಓದು ಎಂದು ಬುದ್ಧಿ ಹೇಳಿದರೆ, ಪರೀಕ್ಷೆಯಲ್ಲಿ ಕಡಿಮೆ ಮಾರ್ಕ್ಸ್ ತೆಗೆದರೆ, ಓಡಾಡಲು ಬೈಕ್ ಕೊಡಿಸದಿದ್ದರೆ ಆತ್ಮಹತ್ಯೆ ಮಾಡಿಕೊಳ್ಳುವ ಘಟನೆಗಳು ಕಂಡುಬರುತ್ತಿದೆ. ಈ ಪ್ರಕರಣದಲ್ಲಿಯೂ ಶಿಖಾದೇವಿಯೂ ಮೊಬೈಲ್‌ಗೆ ಎಷ್ಟು ಒಗ್ಗಿಕೊಂಡಿದ್ರು ಎಂಬುದು ತಿಳಿದು ಬರುತ್ತದೆ. (ಐಪಿಎಸ್ ಅಧಿಕಾರಿ ಆತ್ಮಹತ್ಯೆ)

2019 ರಲ್ಲಿ ಸಂದೀಪ್ ಕುಮಾರ್ ಅವರನ್ನು ವಿವಾಹವಾಗಿದ್ದ ಶಿಖಾ ದೇವಿ ಮದುವೆಯಾಗಿದ್ದರು. ಅವರಿಬ್ಬರು ಉತ್ತರ ಪ್ರದೇಶದ ಫತೇಪುರ ಜಿಲ್ಲೆಯಲ್ಲಿ ವಾಸವಿದ್ದರು. ಅವರ ಪತಿ ಸಂದೀಪ್ ಕುಮಾರ್ ಬೆಂಗಳೂರಿನಲ್ಲಿ ಕೆಲಸ ಮಾಡುತ್ತಿದ್ದರು. ಸುಮಾರು ಎರಡು ವರ್ಷಗಳ ಹಿಂದೆ, ಶಿಖಾ ದೇವಿ ತಮ್ಮ ಎರಡೂವರೆ ವರ್ಷದ ಮಗನೊಂದಿಗೆ ಬೆಂಗಳೂರಿಗೆ ಬಂದು ಕೆಂಗೇರಿಯಲ್ಲಿ ಬಾಡಿಗೆ ಮನೆಯಲ್ಲಿ ನೆಲೆಸಿದ್ದರು.

ಚಿತ್ರದುರ್ಗ ರೇಣುಕಾ ಸ್ವಾಮಿ ಕೊಲೆ ಕೇಸ್; ಶಿವಮೊಗ್ಗ ಜೈಲಿಂದ ಎ12 ಆರೋಪಿ ಲಕ್ಷ್ಮಣ್ ರಿಲೀಸ್

ಪತಿ ಜೊತೆ ಜಗಳವಾಡಿ ತಾರಸಿಯಿಂದ ಬಿದ್ದ ಮಹಿಳೆ

ಭಾನುವಾರ ಸಂಜೆ 5.15ರ ಸುಮಾರಿಗೆ ಶಿಖಾ ಅವರು ತಮ್ಮ ಪತಿ ಮೊಬೈಲ್ ರೀಚಾರ್ಜ್ ಮಾಡಿಕೊಡಲಿಲ್ಲ ಎಂದು ಜಗಳವಾಡಿದ್ದರು. ಜಗಳ ಆಡಿ ಸುಮಾರು 15 ನಿಮಿಷಗಳ ನಂತರ, ಅವರು ತಮ್ಮ ಮೊಬೈಲ್ ಅನ್ನು ಬದಿಗೊತ್ತಿ, ಮೂರು ಅಂತಸ್ತಿನ ಮನೆಯ ತಾರಸಿ ಮೇಲೆ ಓಡಿ ಹೋಗಿ ಅಲ್ಲಿಂದ ಜಿಗಿದು ಪ್ರಾಣ ಕಳೆದುಕೊಂಡಿದ್ದಾರೆ. ತಕ್ಷಣವೇ ಕುಮಾರ್ ಮತ್ತು ಇತರ ಕುಟುಂಬ ಸದಸ್ಯರು ಅವರನ್ನು ಸಮೀಪದ ಆಸ್ಪತ್ರೆಗೆ ಕರೆದೊಯ್ದರು. ಆದರೆ, ಆಸ್ಪತ್ರೆಯಲ್ಲಿ ಅವರು ಮೃತಪಟ್ಟಿರುವುದಾಗಿ ವೈದ್ಯರು ತಿಳಿಸಿದ್ದಾರೆ. (ಉಡುಪಿಯಲ್ಲಿ ಬಾವಿಗೆ ಹಾರಿ ಪತ್ನಿ ಆತ್ಮಹತ್ಯೆ)

ಶಿಖಾ ಅವರ ತಂದೆ, ಅನಿಲ್ ಕುಮಾರ್ ತ್ರಿಪಾಠಿ, ಮರುದಿನ ಬೆಂಗಳೂರಿಗೆ ಆಗಮಿಸಿ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಅವರು ಈ ಹಿಂದೆ ಯಾವುದೇ ರೀತಿ ಜಗಳವಾಡಿರಲಿಲ್ಲ ಎಂದು ಅವರ ತಂದೆ ಹೇಳಿದ್ದಾರೆ.

# ಆಸ್ತಿ ವಿಷಯಕ್ಕೆ ಜಗಳ: ಯುವಕನ ಬರ್ಬರ ಹತ್ಯೆ, ಸಹೋದರನ ಕೊಲೆಗೂ ಯತ್ನ

ಬೆಂಗಳೂರು: ಆಸ್ತಿ ವಿವಾದಕ್ಕೆ ಸಂಬಂಧಿಸಿದಂತೆ ಯುವಕನೊಬ್ಬನನ್ನು ಬರ್ಬರವಾಗಿ ಹತ್ಯೆ ಮಾಡಿ, ಆತನ ಸಹೋದರನನ್ನೂ ಕೊಲೆಗೆ ಯತ್ನ ನಡೆಸಿರುವ ಘಟನೆ ಕನಕಪುರದಲ್ಲಿ ನಡೆದಿದೆ.




ಮೃತ ಯುವಕನನ್ನು ಸುನೀಲ್ (30) ಎಂದು ಗುರ್ತಿಸಲಾಗಿದೆ. ಈತನ ಸಹೋದರ ಟಿ.ಎಂ. ಕಿರಣ್ (28) ಅವರು ತೀವ್ರವಾಗಿ ಗಾಯಗೊಂಡಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ತುಂಗಣಿ ಗ್ರಾಮದ ಜಯಲಕ್ಷ್ಮೀ ಅವರು ದಾಂಪತ್ಯ ಬಿರುಕಿನಿಂದ ಪತಿ ಮುನಿರಾಜು ಅವರನ್ನು ತೊರೆದು ಯಡುವನಹಳ್ಳಿ ಗೇಟ್ ಬಳಿ ಮಕ್ಕಳೊಂದಿಗೆ ವಾಸವಿದ್ದರು. ಈ ಮಧ್ಯೆ ಮುನಿರಾಜು ಪಿತ್ರಾರ್ಜಿತ ಜಮೀನನ್ನು ಹೆಂಡತಿ, ಮಕ್ಕಳ ಗಮನಕ್ಕೆ ತರದೆ ಗಂಡೆಕೆರೆ ಪಾರ್ಥನಿಗೆ ಮಾರಿದ್ದರು.

ವಿಷಯ ತಿಳಿದ ಜಯಲಕ್ಷ್ಮೀ ತಮ್ಮ ಇಬ್ಬರು ಪುತ್ರರೊಂದಿಗೆ ಪಾರ್ಥ ಅವರ ಮನೆ ಬಳಿ ಬಂದು ಜಗಳ ಮಾಡಿದ್ದರು. ಈ ವೇಳೆ ಸ್ಥಳೀಯರು ಎರಡೂ ಕಡೆಯವರನ್ನು ಸಮಾಧಾನ ಮಾಡಿ ಕಳುಹಿಸಿದ್ದರು. ಆದರೆ, ತಡರಾತ್ರಿ ಜಯಲಕ್ಷ್ಮೀ ಪುತ್ರರಾದ ಸುನೀಲ್ ಹಾಗೂ ಕಿರಣ್‌ನನ್ನು ರಾಜಿ ನೆಪದಲ್ಲಿ ಗಂಡೆಗೆರೆ ಸಮೀಪದ ಜಲ್ಲಿ ಕ್ರಷರ್ ಬಳಿಗೆ ಕರೆಸಿದ ಪಾರ್ಥ, ಪುತ್ರ ಪ್ರೇಮ್ ಹಾಗೂ ಮತ್ತಿತರರು ಇಬ್ಬರ ಮೇಲೆ ಮಾರಕಾಸ್ತ್ರಗಳಿಂದ ಮಾರಣಾಂತಿಕ ಹಲ್ಲೆ ಮಾಡಿದ್ದು, ಸುನೀಲ್ ಮೇಲೆ ಕಲ್ಲು ಎತ್ತಿ ಹಾಕಿದ್ದಾರೆ, ಬಳಿಕ ಗಂಭೀರ ಗಾಯಗೊಂಡ ಸುನೀಲ್‌ನನ್ನು ಆಸ್ಪತ್ರೆಗೆ ದಾಖಲಿಸಿದ್ದಾನೆ.

ಬಳಿಕ ಕೊಲೆಯನ್ನು ಅಪಘಾತ ಎಂದು ಬಿಂಬಿಸಲು ಆರೋಪಿ ಯತ್ನಿಸಿದ್ದಾರೆ. ಆದರೆ ಹಲ್ಲೆ ದೃಶ್ಯಗಳು ಸಿಸಿ ಕ್ಯಾಮರಾದಲ್ಲಿ ಸೆರೆಯಾಗಿದ್ದು, ಸುನೀಲ್ ಸಹೋದರ ಕಿರಣ್ ಹೇಳಿಕೆ ಆಧರಿಸಿ ಪೊಲೀಸರು ಆರೋಪಿಗಳನ್ನು ಬಂಧಿಸಿದ್ದಾರೆ. ಈ ಸಂಬಂಧ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮುನಿರಾಜು ತಮ್ಮ ಪತ್ನಿ ಮತ್ತು ಮಕ್ಕಳ ಸಹಿ ಇಲ್ಲದೆ ಮಾರಾಟ ಮಾಡುವ ಹಕ್ಕು ಹೊಂದಿದ್ದಾರೆಯೇ ಎಂದು ಖಚಿತಪಡಿಸಿಕೊಳ್ಳಲು ಸದರಿ ಭೂಮಿಯ ಮಾಲೀಕತ್ವದ ವಿವರಗಳನ್ನು ಪರಿಶೀಲಿಸುತ್ತಿದ್ದೇವೆ. ಆರೋಪಿಗಳ ವಿರುದ್ಧ ಕೊಲೆ, ಕೊಲೆ ಯತ್ನ ಮತ್ತು ಬಿಎನ್‌ಎಸ್‌ನ ಇತರ ವಿಭಾಗಗಳ ಜೊತೆಗೆ ಪ್ರಕರಣ ದಾಖಲಿಸಲಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

# ದೀಪಾವಳಿ: 2,500 ಹೆಚ್ಚುವರಿ KSRTC ಬಸ್ ವ್ಯವಸ್ಥೆ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ವಾರಾಂತ್ಯ ಮತ್ತು ದೀಪಾವಳಿ ಒಟ್ಟಿಗೆ ಬಂದಿವೆ. ಈ ಸಮಯದಲ್ಲಿ ಊರಿಗೆ, ಪ್ರವಾಸಕ್ಕೆ ಹೋಗುವವರ ಸಂಖ್ಯೆ ಹೆಚ್ಚಲಿರುವ ಹಿನ್ನೆಲೆಯಲ್ಲಿ ಕೆಎಸ್‌ಆರ್‌ಟಿಸಿ 2,500 ವಿಶೇಷ ಬಸ್‌ಗಳನ್ನು ರಸ್ತೆಗಿಳಿಸಲು ನಿರ್ಧರಿಸಿದೆ.

ಅ.17ರಿಂದ ನ.20ರವರೆಗೆ 4 ದಿನ ಬೆಂಗಳೂರಿನಿಂದ ವಿವಿಧ ಪ್ರದೇಶಗಳಿಗೆ ಹಾಗೂ ಅ.22 ಹಾಗೂ 26ರಂದು ವಿವಿಧೆಡೆಗಳಿಂದ ಬೆಂಗಳೂರಿಗೆ ವಿಶೇಷ ಸಾರಿಗೆ ಇರಲಿದೆ.

ಕೆಂಪೇಗೌಡ ಬಸ್ ನಿಲ್ದಾಣ, ಮೈಸೂರು ರಸ್ತೆ ಬಸ್ ನಿಲ್ದಾಣ ಮತ್ತು ಶಾಂತಿನಗರದ ಬಿಎಂಟಿಸಿ ಬಸ್ ನಿಲ್ದಾಣಗಳಿಂದ ಬಸ್‌ಗಳು ಸಂಚರಿಸಲಿವೆ.

ಧರ್ಮಸ್ಥಳ, ಕುಕ್ಕೆ ಸುಬ್ರಹ್ಮಣ್ಯ, ಶಿವಮೊಗ್ಗ, ಹಾಸನ, ಮಂಗಳೂರು, ಕುಂದಾಪುರ, ಶೃಂಗೇರಿ, ಹೊರನಾಡು, ದಾವಣಗೆರೆ, ಹುಬ್ಬಳ್ಳಿ, ಧಾರವಾಡ, ಬೆಳಗಾವಿ, ವಿಜಯಪುರ, ಗೋಕರ್ಣ, ಶಿರಸಿ, ಕಾರವಾರ, ರಾಯಚೂರು, ಕಲಬುರಗಿ, ಬಳ್ಳಾರಿ, ಕೊಪ್ಪಳ, ಯಾದಗಿರಿ, ಬೀದರ್, ಮೈಸೂರು, ಹುಣಸೂರು, ಪಿರಿಯಾಪಟ್ಟಣ, ವಿರಾಜಪೇಟೆ, ಕುಶಾಲನಗರ, ಮಡಿಕೇರಿ, ಹೊರರಾಜ್ಯಗಳ ಮದುರೈ, ಕುಂಭಕೋಣಂ, ಚೆನ್ನೈ, ಕೊಯಮತ್ತೂರ್, ತಿರುಚ್ಚಿ, ಪಾಲಕ್ಕಾಡ್, ತ್ರಿಶ್ಯೂರ್, ಎರ್ನಾಕುಲಂ, ಕೋಯಿಕ್ಕೋಡ್, ತಿರುಪತಿ, ವಿಜಯವಾಡ, ಹೈದರಾಬಾದ್ ಸಹಿತ ವಿವಿಧೆಡೆ ವಿಶೇಷ ಬಸ್‌ಗಳು ಸಂಚರಿಸಲಿವೆ.

# ಕಲಬುರಗಿ: 3 ತಿಂಗಳಿಂದ ಸಿಗದ ವೇತನ; ಗ್ರಂಥಾಲಯ ಮೇಲ್ವಿಚಾರಕಿ ಆತ್ಮಹತ್ಯೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: 3 ತಿಂಗಳಿಂದ ಸಂಬಳ ಸಿಗದಿದ್ದಕ್ಕೆ ಬೇಸರಗೊಂಡ ಗ್ರಂಥಾಲಯ ಮೇಲ್ವಿಚಾರಕಿಯೋರ್ವರು ಆತ್ಮಹತ್ಯೆಗೆ ಶರಣಾದ ಘಟನೆ ಕಲಬುರಗಿ ಜಿಲ್ಲೆಯ ಸೇಡಂ ತಾಲೂಕಿನ ಮಳಖೇಡ ಗ್ರಾಮದಲ್ಲಿ ನಡೆದಿದೆ.



ಮೃತರನ್ನು ಭಾಗ್ಯಶ್ರೀ (45) ಎಂದು ಗುರುತಿಸಲಾಗಿದ್ದು, ಅವರು ಮಳಖೇಡ ಸರ್ಕಾರಿ ಗ್ರಂಥಾಲಯದಲ್ಲಿ ಮೇಲ್ವಿಚಾರಕಿಯಾಗಿ ಸೇವೆ ಸಲ್ಲಿಸುತ್ತಿದ್ದರು. ಗ್ರಾಮ ಪಂಚಾಯಿತಿ ಸದಸ್ಯ ಪಾಂಡುಸಿಂಗ್ ಚವ್ಹಾಣ್ ಅವರ ಹೇಳಿಕೆಯ ಪ್ರಕಾರ, 'ಮೂರು ತಿಂಗಳಿಂದ ವೇತನ ಪಾವತಿ ಆಗಿರಲಿಲ್ಲ.

ಅಧಿಕಾರಿಗಳು ಸತಾಯಿಸುತ್ತಿದ್ದರು. ಇದೇ ಕಾರಣಕ್ಕೆ ನೊಂದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಆತ್ಮಹತ್ಯೆ ಪತ್ರ ಬರೆದಿಟ್ಟಿದ್ದಾರೆ. ಡೆತ್ ನೋಟ್‌ನಲ್ಲಿ ಪಿಡಿಓ ಗ್ರಾಮ ಪಂಚಾಯತಿ ಅಧ್ಯಕ್ಷರ ಹೆಸರು ಉಲ್ಲೇಖಿಸಿ ಮಳಖೇಡ ಗ್ರಾಮ ಪಂಚಾಯತಿಯ ಆವರಣದಲ್ಲಿ ಆತ್ಮಹತ್ಯೆಗೆ ಶರಣಾಗಿದ್ದಾರೆ ಎಂದು ತಿಳಿಸಿದ್ದಾರೆ.

ಘಟನೆಯ ನಂತರ ಗ್ರಾಮದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಗಿದ್ದು, ಸ್ಥಳೀಯರು "ಸೇಡಂ ಶಾಸಕ ಡಾ. ಶರಣಪ್ರಕಾಶ ಪಾಟೀಲ್ ಸ್ಥಳಕ್ಕೆ ಬರುವವರೆಗೂ ಮೃತದೇಹವನ್ನು ಹೊರತೆಗೆಯುವುದಿಲ್ಲ" ಎಂದು ಪಟ್ಟು ಹಿಡಿದು ಗ್ರಂಥಾಲಯದ ಎದುರು ಪ್ರತಿಭಟನೆ ನಡೆಸಿದರು.

## ಅ.23 ರಂದು ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಅರ್ಥಪೂರ್ಣ ಆಚರಣೆ

# ಮಹನೀಯರ ಕೊಡುಗೆ ತಿಳಿಸುವ ಕಾರ್ಯವಾಗಲಿ: ಎಡಿಸಿ ಮಹಮ್ಮದ್ ಝುಬೇರ್

ಮಲ್ಲಮ್ಮ ನುಡಿ ವಾರ್ತೆ




ಬಳ್ಳಾರಿ,ಅ.14–ಜಿಲ್ಲಾಡಳಿತದಿಂದ ಅ.23ರಂದು ಕಿತ್ತೂರು ರಾಣಿ ಚೆನ್ನಮ್ಮ ಜಯಂತಿಯ ಅರ್ಥಪೂರ್ಣ ಆಚರಣೆಗೆ ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿಯ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಆಚರಣೆ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅ.23 ರಂದು ಬೆಳಿಗ್ಗೆ 11ಕ್ಕೆ ನಗರದ ಡಾ.ರಾಜ್ ಕುಮಾರ್ ರಸ್ತೆಯ ಸಾಂಸ್ಕೃತಿಕ ಸಮುಚ್ಚಯದ ಹೊಂಗಿರಣ ಸಭಾಂಗಣದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದ್ದು, ಅಧಿಕಾರಿಗಳು, ಎಲ್ಲಾ ಸಂಘ ಸಂಸ್ಥೆಯ ಮುಖಂಡರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದರು.

ಅಂದು ಬೆಳಿಗ್ಗೆ 09.30 ಗಂಟೆಗೆ ಜಯಂತಿಯ ಅಂಗವಾಗಿ ಮುನಿಸಿಪಲ್ ಕಾಲೇಜು ಮೈದಾನದಿಂದ ವೇದಿಕೆ ಕಾರ್ಯಕ್ರಮದವರೆಗೆ ಮೆರವಣಿಗೆ ನಡೆಯಲಿದೆ. ಚೆನ್ನಮ್ಮ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸುವ ನಿಟ್ಟಿನಲ್ಲಿ ಎಲ್ಲ ಸಿದ್ಧತೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಶಿಷ್ಟಾಚಾರದಂತೆ ಆಹ್ವಾನ ಪತ್ರಿಕೆ ಮುದ್ರಿಸಿ, ಗಣ್ಯರನ್ನು ಆಹ್ವಾನಿಸಬೇಕು. ಕಿತ್ತೂರು ರಾಣಿ ಚೆನ್ನಮ್ಮ ಅವರ ಕುರಿತು ಸಂಪನ್ಮೂಲ ವ್ಯಕ್ತಿಗಳಿಂದ ವಿಶೇಷ ಉಪನ್ಯಾಸ ಏರ್ಪಡಿಸಬೇಕು. ಜಯಂತಿಯ ಮೆರವಣಿಗೆಯಲ್ಲಿ ಸಾಂಸ್ಕೃತಿಕ ಕಲಾತಂಡಗಳು ಪಾಲ್ಗೊಳ್ಳಲಿವೆ. ವೇದಿಕೆ ಕಾರ್ಯಕ್ರಮದಲ್ಲಿ ವಚನ ಗಾಯನ ಇರಲಿದೆ ಎಂದರು.

ಕುಡಿಯುವ ನೀರಿನ ವ್ಯವಸ್ಥೆ, ಸ್ವಚ್ಛತೆ ಸೇರಿದಂತೆ ಇತರೆ ವ್ಯವಸ್ಥೆ ಕೈಗೊಳ್ಳುವಂತೆ ಮಹಾನಗರ ಪಾಲಿಕೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಚೆನ್ನಮ್ಮನವರ ಕೊಡುಗೆ ಅಪಾರ. ಅಂತಹ ಮಹನೀಯರ ಆಚಾರ–ವಿಚಾರ ಮುಂದಿನ ಪೀಳಿಗೆಗೆ ತಲುಪಿಸಬೇಕಿದೆ. ಹಾಗಾಗಿ ಜಿಲ್ಲಾ ಮಟ್ಟದ ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳ ಎಲ್ಲಾ ಅಧಿಕಾರಿಗಳು, ಶಾಲಾ–ಕಾಲೇಜು ಮಕ್ಕಳು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ವಿವಿಧ ಸಂಘಟನೆಗಳ ಪದಾಧಿಕಾರಿಗಳು, ಮುಖಂಡರು ಉಪಸ್ಥಿತರಿದ್ದರು.

# ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ ಪರಿಷ್ಕರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.14–ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ನಡೆಯುತ್ತಿದ್ದು, ಅರ್ಹ ಮತದಾರರು ನಿಗದಿತ ನಮೂನೆ–19 ನ್ನು ಭರ್ತಿ ಮಾಡಿ ಹೆಸರು ಸೇರ್ಪಡೆಗೆ ಅರ್ಜಿ ಸಲ್ಲಿಸಬೇಕು ಎಂದು ಬಳ್ಳಾರಿ ತಾಲ್ಲೂಕು ತಹಸೀಲ್ದಾರರಾದ ರೇಖಾ.ಟಿ ಅವರು ತಿಳಿಸಿದ್ದಾರೆ.

ಅರ್ಜಿಯೊಂದಿಗೆ ಶೈಕ್ಷಣಿಕ ಸಂಸ್ಥೆಗಳಲ್ಲಿ ನ.01ರ ಅರ್ಹತಾ ದಿನಾಂಕ–ಕ್ಕೆ ಮೊದಲು 06 ವರ್ಷಗಳ ಅವಧಿಯಲ್ಲಿ ಕನಿಷ್ಠ 3 ವರ್ಷ ಬೋಧನಾ ವೃತ್ತಿಯಲ್ಲಿ ನಿರತರಾಗಿರುವ ಕುರಿತು ಶೈಕ್ಷಣಿಕ ಸಂಸ್ಥೆಗಳಿಂದ ಅನುಬಂಧ–2 ರಲ್ಲಿ ಪ್ರಮಾಣ ಪತ್ರದೊಂದಿಗೆ ಬಳ್ಳಾರಿ ತಾಲ್ಲೂಕು ಕಚೇರಿಗೆ ಸಲ್ಲಿಸಬೇಕು.

ಈ ಹಿಂದೆ ಹೆಸರು ಸೇರ್ಪಡೆಯಾಗಿರುವವರು ಸಹ ಇದೀಗ ಪುನ: ನಮೂನೆ–19ರಲ್ಲಿ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ನ.06 ಕೊನೆಯ ದಿನ.

ನವೆಂಬರ್ 25ರಂದು ಕರಡು ಪಟ್ಟಿ ಪ್ರಕಟವಾಗಲಿದ್ದು, ಡಿಸೆಂಬರ್ 10 ರ ವರೆಗೆ ಆಕ್ಷೇಪಣೆ ಆಹ್ವಾನಿಸಲಾಗುತ್ತದೆ. ಅಂತಿಮ ಪಟ್ಟಿ ಡಿಸೆಂಬರ್ 30ರಂದು ಪ್ರಕಟವಾಗಲಿದೆ. ಶಿಕ್ಷಕರು ನಿಗದಿತ ದಿನಾಂಕದೊಳಗೆ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ಸೇರ್ಪಡೆ ಮಾಡಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೇಂದ್ರ ಸಚಿವರಾದ ನಿರ್ಮಲಾ ಸೀತಾರಾಮನ್ ಅಕ್ಟೋಬರ್ 16ರಂದು ರಾಯಚೂರು ಜಿಲ್ಲೆಗೆ ಭೇಟಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 14–: ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವರಾದ ನಿರ್ಮಲಾ ಸೀತಾರಾಮನ್ ಅವರು ಅಕ್ಟೋಬರ್ 16ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ.

ಅಂದು ಬೆಳಿಗ್ಗೆ 11 ಗಂಟೆಗೆ ಸಿಂಧನೂರು ತಾಲೂಕಿನ ಜವಳಗೇರಾ ಗ್ರಾಮಕ್ಕೆ ಭೇಟಿ ನೀಡಿ, ಕೃಷಿ ಸಂಸ್ಕರಣೆ, ರೈತರ ತರಬೇತಿ ಕೇಂದ್ರ ಮತ್ತು ಸಾಮಾನ್ಯ ಸೌಲಭ್ಯ ಕೇಂದ್ರ ಉದ್ಘಾಟನೆ ಕಾರ್ಯಕ್ರಮದಲ್ಲಿ ಭಾಗಿಯಾಗುವರು. ಮಧ್ಯಾಹ್ನ 12 ಗಂಟೆಗೆ ಜವಳಗೇರಾದಿಂದ ನಿರ್ಗಮಿಸಿ 12.20ಕ್ಕೆ ಸಿಂಧನೂರ ನಗರದ ನಿರೀಕ್ಷಣಾ ಮಂದಿರಕ್ಕೆ ತೆರಳುವರು. ಅಲ್ಲಿಂದ ಮಧ್ಯಾಹ್ನ 1 ಗಂಟೆಗೆ ನಿರ್ಗಮಿಸಿ ಬಳ್ಳಾರಿ ಜಿಲ್ಲೆಯತ್ತ ಪ್ರಯಾಣ ಬೆಳೆಸಲಿದ್ದಾರೆ ಎಂದು ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವರ ಹೆಚ್ಚುವರಿ ಖಾಸಗಿ ಕಾರ್ಯದರ್ಶಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ: ಗುತ್ತಿಗೆ ಆಧಾರದಡಿ ವಿವಿಧ ಹುದ್ದೆಗಳಿಗೆ ಅರ್ಜಿ ಆಹ್ವಾನ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.14-ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಾನೂನು ನೆರವು ಅಭಿರಕ್ಷಕರ ಕಚೇರಿಯಲ್ಲಿ ವಿವಿಧ ತಾತ್ಕಾಲಿಕ ಹುದ್ದೆಗಳಿಗೆ ಗುತ್ತಿಗೆ ಆಧಾರದ ಮೇಲೆ ನೇಮಕಾತಿಗಾಗಿ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಉಪ ಕಾನೂನು ನೆರವು ಅಭಿರಕ್ಷಕರ ಹುದ್ದೆ 01 ಮತ್ತು ಕಚೇರಿ ಸಹಾಯಕ ಹುದ್ದೆ 01 ಇವುಗಳಿಗೆ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗುವುದು.


ಮಾಹೆಯಾನ ಉಪ ಕಾನೂನು ನೆರವು ಅಭಿರಕ್ಷಕರ ಮಾಸಿಕ ವೇತನ ರೂ.45 ಸಾವಿರ ಮತ್ತು ಕಚೇರಿ ಸಹಾಯಕರ ವೇತನ ರೂ.19,695 ಸಂಚಿತ ಸಂಭಾವನೆ ನೀಡಲಾಗುವುದು.

ನೇಮಕಾತಿಗಳು ತಾತ್ಕಾಲಿಕವಾಗಿದ್ದು, ಪ್ರಾಧಿಕಾರವು ನೇಮಕಾತಿಯನ್ನು ಯಾವುದೇ ನೋಟೀಸನ್ನು ನೀಡದೇ ರದ್ದುಗೊಳಿಸುವ ಅಧಿಕಾರ ಹೊಂದಿರುತ್ತದೆ.

ಅರ್ಹ ಅಭ್ಯರ್ಥಿಗಳು ಅರ್ಜಿ ನಮೂನೆ ಪಡೆದು ಭರ್ತಿ ಮಾಡಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಬಳ್ಳಾರಿ ಕಚೇರಿಗೆ ಅರ್ಜಿ ಸಲ್ಲಿಸಬೇಕು ಹಾಗೂ ಇತ್ತೀಚಿನ 3 ಪಾಸ್ ಫೋ-ಟೋ ಲಗತ್ತಿಸಬೇಕು. ಅರ್ಜಿ ಸಲ್ಲಿಸಲು ಅಕ್ಟೋಬರ್ 25 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಗರದ ತಾಳೂರು ರಸ್ತೆಯ ನೂತನ ಜಿಲ್ಲಾ ನ್ಯಾಯಾಲಯ ಸಂಕೀರ್ಣದ ಮೂರನೇ ಮಹಡಿಯ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಚೇರಿಗೆ ಸಂಪರ್ಕಿಸಬಹುದು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಕೆ.ಜಿ.ಶಾಂತಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅ.15 ರಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ.ಶರಣಪ್ರಕಾಶ ಆರ್.ಪಾಟೀಲ ಬಳ್ಳಾರಿಗೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.14-ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ ಆರ್.ಪಾಟೀಲ ಅವರು ಅ.15 ರಂದು ಬಳ್ಳಾರಿಗೆ ಆಗಮಿಸಲಿದ್ದಾರೆ.

ಅಂದು ಬೆಳಿಗ್ಗೆ 10.30 ಗಂಟೆಗೆ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ವತಿಯಿಂದ ಚೇಂಬರ್ ಆಫ್ ಕಾಮರ್ಸ್ ನ ಆವರಣದಲ್ಲಿ ಏರ್ಪಡಿಸಿರುವ ಇಂಕ್ಯುಬೇಶನ್ ಕೇಂದ್ರ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಬಳಿಕ ಬೆಳಿಗ್ಗೆ 11.30 ಕ್ಕೆ ನಗರದ ಬಳ್ಳಾರಿ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಸಂಶೋಧನಾ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸುವರು.

ನಂತರ ಸಂಜೆ 04 ಗಂಟೆಗೆ ಬೆಂಗಳೂರಿಗೆ ತೆರಳುವರು ಎಂದು ಸಚಿವರ ಆಪ್ತ ಕಾರ್ಯದರ್ಶಿ ತಿಳಿಸಿದ್ದಾರೆ.

# ಅ.16 ರಂದು ಕೇಂದ್ರ ಹಣಕಾಸು ಮತ್ತು ಕಾರ್ಪೋರೇಟ್ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್ ಬಳ್ಳಾರಿಗೆ ಆಗಮನ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.14-ಭಾರತ ಸರ್ಕಾರದ ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವರಾದ ನಿರ್ಮಲಾ ಸೀತಾರಾಮನ್ ಅವರು ಅಕ್ಟೋಬರ್ 16 ರಂದು ಬಳ್ಳಾರಿ ಜಿಲ್ಲೆಗೆ ಆಗಮಿಸಲಿದ್ದಾರೆ.

ಅಂದು ಮಧ್ಯಾಹ್ನ 01.45 ಗಂಟೆಗೆ ಸಿರುಗುಪ್ಪ ತಾಲ್ಲೂಕಿನ ಬಾಗೇವಾಡಿ ಗ್ರಾಮದ ಗ್ರಾಮ ಪಂಚಾಯತ್ ನ ಗ್ರಂಥಾಲಯಕ್ಕೆ ಭೇಟಿ ನೀಡುವರು.

ಬಳಿಕ ಮಧ್ಯಾಹ್ನ 03 ಗಂಟೆಗೆ ಸಿರುಗುಪ್ಪ ತಾಲ್ಲೂಕಿನ ಕೊಂಚಿಗೇರಿ ಗ್ರಾಮದಲ್ಲಿ ಏರ್ಪಡಿಸಿರುವ ಸಂಸದೀಯ ಸ್ಥಳೀಯ ಪ್ರದೇಶ ಅಭಿವೃದ್ಧಿ ನಿಧಿಯಡಿ ರೈತರಿಗೆ ಸ್ಥಳೀಯ ಕೃಷಿ ತರಬೇತಿ ಕೇಂದ್ರ ಮತ್ತು ಕೃಷಿ ಸಂಸ್ಕರಣೆ ಘಟಕದ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ನಂತರ ಸಂಜೆ 04.45 ಗಂಟೆಗೆ ಬಳ್ಳಾರಿ ನಗರದ ಕರ್ನಾಟಕ ಗ್ರಾಮೀಣ ಬ್ಯಾಂಕ್ ನ ಮುಖ್ಯ ಕಚೇರಿಯಲ್ಲಿ ಕರ್ನಾಟಕ ಗ್ರಾಮೀಣ ಬ್ಯಾಂಕ್ ನ ಪ್ರಗತಿ ಪರಿಶೀಲನೆ ನಡೆಸುವರು. ಬಳಿಕ ಸರ್ಕಾರಿ ಅತಿಥಿ ಗೃಹದಲ್ಲಿ ವಾಸ್ತವ್ಯ ಮಾಡುವರು. ಅ.17 ರಂದು ಬಳ್ಳಾರಿಯಿಂದ ವಿಜಯನಗರ ಜಿಲ್ಲೆಗೆ ತೆರಳುವರು ಎಂದು ಸಚಿವರ ಆಪ್ತ ಕಾರ್ಯದರ್ಶಿಯವರು ತಿಳಿಸಿದ್ದಾರೆ.

# ನಡೆದಾಡುವ ವಿಶ್ವಕೋಶ ಶಿವರಾಮ ಕಾರಂತ-ಡಾ. ದೀಪಾ ರಾಗ



ಮಲ್ಲಮ್ಮ ನುಡಿ ವಾರ್ತೆ

ಬೀದರ:11ನೇ ಅ. 2025ರಂದು ನಗರದ ಹೈ.ಕ.ಶಿ. ಸಂಸ್ಥೆಯ ಬಿ.ವಿ.ಭೂಮರಡ್ಡಿ ಪದವಿ ಮಹಾವಿದ್ಯಾಲಯದಲ್ಲಿ ಕನ್ನಡ ವಿಭಾಗದಿಂದ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಕನ್ನಡದ ಅಪ್ರತಿಮ ಸಾಹಿತಿ ಡಾ. ಶಿವರಾಮ ಕಾರಂತರ ಜನ್ಮ ದಿನಾಚರಣೆಯನ್ನು ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡುವ ಮುಖಾಂತರ ಕಾಯಕ್ರರ್ಮಕ್ಕೆ ಚಾಲನೆ ನೀಡಿದ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ದೀಪಾ ರಾಗ ಅವರು ಮಾತನಾಡುತ್ತಾ ಕಾರಂತರು ನಡೆದಾಡುವ ವಿಶ್ವಕೋಶ ಅವರು ಕನ್ನಡ ಸಾಹಿತ್ಯದಲ್ಲಿಯ ಎಲ್ಲಾ ಪ್ರಕಾರ ಸಾಹಿತ್ಯ ರಚನೆ ಮಾಡಿ ಅವರದೇ ಆದ ಛಾಪು ಮೂಡಿಸಿದವರು ಎಂದು ನುಡಿದರು.

ಪ್ರಸ್ತಾವಿಕವಾಗಿ ಮಾತನಾಡಿದ ಕನ್ನಡ ವಿಭಾಗದ ಮುಖ್ಯಸ್ಥರಾದ ಶ್ರೀಮತಿ ರೇಣುಕಾದೇವಿ ಮಳ್ಳಿಸ್ವಾಮಿಯವರು ಶಿಸ್ತು ಸಂಯಮ ತಾಳ್ಮೆ ಸಂಸ್ಕಾರ ಭರಿತ ಜೀವನ ನಡೆಸಿದಾಗ ಮಾತ್ರ ಕಾರಂತರಂತಾಗಲು ಸಾಧ್ಯ ಯಾವುದೇ ಪದವಿಯಿಲ್ಲದ 427 ಕೃತಿ ರಚನೆ ಮಾಡಿ 8 ವಿಶ್ವವಿದ್ಯಾಲಯಗಳಿಂದ ಗೌರವ ಡಾಕ್ಟರೇಟ ಪದವಿಯನ್ನು ಪಡೆದ ಕನ್ನಡದ ಮೇರು ಸಾಹಿತಿಗಳು ಎಂದು ನುಡಿದರು.

ಇತಿಹಾಸ ವಿಭಾಗದ ಪ್ರಾಧ್ಯಾಪಕರಾದ ಶ್ರೀ ಬಸವರಾಜ ಬಿರಾದಾರ ಅವರು ಮಾತನಾಡುತ್ತಾ ಕಾರಂತರು ಕನ್ನಡ ಸಾಹಿತ್ಯದ ಅನರ್ಘ್ಯ ರತ್ನ ವೈವಿಧ್ಯಮಯ ಸಾಹಿತ್ಯ ಸೃಷ್ಠಿ ಮಾಡಿದ ಕಾರಂತರ ಬರಹ ಓದಿನಿಂದ ವಿದ್ಯಾರ್ಥಿಗಳಿಗೆ ನಮ್ಮ ಸುತ್ತಲಿನ ಸಾಮಾನ್ಯ ಜೀವನವನ್ನು ಗಮನಿಸಿ ಸೂಕ್ಷ್ಮಗ್ರಾಹಿಯಾಗಿ ಮುನ್ನಡೆದು ಗುರಿಯೊಡಗೆ ಕೊಂಡೊಯ್ಯಲು ಸಹಾಯ ಮಾಡುತ್ತದೆ ಎಂದರು.

ಗೌರವ ಉಪಸ್ಥಿತಿ ಸ್ಥಾನವನ್ನು ರಸಾಯನಶಾಸ್ತ್ರ ಮುಖ್ಯಸ್ಥರಾದ ಡಾ. ಮಲ್ಲಿಕಾರ್ಜುನ ಕೋಟೆ ಹಾಗೂ ಹಿಂದಿ ವಿಭಾಗದ ಮುಖ್ಯಸ್ಥರಾದ ಶ್ರೀ ಮಾರುತಿ ಭೀಮಣ್ಣಾ ಅಲಂಕರಿಸಿದರು.

ಕಾರ್ಯಕ್ರಮವನ್ನು ಮೊದಲಿಗೆ ಪ್ರಾರ್ಥನೆ ಗೀತೆಯನ್ನು ರೇಣುಕಾ ಬಿ.ಎ.5 ಸೆಮಿಸ್ಟರ ವಿದ್ಯಾರ್ಥಿನಿ ಹಾಡಿದರೆ, ಕನ್ನಡ ವಿಭಾಗದ ಪ್ರಾಧ್ಯಾಪಕಿ ಶ್ರೀಮತಿ ಕಾವೇರಿ ಖಂಡ್ರೆ ನಿರೂಪಿಸಿದರೆ, ಶ್ರೀಮತಿ ರತಿದೇವಿ ವಂದಿಸಿದರು, ವಿದ್ಯಾರ್ಥಿ, ವಿದ್ಯಾರ್ಥಿನಿಯರು ಹಾಗೂ ಪ್ರಾಧ್ಯಾಪಕರು ಸಿಬ್ಬಂದಿ ವರ್ಗದವರು ಹಾಜರಿದ್ದರು.

# ವಿಶೇಷ ಸಾಹಸ ಕಲೆ ಪ್ರದರ್ಶಿಸಿದ ವಿದ್ಯಾರ್ಥಿ ಅನ್ವಿತ್ ಅಂಬರೀಶ ಜಾಕಾ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ,ಅ.12: ಇಲ್ಲಿನ ನವನಂದಿ ಶಾಲೆಯಲ್ಲಿ ಆಯೋಜಿಸಿದ್ದ ಪ್ಲ್ಯಾಂಕ್ ಹೊಲ್ಡ್ ಚಾಲೆಂಜಿಂಗ್ ಕಂಡಕ್ಟ್ ಆನ್ (ಹೊಟ್ಟೆಹಲಗೆ) ಸ್ಪರ್ಧೆಯಲ್ಲಿ ಭಾಗವಹಿಸಿದ್ದ ಏಳು ವಿದ್ಯಾರ್ಥಿಗಳ ಪೈಕಿ 10 ವರ್ಷದ ಅನ್ವಿತ್ ಅಂಬರೀಶ ಜಾಕಾ ಎಂಬ ವಿದ್ಯಾರ್ಥಿ ಅತ್ಯಧಿಕ ಸಮಯ 35 ನಿಮಿಷ,30 ಸೆಕೆಂಡ ಗಳವರೆಗೂ ತನ್ನ ಕಲಿಕೆಯ ಸಾಧನೆ ಪ್ರದರ್ಶನ ಮಾಡುವ ಮೂಲಕ ಹೊಸ ದಾಖಲೆ ಬರೆದಿದ್ದಾನೆಂದು ಶಾಲೆಯ ಮುಖ್ಯ ಶಿಕ್ಷಕ ರೇವಣಸಿದ್ದಪ್ಪ ಮಲಕೂಡ ತಿಳಿಸಿದ್ದಾರೆ.

# ಹೇರೂರು ಗ್ರಾಮದಲ್ಲಿ ಆರ್‌ಎಸ್‌ಎಸ್ ಶತಮಾನೋತ್ಸವ ದಿನ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ರಾಷ್ಟ್ರೀಯ ಸ್ವಯಂ ಸೇವಾ ಸಂಘ ಆರ್‌ಎಸ್‌ಎಸ್‌ನ ಶತಮಾನೋತ್ಸವ ಸಂಭ್ರಮದ ಅಂಗವಾಗಿ ಹೇರೂರು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆರ್ ಎಸ್ ಎಸ್ ಶತಮಾನೋತ್ಸವ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಈ ವೇಳೆ ಭಾರತಾಂಬೆ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸೂರ್ಯನಾರಾಯಣ ಇವರು ವಹಿಸಿಕೊಂಡಿದ್ದರು.

ನಾಗರಾಜ್ ಗುತ್ತೇದಾರ್ ವಕೀಲರು ಮಾತನಾಡಿ ರಾಷ್ಟ್ರೀಯ ಸ್ವಯಂಸೇವಕ ಸಂಘದ ನೂರು ವರ್ಷಗಳ ಅದ್ಭುತ ಪಯಣ ಭಾರತದ ದಿಕ್ಕನ್ನೇ ಬದಲಾಯಿಸಿದೆ. 1925ರ ವಿಜಯದಶಮಿಯಂದು ಆರಂಭಗೊಂಡ ಆರ್‌ಎಸ್‌ಎಸ್‌ನ ಈ ಪಯಣವು ರಾಷ್ಟ್ರೀಯ ಹಿತಾಸಕ್ತಿಗಾಗಿ ತ್ಯಾಗ, ಶಿಸ್ತು, ಸೇವೆ ಮತ್ತು ಸಮರ್ಪಣೆಯ ಜೀವಂತ ಕಥೆಯಾಗಿದೆ ಎಂದು ಹೇಳಿದರು.

ಆರ್‌ಎಸ್‌ಎಸ್ ಶತಮಾನೋತ್ಸವದ ಅಂಗವಾಗಿ 60ಕ್ಕೂ ಹೆಚ್ಚು ಸ್ವಯಂ ಸೇವಕರು ಗಣವೇಷಧಾರಿಗಳಾಗಿ ಅತ್ಯಂತ ಶಿಸ್ತಿನಿಂದ ನಮಸ್ತೇ ಸದಾ ವತ್ಸಲೇ ಗೀತೆಯನ್ನು ಹಾಡಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷರು ಹನುಮೇಶ್ ಗೌಡ ಮಾಲಿಪಾಟೀಲ್, ಅಯ್ಯನ ಗೌಡ ಹೇರೂರು, ಅಂಬರೀಶ್ ಬೇವಿನಾಳ, ಶಿವು, ಹನುಮೇಶ್ ಗೌಡ, ಕನಕಪ್ಪ ಮೇಟಿ, ಹೇರೂರು ಗ್ರಾಮದ ಗುರು ಹಿರಿಯರು ಮುಖಂಡರು ಉಪಸ್ಥಿತರಿದ್ದರು.

# ಅಕ್ಕ ಕೆಫೆಗೆ ಗ್ರಾಹಕರಂತೆ ಭೇಟಿ ನೀಡಿದ ಜಿ.ಪಂ ಯೋಜನಾ ನಿರ್ದೇಶಕರು



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಜಿಲ್ಲೆಯಲ್ಲಿ ಮೊದಲು ಕಾರ್ಯಾರಂಭಗೊಂಡ ಕೊಪ್ಪಳ ತಾಲೂಕಿನ ಅಕ್ಕ ಕೆಫೆಗೆ ಜಿಲ್ಲಾ ಪಂಚಾಯತಿಯ ಯೋಜನಾ ನಿರ್ದೇಶಕರಾದ ಪ್ರಕಾಶ ವಡ್ಡರ ರವರು ಗ್ರಾಹಕರಂತೆ ತಮ್ಮ ಅಧೀನ ಸಿಬ್ಬಂದಿಗಳೊಂದಿಗೆ ಭೇಟಿ ನೀಡಿದರು.


ಅಕ್ಕ ಕೆಫೆ ನಿರ್ವಹಣೆಯ ಮಹಿಳಾ ಸದಸ್ಯರು ಯೋಜನಾ ನಿರ್ದೇಶಕರನ್ನು ಲವಲವಿಕೆಯಿಂದ ಸ್ವಾಗತಿಸಿ, ಬೆಳಗಿನ ಉಪಹಾರವಾದ ಒಗ್ಗರಣೆ ಮತ್ತು ಮಿರ್ಚಿಯನ್ನು ಮಾನ್ಯರಿಗೆ ಮತ್ತು ಅಧೀನ ಸಿಬ್ಬಂದಿಯವರಿಗೂ ಸವಿಯಲು ಉಪಹಾರ ನೀಡಿದರು.

ಮಾನ್ಯ ಯೋಜನಾ ನಿರ್ದೇಶಕರಾದ ಪ್ರಕಾಶ ವಡ್ಡರ ರವರು ಸದರಿ ಉಪಹಾರವನ್ನು ಸವಿದು ಮಾತನಾಡುತ್ತಾ, ಮನೆಯ ಊಟದ ಸ್ವಾದದಂತೆಯೇ ಇದೆ ಹಾಗೂ ಮಸಾಲೆ ಮುಕ್ತ ಶುಚಿ ರುಚಿಯಾಗಿದೆ ಎಂದು ಉಪಹಾರದ ಬಿಲ್ ಮೊತ್ತವನ್ನು ಸ್ವತಃ ತಾವೇ ತಮ್ಮ ಹಣದಿಂದ ಬಿಲ್ ಪಾವತಿಸಿ ಸಂತಸ ವ್ಯಕ್ತಪಡಿಸಿ, ಒಳ್ಳೆಯದಾಗಲಿ ಎಂದು ಶುಭ ಹಾರೈಸಿದರು.

ಅಕ್ಕ ಕೆಫೆಯ ಮಹಿಳಾ ಸದಸ್ಯರಿಗೆ ಸಲಹೆ ಸದರಿ ತಹಶೀಲ್ದಾರ ಕಛೇರಿ ಆವರಣದಲ್ಲಿ ಉಪನೋಂದಣಾಧಿಕಾರಿ ಕಛೇರಿ ಮತ್ತು ಸುತ್ತ-ಮುತ್ತ ಪೋಲೀಸ್ ಕಛೇರಿಯು ಹಾಗೂ ವಿವಿಧ ಸರಕಾರಿ ಇಲಾಖೆಗಳು ಇರುವುದರಿಂದ ಸದರಿ ಇಲಾಖೆಯ ಸಿಬ್ಬಂಧಿಗಳು ಮತ್ತು ಹೆಚ್ಚಿನ ಸಂಖ್ಯೆಯ ಸಾರ್ವಜನಿಕರು ಬರುವುದರಿಂದ ಉತ್ತಮ ಗುಣಮಟ್ಟದ ಆಹಾರ ತಯಾರಿಸಿ ಹಾಗೂ ಮುಂದಿನ ದಿನಮಾನಗಳಲ್ಲಿ ಸಿರಿಧಾನ್ಯಗಳ ಅಡುಗೆಯನ್ನು ತಯಾರಿಸಿ ಎಂದು ಅಕ್ಕ ಕೆಫೆಯ ಮಹಿಳಾ ಸದಸ್ಯರಿಗೆ ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತನ ಸಿಬ್ಬಂದಿಯವರು, ಜಿಲ್ಲಾ ಸಂಜೀವಿನಿ ಯೋಜನೆಯ ಸಿಬ್ಬಂದಿಯವರು, ಜಿಲ್ಲಾ ನರೇಗಾ ಯೋಜನೆಯ ಸಿಬ್ಬಂದಿಯವರು ಮತ್ತು ತಾಲೂಕ ಸಂಜೀವಿನಿ ಯೋಜನೆಯ ಸಿಬ್ಬಂದಿಯವರು ಸಹ ಆಗಮಿಸಿ, ಉಪಹಾರ ಸೇವನೆ ಮಾಡಿದರು.

# ಅ.16 ರಂದು ಶ್ರೀ ತೋಂಟದ ಸಿದ್ದಲಿಂಗ ಮಹಾಸ್ವಾಮಿಗಳ ಸ್ಮರಣೋತ್ಸವ




ಮಲ್ಲಮ್ಮ ನುಡಿ ವಾರ್ತೆ

ಕುಕನೂರ: ಲಿಂಗೈಕ್ಯ ಡಾ.ತೋಂಟದ ಸಿದ್ದಲಿಂಗ ಮಹಾಸ್ವಾಮಿಗಳ ಸ್ಮರಣೋತ್ಸವ ಕಾರ್ಯಕ್ರಮವನ್ನು ಅಕ್ಟೋಬರ್ 16ರ ಗುರುವಾರ ಆಯೋಜಿಸಲಾಗಿದೆ ಎಂದು ಜಗದ್ಗುರು ತೋಂಟದಾರ್ಯ ಕೈಗಾರಿಕಾ ತರಬೇತಿ ಕೇಂದ್ರದ ಪ್ರಾಚಾರ್ಯ ಚಂದ್ರಶೇಖರ ಅಂಗಡಿ ತಿಳಿಸಿದರು.

ತಾಲೂಕಿನ ಮಂಡಲಗಿರಿ ಗ್ರಾಮದಲ್ಲಿರುವ ಕೈಗಾರಿಕಾ ತರಬೇತಿ ಕೇಂದ್ರದಲ್ಲಿ ಭಾವೈಕ್ಯತೆಯ ಹರಿಕಾರರು ಹಾಗೂ ಗ್ರಾಮೀಣ ಪ್ರದೇಶದ ಜನತೆಗೆ ಶಿಕ್ಷಣವನ್ನು ಒದಗಿಸುವಲ್ಲಿ ತಮ್ಮ ಜೀವನವನ್ನೇ ಮುಡಿಪಾಗಿಟ್ಟ ಮಹಾನ್ ಯೋಗಿ ಪೂಜ್ಯ ಲಿಂಗೈಕ್ಯ ಡಾ.ತೋಂಟದ ಸಿದ್ದಲಿಂಗ ಮಹಾಸ್ವಾಮಿಗಳ ಏಳನೇ ಪುಣ್ಯ ಸ್ಮರಣೋತ್ಸವ ಹಾಗೂ ಸನ್ಮಾನ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಕೈಗಾರಿಕಾ ತರಬೇತಿ ಕೇಂದ್ರದ ಪ್ರಾಚಾರ್ಯ ಚಂದ್ರಶೇಖರ ಅಂಗಡಿ ತಿಳಿಸಿರುತ್ತಾರೆ

ಅದೇ ಕಾರ್ಯಕ್ರಮದಲ್ಲಿ ಜಿಲ್ಲೆಯಲ್ಲಿ ಸುಮಾರು 70 ವರ್ಷಗಳಿಂದ ಇತ್ಯರ್ಥಗೊಳ್ಳದೇ ಉಳಿದುಕೊಂಡು ಬಂದಿದ್ದ ಕೊಪ್ಪಳ ಹಾಗೂ ಯಲಬುರ್ಗಾ ತಾಲೂಕುಗಳ 29 ಗ್ರಾಮಗಳ ಜಮೀನಿನ ದಾಖಲೆಗಳ ಸಮೀಕ್ಷೆಯ ಸಮಸ್ಯೆಯನ್ನು ಇತ್ಯರ್ಥ ಗೊಳಿಸಿ ಕಂದಾಯ ಸಚಿವ ಕೃಷ್ಣ ಬೈ-ರೇಗೌಡ ಅವರ ಮೆಚ್ಚುಗೆಗೆ ಪಾತ್ರರಾದ ಕೊಪ್ಪಳ ಉಪ ವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ್ ಮಾಲಗಿತ್ತಿ ಅವರಿಗೆ ವಿಶೇಷ ಸನ್ಮಾನ ಮಾಡುವುದರೊಂದಿಗೆ ಗೌರವಿಸಲಾಗುವುದು ಜೊತೆಗೆ ಮಂಡಲಗಿರಿಯ ಕೈಗಾರಿಕಾ ತರಬೇತಿಯಲ್ಲಿ ವ್ಯಾಸಂಗ ಪೂರ್ಣಗೊಳಿಸಿ ಲೋಕಸೇವಾ ಆಯೋಗದಿಂದ ಸರ್ಕಾರಿ ಐಟಿಐ ಕಾಲೇಜು ಗಳಲ್ಲಿ ಹಿರಿಯ ತರಬೇತಿ ಅಧಿಕಾರಿಗಳೆಂದು ನೇಮಕ ಹೊಂದಿರುವ ಕೊಪ್ಪಳದ ರಾಜೇಶ್ ಬಳ್ಳಾರಿ, ಮಂಡಲಗಿರಿ ಗ್ರಾಮದ ಗವಿಸಿದ್ದಪ್ಪ ಹೂಗಾರ ಹಾಗೂ ಕೊಪ್ಪಳ ತಾಲೂಕಿನ ವದಗನಾಳ ಗ್ರಾಮದ ರವಿಚಂದ್ರ ಉಪ್ಪಾರ್ ಅವರಿಗೆ ಸನ್ಮಾನಿಸಿ ಗೌರವಿಸಲಾಗುವುದು ಎಂದು ಮಂಡಲಗಿರಿ ಜಗದ್ಗುರು ತೆ-ೂಂಟದಾರ್ಯ ತರಬೇತಿ ಕೇಂದ್ರದ ತರಬೇತದಾರರು ಹಾಗೂ ಸಿಬ್ಬಂದಿ ವರ್ಗದವರ ವತಿಯಿಂದ ಪ್ರಕಟಣೆ ನೀಡಲಾಗಿದೆ ಎಂದು ಪ್ರಾಚಾರ್ಯ ಚಂದ್ರಶೇಖರ ಅಂಗಡಿ ತಿಳಿಸಿದರು.

# ಜಿಲ್ಲಾ ವಕೀಲರ ಸಂಘದ ಸದಸ್ಯತ್ವ ಪಡೆದ ಮೇಘರಾಜ ರೆಡ್ಡಿ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ನಗರದ ಜಿಲ್ಲಾ ವಕೀಲರ ಸಂಘದಲ್ಲಿ ಮೇಘರಾಜ ರೆಡ್ಡಿ ಜಿ.ಗೋನಾಳ್ ಅವರು ವಕೀಲರ ಸಂಘದ ಸದಸ್ಯತ್ವವನ್ನು ಸೋಮವಾರದಂದು ಪಡೆದು-ಕೊಂಡರು. ಈ ಸಂದರ್ಭದಲ್ಲಿ ವಕೀಲರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷರಾದ ಎ.ವಿ ಕಣಿವಿ. ಮತ್ತು ಇತರ ಪದಾಧಿಕಾರಿಗಳು ಉಪಸ್ಥಿತರಿದ್ದು. ಯುವನ್ಯಾಯವಾದಿ ಮೇಘರಾಜ್ ಗೋನಾಳ್ ಅವರಿಗೆ ಸದಸ್ಯತ್ವ ಪ್ರಮಾಣ ಪತ್ರವನ್ನು ನೀಡಿದರು.

ನಂತರ ಸದಸ್ಯತ್ವ ಪ್ರಮಾಣ ಪತ್ರವನ್ನು ಸ್ವೀಕಾರ ಮಾಡಿದ ಮೇಘರಾಜ್ ರೆಡ್ಡಿ ವಕೀಲರು ಮಾಧ್ಯಮದೊಂದಿಗೆ ಮಾತನಾಡಿ ನಮ್ಮ ಜಿಲ್ಲಾ ವಕೀಲ ಸಂಘದಲ್ಲಿ ನನ್ನ ಸದಸ್ಯತ್ವನೊಂದಣಿಯಾಗಿದ್ದು ನನಗೆ ಸಂತೋಷ ಮೂಡಿಸಿದೆ. ಅದಕ್ಕಿನ್ನು ಹೆಚ್ಚಿನದಾಗಿ ನಮ್ಮ ಜಿಲ್ಲಾ ವಕೀಲರ ಸಂಘಟನೆಯಲ್ಲಿ ಹಿರಿಯ ವಕೀಲರು, ಹಾಗೂ ಸಾಕಷ್ಟು ಅನುಭವ ಜೀವಿಗಳಿದ್ದು ಸದಾ ಅವರ ಮಾರ್ಗದರ್ಶನ ಪಡೆಯುವ ಜೊತೆಗೆ ಅವರೊಂದಿಗೆ ಕರ್ತವ್ಯ ನಿರ್ವಹಿಸುವ ಭಾಗ್ಯ ನನಗೆ ದೊರೆತಿರುವ ಹೆಮ್ಮೆ ನನಗಿದೆ. ಜಿಲ್ಲಾ ವಕೀಲರ ಸಂಘದಲ್ಲಿ ಉತ್ತಮ ವಾಗ್ಮೀಯ ಹಿರಿಯ ವಕೀಲರು ಸಾಕಷ್ಟಿದ್ದು, ಅವರೊಂದಿಗೆ ನಾನು ಸಹ ಇಂದು ಕರ್ತವ್ಯ ನಿರ್ವಹಿಸುವ ಭಾಗ್ಯ ಅವಕಾಶ ಸಿಕ್ಕಿದ್ದು ನಾನು ಸಮಾಜ ಸೇವೆಯಲ್ಲಿ ತೊಡಗಿಸಿಕೊಳ್ಳಲು ಇದೊಂದು ಸುವರ್ಣಾವಕಾಶವನ್ನು ಆರಾಧ್ಯ ದೈವ ಗವಿಸಿದ್ದೇಶ ಕರುಣಿಸಿದ್ದಾನೆ ಎಂದು ತಿಳಿಸಿದರು.

# ಕಂಪ್ಲಿ: ಆಕ್ಷೇಪಣೆಗಳಿಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.14-ಕಂಪ್ಲಿ ಪಟ್ಟಣದ ಕಂಪ್ಲಿ-ಕೊಟ್ಟಾಲ್ ರಸ್ತೆಯ ರಾಘವೇಂದ್ರ ಮಠಕ್ಕೆ ಹೋಗುವ ರಸ್ತೆಯ ವೃತ್ತಕ್ಕೆ 'ಶ್ರೀ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ' ವೃತ್ತ ಎಂದು ಹೆಸರು ನಾಮಕರಣ ಮಾಡಲು ಪುರಸಭೆಯ ಸಾಮಾನ್ಯ ಸಭೆಯಲ್ಲಿ ಮಂಡಿಸಿದ್ದು, ಈ ಕುರಿತು ಸಾರ್ವಜನಿಕರಿಂದ ಸಲಹೆ ಹಾಗೂ ಆಕ್ಷೇಪಣೆಗಳಿದ್ದಲ್ಲಿ ಪ್ರಕಟಣೆಗೊಂಡ 30 ದಿನಗಳೊಳಗಾಗಿ ಲಿಖಿತ ರೂಪದಲ್ಲಿ ಕಂಪ್ಲಿ ಪುರಸಭೆ ಕಚೇರಿಗೆ ಸಲ್ಲಿಸಬಹುದು. ಅವಧಿ ಮೀರಿ ಬಂದಂತಹ ಮನವಿ ಅಥವಾ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಕಂಪ್ಲಿ ಪುರಸಭೆಯ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅ.18 ರಂದು ಒಂದು ದಿನ ಜಾಗೃತಿ ಕಾರ್ಯಾಗಾರ


ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.14-ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಮತ್ತು ಜಿಲ್ಲಾ ಕೈಗಾರಿಕಾ ಕೇಂದ್ರ ವತಿಯಿಂದ ಆರ್‌ಎಎಂಪಿ ಯೋಜನೆಯಡಿ ಲೀನ್ ಯೋಜನೆ ಮತ್ತು ಝೆಡ್.ಇ.ಡಿ ಹಾಗೂ ರಫ್ತು ಕುರಿತು ಅ.18 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಸಭಾಂಗಣದಲ್ಲಿ ಒಂದು ದಿನದ ಜಾಗೃತಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಸೋಮಶೇಖರ್ ಅವರು ತಿಳಿಸಿದ್ದಾರೆ.

ಕಾರ್ಯಾಗಾರದಲ್ಲಿ ವಿದ್ಯಾರ್ಥಿಗಳು ಮತ್ತು ಉದ್ಯಮಿಗಳಲ್ಲಿ ಹಣಕಾಸು, ತಾಂತ್ರಿಕ ಮತ್ತು ಮಾರ್ಗದರ್ಶನ ಬೆಂಬಲದ ಕುರಿತು ಜಾಗೃತಿ ಮೂಡಿಸಲಾಗುತ್ತದೆ. ಇದು ಲೀನ್ ಯೋಜನೆ ಮತ್ತು ಝೆಡ್.ಇ.ಡಿ ಹಾಗೂ ರಫ್ತು ಕುರಿತು ಸೌಲಭ್ಯಗಳನ್ನು ಪ್ರದರ್ಶಿಸುತ್ತದೆ. ಯಶಸ್ಸಿನ ಕಥೆಗಳನ್ನು ಹಂಚಿಕೊಳ್ಳುತ್ತದೆ ಮತ್ತು ನೆಟ್ ವರ್ಕಿಂಗ್‌ಗಾಗಿ ತಜ್ಞರು, ಅಧಿಕಾರಿಗಳು ಮತ್ತು ಉದ್ಯಮಿಗಳೊಂದಿಗೆ ಸಂಪರ್ಕ ಸಾಧಿಸಲು ಅವಕಾಶಗಳನ್ನು ಒದಗಿಸಿಕೊಡುತ್ತದೆ.

ಹಾಗಾಗಿ ಆಸಕ್ತ ವಿದ್ಯಾರ್ಥಿಗಳು, ಉದ್ದಿಮೆದಾರರು ಕಾರ್ಯಾಗಾರಲ್ಲಿ ಭಾಗವಹಿಸಬಹುದು ಎಂದು ಅವರು ತಿಳಿಸಿದ್ದಾರೆ.

# ಸಚಿವ ಪ್ರಿಯಾಂಕ್ ಖರ್ಗೆರಿಂದ ಶೈಕ್ಷಣಿಕ, ಆರ್.ಡಿ ಸಂಸ್ಥೆಗಳ ತಜ್ಞರ ಭೇಟಿ




ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಅ.14:-ಬೆಂಗಳೂರು ಇಂಟರ್‌ನ್ಯಾಷನಲ್ ಎಕ್ಸಿಬಿಷನ್ ಸೆಂಟರ್‌ನಲ್ಲಿ ನಲ್ಲಿ ನವೆಂಬರ್ 18 ರಿಂದ 20 ರವರೆಗೆ ನಡೆಯಲಿರುವ ಬೆಂಗಳೂರು ಟೆಕ್ ಶೃಂಗಸಭೆ 2025 ಕ್ಕೆ ದಿನಗಣನೆ ಆರಂಭವಾಗಿರುವ ಹಿನ್ನೆಲೆಯಲ್ಲಿ ಇಂದು ಶಿಕ್ಷಣ ತಜ್ಞರು ಮತ್ತು ಸಂಶೋಧನೆ & ಅಭಿವೃದ್ಧಿ ತಜ್ಞರ ಸಂವಾದ ಕಾರ್ಯಕ್ರಮ ನಡೆಯಿತು.

# ಮೇದಾರ ಅಲೆಮಾರಿ ಜನಾಂಗದ ಕುಂದು ಕೊರತೆ ಸಭೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.13-ನಗರದ ಬಸವೇಶ್ವರ ವೃತ್ತ ಗಣಪತಿ ಮಂದಿರದ ಹತ್ತಿರ ಆಯೋಜಿಸಲಾಗಿದ್ದ ಪರಿಶಿಷ್ಟ ಪಂಗಡದ ಮೇದಾರ ಅಲೆಮಾರಿ ಜನಾಂಗದ ಕುಂದು ಕೊರತೆ ಸಭೆಯಲ್ಲಿ ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪಲ್ಲವಿ ಜಿ. ಮನವಿಗಳಿಗೆ ಸ್ಪಂದಿಸುವ ಕಾರ್ಯ ಮಾಡಿದರು.

ನಂತರ ಮಾತನಾಡಿದ ಅವರು, ಮೇದಾರ ಜನಾಂಗದ ಅಭಿವೃದ್ಧಿಗೆ ಹಾಗೂ ಆರ್ಥಿಕ ಸ್ವಾವಲಂಬನೆಗೆ ರಾಜ್ಯ ಸರ್ಕಾರದಿಂದ ಪ್ರತ್ಯೇಕ ನಿಗಮವನ್ನು ಸ್ಥಾಪಿಸಲಾಗಿದ್ದು ನಿಗಮದಿಂದ ಹಲವಾರು ಯೋಜನೆಗಳು ಅನುಷ್ಠಾನಗೊಳ್ಳುತ್ತಿದ್ದು, ಅವುಗಳನ್ನು ಪಡೆದುಕೊಂಡು ಸ್ವಾವಲಂಬಿ ಬದುಕು ಕಟ್ಟಿಕೊಂಡು ಡಾ.ಬಿ.ಆರ್ ಅಂಬೇಡ್ಕರ್‌ರವರ ಆಶಯದಂತೆ ಶಿಕ್ಷಣ, ಸಂಘಟನೆ ಮತ್ತು ಹೋರಾಟ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಒಳ್ಳೆಯ ಜೀವನ ನಡೆಸುವಂತೆ ಸಮಾಜದ ಜನರಲ್ಲಿ ಜಾಗೃತಿ ಮೂಡಿಸಿದರು.

ಈ ಸಮಯದಲ್ಲಿ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ವಿವಿಧ ಇಲಾಖೆಗಳ ಅಧಿಕಾರಿಗಳು ನಿಗಮದ ನಾಮ ನಿರ್ದೇಶಕ ಸದಸ್ಯರಾದ ಚನ್ನಬಸಪ್ಪ ಬುಡ್ಡರ, ಸದಾಶಿವ ಮೇದಾರ್ ಹಾಗೂ ಸಮಾಜದ ಮುಖಂಡರು ಸಭೆಗೆ ಹಾಜರಿದ್ದರು.

# ಬೆಣ್ಣೂರ ಭೀಮ್ ಬಾಯ್ಸ್ ಕ್ರಿಕೆಟ್ ತಂಡಕ್ಕೆ ಟ್ರೋಫಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.15-ತಾಲೂಕಿನ ಬೆಣ್ಣೂರು ಗ್ರಾಮದಲ್ಲಿ ನಡೆದ ಜೈಭೀಮ್ ಕಪ್ ಟೆನಿಸ್ ಬಾಲ್ ಕ್ರಿಕೆಟ್ ಲೀಗ್ ಪಂದ್ಯಾವಳಿಯಲ್ಲಿ ಸ್ಥಳೀಯ ಭೀಮ್ ಬಾಯ್ಸ್ ಕ್ರಿಕೆಟ್ ತಂಡ ಟ್ರೋಫಿ ಪಡೆದಿದೆ.

ಸ್ಥಳೀಯ ಡಾ.ಬಾಬು ಜಗಜೀವನರಾಂ ಕಲಾ ಮತ್ತು ಸಾಂಸ್ಕೃತಿಕ ಸಂಘ ಆದಿಶಕ್ತಿ ಲಕ್ಕಮ್ಮದೇವಿ ಜಾತ್ರೆ ಹಾಗೂ ದಸರಾ ಮಹೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ಈ ಪಂದ್ಯಾವಳಿಯಲ್ಲಿ 12 ತಂಡಗಳು ಭಾಗವಹಿಸಿದ್ದವು.

ಎರಡು ವಾರಗಳ ಕಾಲ ನಡೆದ ಲೀಗ್ ಹಂತದ ಪಂದ್ಯಾವಳಿಯಲ್ಲಿ 4 ತಂಡಗಳು ಸೆಮಿಫೈನಲ್ ಹಂತಕ್ಕೆ ಬಂದಿದ್ದು, ರವಿವಾರ ನಡೆದ ಅಂತಿಮ ಹಣಾಹಣಿಯಲ್ಲಿ ಸ್ಥಳೀಯ ಭೀಮ್ ಬಾಯ್ಸ್ ತಂಡ ಪ್ರಥಮ ಸ್ಥಾನ ಪಡೆದು 25 ಸಾವಿರ ರೂ.ನಗದು ಬಹುಮಾನ ಹಾಗೂ ಟ್ರೋಫಿ ಪಡೆಯಿತು.

ಶಿರೂರ ಕ್ರಿಕೆಟ್ ತಂಡ ದ್ವಿತೀಯ ಸ್ಥಾನ ಗಳಿಸಿ 15 ಸಾವಿರ ರೂ. ನಗದು ಬಹುಮಾನ ಪಡೆದರೆ, ಬೋಡನಾಯಕದಿನ್ನಿ ತಂಡ ತೃತೀಯ ಹಾಗೂ ಮುಡಪಲಜೀವಿ ತಂಡ ಚತುರ್ಥ ಸ್ಥಾನ ಗಳಿಸಿ ಬಹುಮಾನ ಹಾಗೂ ಟ್ರೋಫಿ ಪಡೆದುಕೊಂಡವು. ಶಿರೂರ ತಂಡದ ಆಟಗಾರ ಸುಪ್ರೀತ್ ಅತ್ಯುತ್ತಮ ಬ್ಯಾಟ್ಸ್‌ಮನ್ ಹಾಗೂ ಬೋಡನಾಯಕದಿನ್ನಿ ತಂಡದ ಸಿದ್ದು ಉತ್ತಮ ಬೌಲರ್ ಪ್ರಶಸ್ತಿ ಪಡೆದರು. ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಜು ನಾಯ್ಕರ ಹಾಗೂ ಬಿಜೆಪಿ ಎಸ್.ಸಿ.ಮೋರ್ಚಾ ಜಿಲ್ಲಾ ಅಧ್ಯಕ್ಷ ಮುತ್ತಣ್ಣ ಬೆಣ್ಣೂರ ವಿಜೇತ ತಂಡಗಳಿಗೆ ಬಹುಮಾನ ವಿತರಿಸಿದರು. ರಾಹುಲ್ ಶೆಟ್ಟರ, ವಕೀಲ ರಮೇಶ ತುಮ್ಮರಮಟ್ಟಿ,ಅನಿಲ ದೊಡಮನಿ,ಎಸ್.ಆರ್.ವಾಲೀಕಾರ, ರವಿ ರಾಂಪುರ, ಮಹಾದೇವ ಹುಂಡೇಕಾರ, ಮುತ್ತಣ್ಣ ಚಿನಗಿರಿ, ಮಹಾಂತೇಶ ತೋಟಗೇರ,ಪ್ರಶಾಂತ ಸೊನಕನಾಳ, ಶೇಖಪ್ಪ ಇಟಗಿ, ನಾಗಪ್ಪ ಮಾದರ, ಸುನೀಲ ಅಚ್ಯುತನ್, ಶಿವರಾಜ ಬೆಣ್ಣೂರ ಇದ್ದರು.

# ಇಂದು ಜಿಲ್ಲಾ ಮಟ್ಟದ ಯುವಜನೋತ್ಸವ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.14-ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ನವನಗರ ಬಾಗಲಕೋಟೆ ಇವರ ಸಂಯುಕ್ತ ಆಶ್ರಯದಲ್ಲಿ ಜಿಲ್ಲಾ ಮಟ್ಟದ ಯುವಜನೋತ್ಸವ ಉದ್ಘಾಟನಾ ಸಮಾರಂಭ ಅಕ್ಟೋಬರ 15 ರಂದು ಬೆಳಿಗ್ಗೆ 10 ಗಂಟೆಗೆ ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆಯಲಿದೆ.

ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಕಾರ್ಯಕ್ರಮ ಉದ್ಘಾಟಿಸಲಿದ್ದು, ಅಧ್ಯಕ್ಷತೆಯನ್ನು ಶಾಸಕ ಹಾಗೂ ಬಿಟಿಡಿಎ ಅಧ್ಯಕ್ಷ ಎಚ್.ವಾಯ್. ಮೇಟಿ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕ ಪ್ರಕಾಶ ಹುಕ್ಕೇರಿ, ಬೀಳಗಿ ಶಾಸಕ ಜೆ.ಟಿ.ಪಾಟೀಲ,ಹುನಗುಂದ ಶಾಸಕ ವಿಜಯಾನಂದ ಕಾಶಪ್ಪನವರ, ಸಂಸದ ಪಿ.ಸಿ.ಗದ್ದಿಗೌಡರ,ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಸೇರಿದಂತೆ ವಿಧಾನ ಸಭೆ, ವಿಧಾನ ಪರಿಷತ್ ಶಾಸಕರು, ಹಾಗೂ ಇತರೆ ಗಣ್ಯಮಾನ್ಯರು ಆಗಮಿಸಲಿದ್ದಾರೆ.

# ಪ್ರಿಯಾಂಕ ಖರ್ಗೆ ಹೇಳಿಕೆ ಖಂಡಿಸಿ ಬಿಜೆಪಿ ಪ್ರತಿಭಟನೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.14-ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಚಟುವಟಿಕೆ ನಿಯಂತ್ರಿಸುವಂತೆ ಸಚಿವ ಪ್ರಿಯಾಂಕ ಖರ್ಗೆ ಮುಖ್ಯಮಂತ್ರಿಗಳಿಗೆ ಬರೆದಿರುವ ಪತ್ರದ ವಿಷಯವನ್ನು ಖಂಡಿಸಿರುವ ಬಿಜೆಪಿ, ಅವರ ಹೇಳಿಕೆ ಖಂಡಿಸಿ ನಗರದಲ್ಲಿ ಮಂಗಳವಾರ ಪ್ರತಿಭಟನೆ ನಡೆಸಿತು.

ನಗರದ ಬಸವೇಶ್ವರ ವೃತ್ತದಲ್ಲಿ ಭಾರತೀಯ ಜನತಾ ಪಾರ್ಟಿ ಜಿಲ್ಲಾ ಹಾಗೂ ಬಾಗಲಕೋಟೆ ಮತಕ್ಷೇತ್ರದಿಂದ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಬಿಜೆಪಿ ಮುಖಂಡರು ಸಚಿವ ಪ್ರಿಯಾಂಕ ಖರ್ಗೆ ವಿರುದ್ಧ ವಾಗ್ದಾಳಿ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಾಜಿ ಶಾಸಕ ವೀರಣ್ಣ ಚರಂತಿಮಠ, ರಾಷ್ಟ್ರ ನಿರ್ಮಾಣ ಕಾರ್ಯದಲ್ಲಿ ದೇಶಕ್ಕೆ ಆರ್.ಎಸ್.ಎಸ್.ತನ್ನದೆಯಾದ ಕೊಡುಗೆ ನೀಡಿದ್ದು ಜನರಲ್ಲಿ ದೇಶಪ್ರೇಮವನ್ನು ತುಂಬುವ ಏಕೈಕ ರಾಷ್ಟ್ರಭಕ್ತ ಸಂಘಟನೆಯಾಗಿದೆ. ಯಾವುದೇ ಜಾತಿ, ಧರ್ಮದ ಬೇಧಭಾವ ಇಲ್ಲದ ಸಂಸ್ಥೆಯ ವಿರುದ್ಧ ಸಲ್ಲದ ಹೇಳಿಕೆ ನೀಡಿರುವುದು ಖಂಡನೀಯ ಎಂದರು. ಪ್ರಿಯಾಂಕ ಖರ್ಗೆ ಹೈಕಾಂಡ ಮೆಚ್ಚಿಸಲು ಆರೆಸ್ಸಸ್ ವಿರೋಧಿಸುವ ಕೆಲಸ ಮಾಡುತ್ತಿದ್ದಾರೆ. ಸಿ.ಎಂ ಬದಲಾವಣೆ ಸಂಧರ್ಭದಲ್ಲಿ ಜನರ ಗಮನ ಬೇರೆಡೆ ಸೆಳೆಯಲು ಈ ರೀತಿ ಆರ್.ಎಸ್.ಎಸ್. ಬಗ್ಗೆ ಹಗುರವಾಗಿ ಮಾತನಾಡುತ್ತಿದ್ದಾರೆ, ಜನರು ಇದಕ್ಕೆ ತಕ್ಕ ಪಾಠ ಕಲಿಸುತ್ತಾರೆ ಎಂದು ಚರಂತಿಮಠ ಹೇಳಿದರು.

ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ, ಜಿಲ್ಲಾ ಬಿಜೆಪಿ ಅಧ್ಯಕ್ಷ ಶಾಂತಗೌಡ ಪಾಟೀಲ ಮಾತನಾಡಿದರು. ಪ್ರತಿಭಟಣೆಯಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಜು ನಾಯ್ಕರ, ಬಸವರಾಜ ಯಂಕಂಚಿ, ನಗರಸಭೆ ಉಪಾಧ್ಯಕ್ಷ ಶೋಭಾ ರಾವ, ಶಶಿಕಲಾ ಮಜ್ಜಗಿ, ಸರಸ್ವತಿ ಕುರಬರ, ಉಮೇಶ ಹಂಚಿನಾಳ, ಶ್ರೀಧರ ನಾಗರಬೆಟ್ಟ, ಸುರೇಶ ಮಜ್ಜಗಿ ಸೇರಿದಂತೆ ಅನೇಕ ಕಾರ್ಯಕರ್ತರು ಭಾಗವಹಿಸಿದ್ದರು.

# ಗುರು-ಶಿಷ್ಯ ಪರಂಪರೆ ಶ್ರೇಷ್ಠವಾದುದು-ಬಟಕುರ್ಕಿ

ಮಲ್ಲಮ್ಮ ನುಡಿ ವಾರ್ತೆ




ಬಾಗಲಕೋಟೆ,ಅ.15-ಭಾರತೀಯ ಗುರು-ಶಿಷ್ಯ ಪರಂಪರೆ ಶ್ರೇಷ್ಠವಾಗಿದ್ದು, ಜಗತ್ತಿನ ಪ್ರತಿಯೊಬ್ಬ ಶ್ರೇಷ್ಠ ವ್ಯಕ್ತಿಯ ಸಾಧನೆಯ ಮೂಲ ಶಕ್ತಿ ಗುರುಗಳೇ ಆಗಿರುತ್ತಾರೆ ಎಂದು ನಿವೃತ್ತ ಮುಖ್ಯೋಪಾಧ್ಯಾಯಿನಿ ರೇಣುಕಾ. ಎಚ್.ಬಟಕುರ್ಕಿ ಹೇಳಿದರು.

ನಗರದ ಹೇಮ ವೇಮ ಸಂಸ್ಥೆಯ ಸ್ವಾಮಿ ವಿವೇಕಾನಂದ ಪ್ರೌಢಶಾಲೆಯಲ್ಲಿ ಓದಿದ 2007-08ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು ಹಮ್ಮಿಕೊಂಡಿದ್ದ ಗುರುವಂದನಾ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ನಿವೃತ್ತ ಶಿಕ್ಷಕ ಮಾನಪ್ಪ ನಂದಿ ಮಾತನಾಡಿ, 18 ವರ್ಷ ಕಳೆದರೂ ಗುರುಗಳ ಬಗ್ಗೆ ಗೌರವ ಹೊಂದಿ ಅವರನ್ನು ಗೌರವಿಸುವ ಕಾರ್ಯ ಶ್ಲಾಘನೀಯವಾದುದು ಎಂದು ಹೇಳಿ, ಹಿಂದಿನ ದಿನಗಳನ್ನು ನೆನಪಿಸಿದರು. ಶಿಕ್ಷಕ ಸಿಂಕಂದರ ಅಥಣಿ ಮಾತನಾಡಿ, ಗುರುಗಳು ಯಾವಾಗಲೂ ಶಿಷ್ಯರ ಒಳಿತನ್ನೇ ಬಯಸುತ್ತಾರೆ ಎಂದರು. ಶಿಕ್ಷಕರಾದ ಅಶೋಕ ನಾವಲಗಿ ಹಾಗೂ ಮಹಾಂತೇಶ ನಿಡಗುಂದಿ ತಮ್ಮ ಶಾಲಾ ದಿನಗಳನ್ನು ನೆನೆಪಿಸಿಕೊಂಡು ಉತ್ತಮ ಶಿಕ್ಷಣ ಪಡೆದುಕೊಂಡಿದ್ದರಿಂದಲೇ ಇಂದು ನಾವುಗಳು ಒಳ್ಳೆಯ ಸ್ಥಾನದಲ್ಲಿದ್ದೇವೆ. ಇದಕ್ಕೆಲ್ಲ ಗುರುಗಳ ಮಾರ್ಗದರ್ಶನವೇ ಕಾರಣ ಎಂದರು. ಕಾರ್ಯಕ್ರಮದಲ್ಲಿ ಶಿಕ್ಷಕರಾದ ಆರ್. ಎಚ್.ಬಟಕುರ್ಕಿ, ಮಾನಪ್ಪ ನಂದಿ, ರಾಜೇಶ್ವರಿ ಪವಾರ, ಸೈರಾಬಾನು ಧನ್ನೂರ, ಟಿ. ನರಸಿಂಹರೆಡ್ಡಿ, ಮಹಾಂತೇಶ ನಿಡಗುಂದಿ, ಜಗನ್ನಾಥ ಹೊಸೂರ, ಸಿಂಕಂದರ ಅಥಣಿ, ಅಶೋಕ ನಾವಲಗಿ, ಅರುಣ ಶಂಭೋಜಿ, ರಾಜು ಯಾದವ, ಮುರಳೀಧರ ಮಹೇಂದ್ರಕರ ಅವರನ್ನು ಸನ್ಮಾನಿಸಲಾಯಿತು.

ಹಳೆಯ ವಿದ್ಯಾರ್ಥಿಗಳಾದ ರಶಂತಸಿಂಗ ರಾಜಪೂತ, ಶರತ ಪವಾರ, ಶೃತಿ ಗೋಡಿ, ತ್ರೀವೇಣಿ ಪಟ್ಟಣಶೆಟ್ಟಿ, ಭಾಗ್ಯ ಜಾಧವ, ಮಹಮ್ಮದಗೌಸ ಗದ್ದನಕೇರಿ, ರಾಹುಲ್ ಚವ್ಹಾಣ, ಸಚಿನ್ ದಾದನಟ್ಟಿ, ಸಂಜಯ ಸಕ್ರಿ, ವಿಕ್ರಮ್ ಶಿರೂರ, ರಮೇಶ್ ಬಯ್ಯಾಪುರ, ಬಸವರಾಜ ಮಲಘಾಣ, ಚೇತನ್ ನಾಗರಾಳ ಇದ್ದರು. ಕಾರ್ಯಕ್ರಮದಲ್ಲಿ ಗುರುಗಳಿಗೆ ಗೌರವ ಸೂಚಕವಾಗಿ ಸಸ್ಯಗಳನ್ನು ಉಡುಗೊರೆಯಾಗಿ ನೀಡಲಾಯಿತು.

# ನೀಲಾನಗರದಲ್ಲಿ ಏಳು ಮಕ್ಕಳ ದೇವಿ ಜಾತ್ರೆ

ಮಲ್ಲಮ್ಮ ನುಡಿ ವಾರ್ತೆ



ಬಾಗಲಕೋಟೆ,ಅ.15-ತಾಲೂಕಿನ ನೀಲಾನಗರದ ಬಂಜಾರ ಸಮಾಜದ ಆರಾಧ್ಯ ದೇವತೆ ಏಳು ಮಕ್ಕಳ ದೇವಿ ಜಾತ್ರೆ ಎರಡು ದಿನಗಳ ಕಾಲ ಶೃದ್ಧಾ ಭಕ್ತಿಯಿಂದ ಜರುಗಿತು.

ದೇವಾಸ್ಥಾನದ ಉಮೇಶ ಹಾಗೂ ವಸಂತ ಮಹಾರಾಜರ ನೇತೃತ್ವದಲ್ಲಿ ಏಳು ಮಕ್ಕಳ ದೇವಿಗೆ ಹೂವಿನ ಅಲಂಕಾರ, ವಿಶೇಷ ಪೂಜೆ, ಮಾಹಮಂಗಳಾರತಿ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆದವು.

ಬಾಗಲಕೋಟೆ, ಗದಗ, ರಾಯಚೂರು, ವಿಜಯಪುರ ಜಿಲ್ಲೆಗಳ ವಿವಿಧ ತಾಂಡಗಳಿಂದ ಆಗಮಿಸಿದ್ದ ಬಂಜಾರ ಬಾಂಧವರು ದೇವಿಗೆ ಪೂಜೆ ಸಲ್ಲಿಸಿ ಹರಕೆ ತೀರಿಸಿದರು. ಸ್ಥಳೀಯ ಭಕ್ತರು ಹಾಗೂ ಹಿರಿಯರು ಮೆರವಣಿಗೆಯ ಮೂಲಕ ದೇವಾಸ್ಥಾನಕ್ಕೆ ಆಗಮಿಸಿ ಕಾಯಿ-ಕರ್ಪೂರ ನೀಡಿ ಭಕ್ತಿಯ ನಮನ ಸಲ್ಲಿಸಿದರು. ಪೂಜಾ ಕೈಕಂರ್ಯಗಳ ಮೊದಲು ಹೂವಿನಿಂದ ಅಲಂಕೃತಗೊಳಿಸಲಾಗಿದ್ದ ತೆರೆದ ವಾಹನದಲ್ಲಿ ಏಳು ಮಕ್ಕಳ ದೇವಿಯ ಭಾವಚಿತ್ರ ಮೆರವಣಿಗೆ ಗ್ರಾಮದ ಓಣಿಗಳಲ್ಲಿ ಸಂಭ್ರಮದಿಂದ ಜರುಗಿತು. ಸುಮಂಗಲಿಯರ ಕುಂಬೋತ್ಸವ, ಕಳಸಾರತಿ, ನಾನಾ ವಾದ್ಯ ವೈಭವ ಮೆರವಣಿಗೆಗೆ ಕಳೆ ತಂದಿತು.

ರವಿವಾರ ಸಂಜೆ ಜರುಗಿದ ಧಾರ್ಮಿಕ ಕಾರ್ಯಕ್ರಮದಲ್ಲಿ ದುರ್ಗಾದೇವಿ ದೇವಸ್ಥಾನದ ಅರ್ಚಕ ನಾಗೇಶ ಪೂಜಾರಿ ಮಾತನಾಡಿ, ಬಂಜಾರಾ ಬಾಂಧವರು ಭಕ್ತಿಯಿಂದ ಏಳು ಮಕ್ಕಳ ದೇವಿಯ ಆರಾಧನೆ ಮಾಡಿ ದೇವಿಯ ಕೃಪೆಗೆ ಪಾತ್ರರಾಗಬೇಕು ಎಂದರು.

ರಂಗನಗೌಡ ಗೌಡರ, ರಮೇಶ ಕಟ್ಟಿಮನಿ, ಮೇಘಪ್ಪ ಪಮ್ಮಾರ, ರಮೇಶ ಕಾರಬಾರಿ, ದೇಸಾಯಿ ಲಮಾಣಿ, ಜಾನಪ್ಪ ಕುರಿಗಾರ, ರಮೇಶ ದೊಡಮನಿ, ಕಮಲಾಜಿ ಕಟ್ಟಿಮನಿ ಸೇರಿದಂತೆ ಅನೇಕ ಹಿರಿಯರು, ಯುವಕರು, ಮಹಿಳೆಯರು ಇದ್ದರು.

ಶಾಸಕ ಜೆ.ಟಿ.ಪಾಟೀಲ ಅಧಿಕಾರಿಗಳಿಗೆ ಸೂಚನೆ

# ರೈತರ ಜಮೀನುಗಳಿಗೆ ಭೇಟಿ ನೀಡಿ ಸಮಸ್ಯೆ ಆಲಿಸಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.14-ರೈತರ ಸಂಕಷ್ಟಗಳನ್ನು ತಿಳಿಯಲು ಅಧಿಕಾರಿಗಳು ರೈತರ ಜಮೀನುಗಳಿಗೆ ಭೇಟಿ ನೀಡಿ, ಅಲ್ಲಿನ ನಷ್ಟದ ಬಗ್ಗೆ ತಿಳಿದು, ಅದಕ್ಕೆ ಯಾವ ರೀತಿ ಪರಿಹಾರ ಕಲ್ಪಿಸಿಕೊಡಬಹುದು ಎಂಬುದರ ಕುರಿತು ವರದಿ ಸಲ್ಲಿಸುವಂತೆ ಶಾಸಕ ಜೆ.ಟಿ.ಪಾಟೀಲ ಅಧಿಕಾರಿಗಳಿಗೆ ಸೂಚಿಸಿದರು.

ನವನಗರದ ಹೊಸ ಜಿಲ್ಲಾ ಪಂಚಾಯತ್ ಸಭಾ ಭವನದಲ್ಲಿ ಸೋಮವಾರ ಹೆರಕಲ್ ಏತ ನೀರಾವರಿ ಉತ್ತರ ಮತ್ತು ದಕ್ಷಿಣ ಯೋಜನೆಗೆ ಸಂಬಂಧಿಸಿದಂತೆ ಸಮಸ್ಯೆಗಳ ಕುರಿತು ಚರ್ಚಿಸಲು ಆಯೋಜಿಸಲಾದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಯೋಜನೆಗೆ ರೈತರು ನೀಡಿದ ಜಮೀನಿಗೆ ಪರಿಹಾರ ತಡವಾದರೂ ಪರವಾಗಿಲ್ಲ, ಕೆಲಸ ಬೇಗ ಆಗಲಿ ಎಂದು ಆಗ್ರಹಿಸುತ್ತಿದ್ದು, ಕೆಲಸ ಶೀಘ್ರವಾಗಬೇಕು. ಅಧಿಕಾರಿಗಳು ವಿಳಂಬ ಅಥವಾ ಅಸಡ್ಡೆ ತೋರಿದಲ್ಲಿ ಅವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದರು.

ರೈತರ ಜಮೀನಿನ ಜೊತೆಗೆ ಅದರಲ್ಲಿನ ಬೆಳೆ, ಕಟ್ಟಡ ಎಲ್ಲದಕ್ಕೂ ಪರಿಹಾರ ದೊರೆಯಲಿದೆ. ಕಾಲುವೆ ಕಾಮಗಾರಿ ಪ್ರಯುಕ್ತ ದಾರಿ ಇಲ್ಲದ ಜಮೀನುಗಳಿಗೆ ದಾರಿ ಮಾಡಿ ಕೊಡುವಂತೆ, ಎಲ್ಲ ಸರ್ಕಾರಿ ಕಛೇರಿಗಳಲ್ಲೂ ಯಾವುದೇ ಕೆಲಸಕ್ಕೆ ಬಂದ ರೈತರನ್ನು ಗೌರವದಿಂದ ಕಾಣುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಮುಖ್ಯ ಅಭಿಯಂತರರು, ವಿಶೇಷ ಭೂಸ್ವಾಧೀನ ಅಧಿಕಾರಿಗಳು, ತಹಶೀಲ್ದಾರರು ಮತ್ತು ಯೋಜನೆಗೆ ಸಂಬಂಧಿಸಿದ ಗ್ರಾಮಗಳ ಹಿರಿಯರು, ರೈತರು ಹಾಗೂ ಕೆಬಿಜೆಎನ್‌ಎಲ್, ಕಂದಾಯ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.



ಬೀದರಿನ ಕಾಂಗ್ರೆಸ್ ಜಿಲ್ಲಾ ಘಟಕದ ಕಚೇರಿಗೆ ಮಂಗಳವಾರ ಭೇಟಿ ನೀಡಿದ ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರನ್ನು ಪಕ್ಷದ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ದತ್ತಾತ್ರಿ ಮೂಲಗೆ ಸನ್ಮಾನಿಸಿದರು. (ಮಲ್ಲಮ್ಮ ನುಡಿ ಚಿತ್ರ)

# ಹಿರಿಯ ನಟ 'ಉಮೇಶ್' ಆರೋಗ್ಯ ವಿಚಾರಿಸಿದ 'ನಟ' ಶಿವಕುಮಾರ್ ಆರಾಧ್ಯ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಹಿರಿಯ ಚಿತ್ರನಟ ಉಮೇಶ್ ಅಣ್ಣನವರ ಆರೋಗ್ಯ ವಿಚಾರಿಸಲು ನಟ ಶಿವಕುಮಾರ್ ಆರಾಧ್ಯ ಅವರು ಇಂದು ಆಸ್ಪತ್ರೆಗೆ ಭೇಟಿ ನೀಡಿ ಮಾತುಕತೆ ನಡೆಸಿದರು.

"ಉಮೇಶ್ ಅಣ್ಣನ ಮನಸ್ಸು ಮಗುವಿನಂತಿದೆ. ಕಳೆದ 35 ವರ್ಷಗಳಿಂದ ಅವರೊಂದಿಗೆ ನಮ್ಮ ಆತ್ಮೀಯ ಒಡನಾಟ ಇದೆ," ಎಂದು ನಟ ಶಿವಕುಮಾರ್ ಆರಾಧ್ಯ ಅವರು ಮಲ್ಲಮ್ಮ ನುಡಿ ಪತ್ರಿಕೆಯೊಂದಿಗೆ ಮಾತನಾಡಿದರು.

ಸೀರಿಯಲ್ ಹಾಗೂ ಚಲನಚಿತ್ರಗಳಲ್ಲಿ ಅಭಿನಯಿಸಿರುವ ಶಿವಕುಮಾರ್ ಆರಾಧ್ಯ ಅವರು ಉಮೇಶ್ ಅಣ್ಣನೊಂದಿಗೆ ಕಳೆದ ನೆನಪುಗಳನ್ನು ಹಂಚಿಕೊಂಡರು. "ಉಮೇಶ್ ಅಣ್ಣ ಅವರು ತಾವು ನಡೆದ ಬಂದ ಹಾದಿಯನ್ನು ನೆನೆಸಿಕೊಂಡರು. ಅವರ ಆರೋಗ್ಯ ಚೇತರಿಸಿಕೊಳ್ಳಲಿ ಮತ್ತು ಶ್ರೀ ರಾಘವೇಂದ್ರಸ್ವಾಮಿಯ ಅನುಗ್ರಹ ಸದಾ ಇರಲಿ," ಎಂದು ಅವರು ಆಶಿಸಿದರು.

ಈ ಸಂದರ್ಭದಲ್ಲಿ ಹಿರಿಯ ನಟಿಯರಾದ ರೇಖಾದಾಸ್ ಹಾಗೂ ಭಾಗ್ಯಶ್ರೀ ಸೇರಿದಂತೆ ಹಲವಾರು ಕಲಾವಿದರು ಉಪಸ್ಥಿತರಿದ್ದರು.

# ಯುವಕರಿಗೆ ಎಚ್.ಐ.ವಿ-ಏಡ್ಸ್ ಜಾಗೃತಿ ರೆಡ್ ರಿಬ್ಬನ್ ಮ್ಯಾರಥಾನ್‌ಗೆ ಕುರೇರ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.15-ಎಚ್.ಐ.ವಿ, ಏಡ್ಸ್ ಜಾಗೃತಿಗಾಗಿ ಕಾಲೇಜು ವಿದ್ಯಾರ್ಥಿಗಳಿಗೆ ಹಮ್ಮಿಕೊಂಡ ರಾಜ್ಯ ಮಟ್ಟದ 5 ಕಿಲೊ ಮೀಟರ ರೆಡ್ ರಿಬ್ಬನ್ ರನ್ ಮ್ಯಾರಥಾನ್ ಸ್ಪರ್ಧೆಗೆ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಂಗಳವಾರ ಚಾಲನೆ ನೀಡಿದರು.

ಜಿಲ್ಲಾಡಳಿತ ಭವನದ ಮುಂಭಾಗದಲ್ಲಿ ರಾಜ್ಯ ಏಡ್ಸ್ ಪ್ರವೆನ್‌ಷನ್ ಸೊಸೈಟಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ಪ್ರತಿಬಂಧಕ ಹಾಗೂ ನಿಯಂತ್ರಣ ಘಟಕ ಹಾಗೂ ಜಿಲ್ಲಾ ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ ಸಹಯೋಗದಲ್ಲಿ ಮಂಗಳವಾರ ಹಮ್ಮಿಕೊಂಡ ಮ್ಯಾರಥಾನ್ ಸ್ಪರ್ಧೆಗೆ ಚಾಲನೆ ನೀಡಿ ಮಾತನಾಡಿದ ಅವರು ಯುವಕರಲ್ಲಿ ಎಚ್.ಐ.ವಿ, ಏಡ್ಸ್ ಬಗ್ಗೆ ಜಾಗೃತಿ ಮೂಡಿಸಲು ಯುಜನೋತ್ಸವ ಅಂಗವಾಗಿ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಈಗಾಗಲೇ ಜಿಲ್ಲಾ ಮಟ್ಟದಲ್ಲಿ ಮ್ಯಾರಥಾನ್ ಸ್ಪರ್ಧೆ ನಡೆದಿದ್ದು, ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದ ಕಾಲೇಜು ವಿದ್ಯಾರ್ಥಿಗಳು ರಾಜ್ಯ ಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಿದ್ದಾರೆ. ರಾಜ್ಯ ಮಟ್ಟದ ಮ್ಯಾರಥಾನ್ ಸ್ಪರ್ಧೆ ಬಾಗಲಕೋಟೆಯಲ್ಲಿ ಜರುಗುತ್ತಿರುವುದು ಹೆಮ್ಮೆಯ ವಿಷಯವಾಗಿದೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಯುಥ ಜಿಲ್ಲಾ ಏಡ್ಸ್ ನಿಯಂತ್ರಣ ಘಟಕ ಐಇಸಿ ವಿಭಾಗದ ಉಪನಿರ್ದೇಶಕ ಗೋವಿಂದರಾಜು, ಯುಥ ಕಸಾಪ್ಸನ ಸಹಾಯಕ ನಿರ್ದೇಶಕ ನಂಜೇಗೌಡ, ಯುಥ ಜಿಲ್ಲಾ ಏಡ್ಸ್ ನಿಯಂತ್ರಣ ಅಧಿಕಾರಿ ಡಾ.ಸುವರ್ಣಾ ಕುಲಕರ್ಣಿ ಸೇರಿದಂತೆ ಏಡ್ಸ್ ನಿಯಂತ್ರಣ ಘಟಕ ಸಿಬ್ಬಂದಿ ವರ್ಗದವರು ಇದ್ದರು.

ಮ್ಯಾರಥಾನ್ ಸ್ಪರ್ಧೆ ಜಿಲ್ಲಾಡಳಿತ ಭವನದಿಂದ ಪ್ರಾರಂಭವಾಗಿ ಎ.ಪಿ.ಎಂ.ಸಿ, ಬಜಾಜ್ ಶೋರೂಮ್ ಮೂಲಕ ಹಾಯ್ದು ಮರಳಿ ಅಗ್ನಿಶಾಮಕ ಕಚೇರಿಗೆ ಮುಕ್ತಾಯಗೊಂಡಿತು. ಮ್ಯಾರಥಾನ್ ಸ್ಪರ್ಧೆಯಲ್ಲಿ ಪ್ರತಿ ಜಿಲ್ಲೆಯಿಂದ ಪ್ರಥಮ ಸ್ಥಾನ ಪಡೆದ ಕಾಲೇಜ ವಿದ್ಯಾರ್ಥಿ ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

ಪುರುಷರ ವಿಭಾಗದಲ್ಲಿ ಪ್ರಭು ಲಮಾಣಿ (ಪ್ರಥಮ),ಸಂಗಮೇಶ ಹಳ್ಳಿ(ದ್ವಿತೀಯ), ವೈಭವ ಪಾಟೀಲ(ತೃತೀಯ) ಸ್ಥಾನ ಪಡೆದುಕೊಂಡರೆ, ಮಹಿಳಾ ವಿಭಾಗದಲ್ಲಿ ಎಚ್.ವಿ.ದೀಕ್ಷಾ (ಪ್ರಥಮ), ಸಾಕ್ಷಿ (ದ್ವಿತೀಯ), ಯುವರಾಣಿ (ತೃತೀಯ) ಸ್ಥಾನ ಪಡೆದುಕೊಂಡರು.

ವಿಜೇತರಾದವರಿಗೆ ತಲಾ ಪ್ರಥಮ 25 ಸಾವಿರ ರೂ, ದ್ವಿತೀಯ 20 ಸಾವಿರ ರೂ, ತೃತೀಯ 15 ಸಾವಿರ ರೂ.ಗಳ ನಗದು, ಪ್ರಶಸ್ತಿ ಪತ್ರ ಹಾಗೂ ಮೆಡಲ್ ನೀಡಲಾಯಿತು. ಸಮಾಧಾನಕರ ಬಹುಮಾನವನ್ನು ಪುರುಷ ವಿಭಾಗದಲ್ಲಿ ಬಾಲು ಹೆಗ್ಗಿ, ಬೈರು ನಾಯಕ, ರಮೇಶ, ಮಹಿಳಾ ವಿಭಾಗದಲ್ಲಿ ಶ್ರೇಯಾ ಎಂ, ಅಕ್ಷರಾ ಮಾಜುಕರ, ಯಲ್ಲಮ್ಮ ಪಡೆದುಕೊಂಡರು.

# ಮಕ್ಕಳ ಪ್ರಶಸ್ತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.14-ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ 06 ರಿಂದ 18 ವರ್ಷದೊಳಗಿನ ಮಕ್ಕಳು ತಮ್ಮ ಪ್ರಾಣದ ಹಂಗು ತೊರೆದು ಹಾಗೂ ಸಮಯ ಪ್ರಜ್ಞೆಯಿಂದ ಇತರರ ಪ್ರಾಣ ರಕ್ಷಣೆಗಾಗಿ ಸಾಹಸ ತೋರಿದ ಬಾಲಕರಿಗೆ ಹೊಯ್ಸಳ ಮತ್ತು ಬಾಲಕಿಯರಿಗೆ ಕೆಳದಿ ಚೆನ್ನಮ್ಮ ಪ್ರಶಸ್ತಿಯನ್ನು ಮಕ್ಕಳ ದಿನಾಚರಣೆ-ಯೆಂದು ನೀಡಲಾಗುತ್ತಿದ್ದು, ಅದಕ್ಕಾಗಿ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ. ಪ್ರಶಸ್ತಿಗೆ ಆಯ್ಕೆಯಾದ ಮಕ್ಕಳಿಗೆ ತಲಾ 10 ಸಾವಿರ ರೂ.ಗಳ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ನೀಡಲಾಗುತ್ತದೆ. ಇದೇ ಸಂದರ್ಭದಲ್ಲಿ ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕನಿಷ್ಠ 05 ವರ್ಷಗಳ ಕಾಲ ಅತ್ಯುತ್ತಮ ಸೇವೆ ಸಲ್ಲಿಸಿದ ವ್ಯಕ್ತಿಗಳಿಗೆ ತಲಾ 25 ಸಾವಿರ ರೂ. ಗಳ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಹಾಗೂ ಸಂಸ್ಥೆಗಳಿಗೆ 1 ಲಕ್ಷ ರೂ. ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಪ್ರದಾನ ಮಾಡಲಾಗುವುದು.

2025ನೇ ಸಾಲಿನ ಪ್ರಶಸ್ತಿಗಾಗಿ ನಿಗದಿಪಡಿಸಿದ ಅರ್ಜಿಗಳನ್ನು ಉಪನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೊಠಡಿ ಸಂಖ್ಯೆ-209, ಜಿಲ್ಲಾಡಳಿತ ಭವನ, ನವನಗರ, ಬಾಗಲಕೋಟೆ ಇವರಿಂದ ಪಡೆದು ಭರ್ತಿ ಮಾಡಿ ಅಕ್ಟೋಬರ 18 ರೊಳಗಾಗಿ ಸಲ್ಲಿಸಬೇಕು ಎಂದು ಪ್ರಕಟಣೆ ಮೂಲಕ ತಿಳಿಸಲಾಗಿದೆ.

# ಗ್ರಾಮೀಣ ಮಹಿಳೆಯರು ಸ್ವಯಂ ಉದ್ಯೋಗಕ್ಕೆ ಮುಂದಾಗಲಿ:ಲಕ್ಷ್ಮೀ ಚಂದ್ರಶೇಖರ್

ಮಲ್ಲಮ್ಮ ನುಡಿವಾರ್ತೆ



ಕೊಪ್ಪಳ:ನಗರದ ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆಯ ಸಭಾ ಭವನದಲ್ಲಿ ಎಸ್.ಬಿ.ಐ.ಮತ್ತು ಖಖಇಖಿಖ ಸಹಯೋಗದಲ್ಲಿ ಮಹಿಳೆರಿಗಾಗಿ ಉಚಿತ ಹೊಲಿಗೆ ಮತ್ತು ಬ್ಯೂಟಿಷಿಯನ್ ತರಬೇತಿಯ ಉದ್ಘಾಟನಾ ಸಮಾರಂಭವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಸಮಾಜಸೇವಕರಾದ ಲಕ್ಷ್ಮೀ ಚಂದ್ರಶೇಖರ್ ಜ್ಯೋತಿ ಬೆಳಗಿಸಿ ಉದ್ಘಾಟಿಸಿ ಮಾತನಾಡಿದರು. ಗ್ರಾಮೀಣ ಮಹಿಳೆಯರಲ್ಲಿ ಎಲ್ಲಾ ಕೌಶಲ್ಯಗಳಿದ್ದು ಸೂಕ್ತ ಪ್ರೋತ್ಸಾಹ ಬೆಂಬಲ ಸಿಕ್ಕರೆ ಸ್ವ-ಯಂ ಉದ್ಯೋಗದ ಮೂಲಕ ಆರ್ಥಿಕ ಸಬಲರಾಗುತ್ತಾರೆ. ಸ್ಥಳೀಯ ಸಂಘ ಸಂಸ್ಥೆಗಳು ಸರಕಾರದ ಯೋಜನೆಗಳನ್ನು ಮಹಿಳೆಯರಿಗೆ ತಲುಪಿಸುವ ಮೂಲಕ ಸ್ವಾವಲಂಬಿ ಉದ್ಯೋಗಕ್ಕೆ ಪ್ರೇರಣೆ ನೀಡಲಿ ಎಂದರು.

ಮಹಿಳಾ ಧ್ವನಿ ಸಂಸ್ಥೆಯ ಸಂಸ್ಥಾಪಕಿ ಪ್ರಿಯದರ್ಶಿನಿ ಮಾತನಾಡಿ ಮಹಿಳೆಯರು ಎಲ್ಲಾ ಕ್ಷೇತ್ರದಲ್ಲಿ ಗುರುತಿಸಿಕೊಳ್ಳುತ್ತಿದ್ದಾರೆ ಕುಟುಂಬದ ಹಾಗೂ ಸರಕಾರದ ಬೆಂಬಲ ಸಿಕ್ಕಲ್ಲಿ ಸ್ವಯಂ ಉದ್ಯೋಗದ ಮೂಲಕ ಗ್ರಾಮೀಣ ಮಹಿಳೆಯರು ಆರ್ಥಿಕವಾಗಿ ಸಬಲರಾಗುತ್ತಾರೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ರಾಯೇಶ್ವರ ನಿರ್ದೇಶಕರು SBIRSETI, ಲಕ್ಷ್ಮೀಕಾಂತ ಉಪನ್ಯಾಸಕರು, ಗೀತಾ ಉಪನ್ಯಾಸಕಿ, ಪ್ರಸಾದ್ ಮತ್ತು ಶಿಬಿರಾರ್ಥಿಗಳು ಉಪಸ್ಥಿತರಿದ್ದರು.

# ಡಾ.ಭೀಮಣ್ಣ ಖಂಡ್ರೆಗೆ ಸಮಾಜ ಸೇವಾ ರತ್ನ ಪ್ರಶಸ್ತಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.14: ಶತಾಯುಷಿ, ಮಾಜಿ ಸಚಿವ ಡಾ.ಭೀಮಣ್ಣ ಖಂಡ್ರೆ ಅವರಿಗೆ ಸಮಾಜ ಸೇವಾ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

ಪಟ್ಟಣದ ಡಾ.ಭೀಮಣ್ಣ ಖಂಡ್ರೆ ಅವರ ನಿವಾಸಕ್ಕೆ ಪುಜ್ಯರು, ಗಣ್ಯರು ಮಂಗಳವಾರ ಭೇಟಿ ನೀಡಿ 24ನೇ ಕಲ್ಯಾಣಪರ್ವ ನಿಮಿತ್ತ ಬಸವಧರ್ಮ ಪೀಠ ಬಸವಕಲ್ಯಾಣ ವತಿಯಿಂದ ಸಮಾಜ ಸೇವಾ ರತ್ನ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

ಬಸವಕಲ್ಯಾಣದ ಸಿದ್ದರಾಮೇಶ್ವರ ಸ್ವಾಮೀಜಿ, ಅನಿಮಿಷಾನಂದಸ್ವಾಮೀಜಿ, ಲಾವಣ್ಯ ಮಾತಾಜೀ ಸೇರಿ ಪ್ರಶಸ್ತಿ ಪ್ರದಾನ ಮಾಡಿದರು. ನಂತರ ಸಿದ್ದರಾಮೇಶ್ವರ ಸ್ವಾಮೀಜಿ ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಯಲ್ಲಿ ಶತಾಯುಷಿ ಡಾ.ಭೀಮಣ್ಣ ಖಂಡ್ರೆ ಅವರ ಕೊಡುಗೆ ದೊಡ್ಡದಿದೆ. ಸುಮಾರು ನಾಲ್ಕೈದು ದಶಕಗಳ ಕಾಲ ರಾಜಕೀಯ ಕ್ಷೇತ್ರದಲ್ಲಿದ್ದು ಈ ಭಾಗದ ಅಭಿವೃದ್ಧಿ, ಶೈಕ್ಷಣಿಕ, ಸಾಮಾಜಿಕ ಮತ್ತು ಸಹಕಾರ ಕ್ಷೇತ್ರದಲ್ಲಿ ಅನನ್ಯ ಕೊಡುಗೆ ನೀಡುವುದರ ಜತೆಗೆ ಧರ್ಮ, ಸಮುದಾಯವನ್ನು ಸಂಘಟಿಸುವ ಕೆಲಸ ಮಾಡಿದ್ದಾರೆ.

ವಿಶಿಷ್ಟ ಸೇವೆ ಗುರುತಿಸಿ ಅವರನ್ನು ಸಮಾಜ ಸೇವಾರತ್ನ ಪ್ರಶಸ್ತಿಗೆ ಆಯ್ಕೆಮಾಡಿ 24ನೇ ಕಲ್ಯಾಣ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲು ನಿರ್ಧರಿಸಲಾಗಿತ್ತು. ಆದರೆ ಅವರು ಸಭೆಯಲ್ಲಿ ಪಾಲ್ಗೊಳ್ಳಲು ಸಾಧ್ಯವಾಗಿರಲ್ಲಿಲ್ಲ. ಹಾಗಾಗಿ ಅವರ ನಿವಾಸಕ್ಕೆ ಭೇಟಿ ನೀಡಿ ಅವರನ್ನು ಆಶೀರ್ವದಿಸಿ ಪ್ರಶಸ್ತಿ ನೀಡಿ ಗೌರವಿಸಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪ್ರಮುಖರಾದ ಸೋಮಶೇಖರ ಪಾಟೀಲ್ ಗಾದಗಿ, ಕುಶಾಲರಾವ ಪಾಟೀಲ್ ಖಾಜಾಪುರ, ಕಲ್ಯಾಣಪರ್ವ ಉತ್ಸವ ಸಮಿತಿ ಅಧ್ಯಕ್ಷ ಕಂಟೆಪ್ಪ ಗಂದಿಗುಡಿ, ಸುರೇಶಕುಮಾರ ಸ್ವಾಮಿ, ಸಂಜೀವಪಾಟೀಲ್, ರವೀಂದ್ರ ಕೊಳಕೂರ, ಮಹಾದೇವ ಬೇಲೂರೆ, ಸಂಗಮೇಶ ಜವಾದಿ, ಆಕಾಶ ಖಂಡಾಳೆ, ಪ್ರವೀಣ ಕಾಡಾದಿ, ರಾಜಕುಮಾರ ತೊಂಡಾರೆ, ಮಹಾದೇವ ಮಹಾಜನ್, ಸಚಿನ ಕೋಟೆ, ಶಾಂತಾಬಾಯಿ ಬಿರಾದಾರ್, ಪ್ರತಿಭಾ ವಿಜಯಕುಮಾರ ವಾಲದೊಡ್ಡಿ, ಈರಮ್ಮ ಧಾರವಾಡ, ಮಹಾನಂದಾ ಕೋಟೆ, ಸರಸ್ವತಿ ಹೊಕ್ರಾಣೆ, ಶಿಲ್ಪಾ ಪಾಟೀಲ್, ಸುರೇಖಾ ಹುಲಸೂರ ಸೇರಿದಂತೆ ಹಲವರು ಇದ್ದರು.



ಬೀದರ: ಔರಾದ್ ಪಟ್ಟಣದ ಪಂಚಾಯತ್‌ನ್ನು ಪಟ್ಟಣ ಪುರಸಭೆಯಾಗಿ ಮೇಲ್ದರ್ಜೆಗೇರಿಸಿದ್ದಕ್ಕಾಗಿ ಡಾ. ಭೀಮಸೇನ್ ರಾವ್ ಶಿಂಧೆ ಮತ್ತು ಔರಾದ್ ತಾಲೂಕಿನ ಕೌನ್ಸಿಲರ್‌ಗಳು ಪೌರಾಡಳಿತ ಮತ್ತು ಹಜ್ ಸಚಿವರಾದ ರಹೀಂ ಖಾನ್ ಅವರನ್ನು ಭೇಟಿ ಮಾಡಿ ಧನ್ಯವಾದ ಅರ್ಪಿಸಿದರು.

# ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಜಾಬ್ ಕಾರ್ಡ್ಗೆ ತಪ್ಪದೇ ಇ-ಕೆವೈಸಿ ಮಾಡಿಸಿ: ಸಿಇಒ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಅ14:ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ನೋಂದಾಯಿತ ಕುಟುಂಬಗಳ ಜಾಬ್ ಕಾರ್ಡ್ ಮಾನ್ಯತಾ ಅವಧಿಯನ್ನು ಇ-ಕೆವೈಸಿ ಮೂಲಕ ಪೂರ್ಣಗೊಳಿಸಲಾಗುತ್ತಿದ್ದು, ಎಲ್ಲಾ ನರೇಗಾ ಕೂಲಿಕಾರ್ಮಿಕರು ಈ ಅಭಿಯಾನದಲ್ಲಿ ಭಾಗವಹಿಸಿ ಕಡ್ಡಾಯವಾಗಿ ತಮ್ಮ ಜಾಬ್ ಕಾರ್ಡ್ಗೆ ಇ-ಕೆವೈಸಿ ಮಾಡಿಕೊಳ್ಳಬೇಕು ಎಂದು ಯಾದಗಿರಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀ ಲವೀಶ್ ಒರಡಿಯಾ ಅವರು ಮನವಿ ಮಾಡಿದ್ದಾರೆ. ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯದ ಆದೇಶ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿಗಳ ಸೂಚನೆಯಂತೆ ಜಿಲ್ಲೆಯಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ನೋಂದಾಯಿತ ಸಕ್ರಿಯ ಕೂಲಿಕಾರರ ಜಾಬ್ ಕಾರ್ಡ್ ಅನ್ನು ಇ-ಕೆವೈಸಿ ಮೂಲಕ ಮೌಲ್ಯೀಕರಿಸುತ್ತಿದ್ದು, ನರೇಗಾ ಯೋಜನೆಯಡಿ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳ ಸಕ್ರಿಯ ಕುಟುಂಬಗಳ ಜಾಬ್ ಕಾರ್ಡ್ ಮಾನ್ಯತಾ ಅಭಿಯಾನದ ಮಾದರಿಯಲ್ಲಿ ಅತೀತುರ್ತಾಗಿ ಇ-ಕೆವೈಸಿ ಮೂಲಕ ಪೂರ್ಣಗೊಳಿಸಲು ಸಿಬ್ಬಂದಿಗಳಿಗೆ ಅಗತ್ಯ ತರಬೇತಿಯನ್ನು ನೀಡಲಾಗಿದೆ ಎಂದರು. ತರಬೇತಿ ಪಡೆದ ಎಲ್ಲಾ ಸಿಬ್ಬಂದಿಗಳು ಜಾಬ್ ಕಾರ್ಡ್ಗಳಿಗೆ ಇ-ಕೆವೈಸಿ ಮಾಡುವ ಪ್ರಕ್ರಿಯೆಯಲ್ಲಿ ತೊಡಗಿದ್ದು, ಇ-ಕೆವೈಸಿ ಪ್ರಕ್ರಿಯೆಯಲ್ಲಿ ಕೂಲಿಕಾರ್ಮಿಕರು ಕಡ್ಡಾಯವಾಗಿ ಪಾಲ್ಗೊಳ್ಳಬೇಕು ಮುಂದಿನ ದಿನಗಳಲ್ಲಿ ಇ-ಕೆವೈಸಿ ಮಾಡಿಕೊಳ್ಳದ ಜಾಬ್-ಕಾರ್ಡ್ಗಳು ನಿಷ್ಕ್ರಿಯವಾಗುತ್ತವೆ.

ಮಹಾತ್ಮ ಗಾಂಧಿ ನರೇಗಾ ಯೋಜನೆಯ ಹೆಚ್ಚು ಪಾರದರ್ಶಕ ಅನುಷ್ಠಾನಕ್ಕೆ ಮತ್ತೊಂದು ಹೆಜ್ಜೆ ಇ-ಕೆವೈಸಿ ಆಗಿದ್ದು, ನರೇಗಾ ಕೂಲಿಕಾರರು, ಕಾಯಕ ಬಂಧುಗಳು ತಮ್ಮ ಜಾಬ್ ಕಾರ್ಡ್ಗಳಿಗೆ ಇ-ಕೆವೈಸಿ ಅಪ್ಡೇಟ್ ಮಾಡಿಸಿಕೊಳ್ಳುವುದು ಕಡ್ಡಾಯವಾಗಿದೆ. ನಮ್ಮ ಜಿಲ್ಲೆಯಲ್ಲಿ ನರೇಗಾ ಯೋಜನೆಯಡಿ ಶಹಾಪುರ 51944, ಸುರಪುರ 56669, ಯಾದಗಿರಿ 40934, ಗುರುಮಠಕಲ್ 22022, ವಡಗೇರಾ 32215 ಹಾಗೂ ಹುಣಸಗಿ 48155 ಸೇರಿ ಒಟ್ಟು 2,51,939 ಜನ ಸಕ್ರಿಯ ಕೂಲಿಕಾರ್ಮಿಕರಿದ್ದು, ಎಲ್ಲರೂ ಸಹ ತಪ್ಪದೇ ತಮ್ಮ ಜಾಬ್ ಕಾರ್ಡ್ಗೆ ಇ-ಕೆವೈಸಿ ಅಪ್ಡೇಟ್ ಮಾಡಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಆಯಾ ಗ್ರಾಮ ಪಂಚಾಯಿತಿ ಪಿಡಿಒ, ಕಾರ್ಯದರ್ಶಿ, ಡಿಇಒ, ಬಿಎಫ್ಟಿ, ಜಿಕೆಎಂ ಸೇರಿದಂತೆ ನರೇಗಾ ಸಿಬ್ಬಂದಿಯನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ಅವರು ತಿಳಿಸಿದ್ದಾರೆ.

# ಅಭಿಯಂತರ ಚೇತನ್ ಮನೆ ಮೇಲೆ ಲೋಕಾಯುಕ್ತ ದಾಳಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.14–ಆಲಮಟ್ಟಿ ಬಲದಂಡೆ ಕಾಲುವೆಯ ಸಹಾಯಕ ಮುಖ್ಯ ಇಂಜನೀಯರ್ ಚೇತನ್ ಅವರ ಬಾಗಲಕೋಟೆ ಮನೆ ಮೇಲೆ ಮಂಗಳವಾರ ಲೋಕಾಯುಕ್ತ ದಾಳಿ ನಡೆದಿದೆ.

ಲೋಕಾಯುಕ್ತ ಎಸ್ ಪಿ ಮಲ್ಲೇಶ ಮಾರ್ಗದರ್ಶನದಲ್ಲಿ ಡಿವೈಎಸ್‌ಪಿ ಸಿದ್ದೇಶ ನೇತೃತ್ವದ 12 ಅಧಿಕಾರಿಗಳ ತಂಡ ಬಾಗಲಕೋಟೆ ನವನಗರದ ಸೆಕ್ಟರ್ ನಂ.16 ರಲ್ಲಿರುವ ಚೇತನ್ ಮನೆ ಹಾಗೂ ಕಮತಗಿಯಲ್ಲಿರುವ ಕಚೇರಿ ಮೇಲೂ ಏಕಕಾಲಕ್ಕೆ ದಾಳಿ ನಡೆಸಿದರು.

ಆದಾಯ ಮೀರಿ ಆಸ್ತಿ ಗಳಿಕೆಯ ಆರೋಪದ ಹಿನ್ನೆಲೆಯಲ್ಲಿ ಈ ದಾಳಿ ನಡೆದಿದ್ದು, ಅಧಿಕಾರಿಗಳ ತಂಡ ದಾಖಲೆಗಳನ್ನು ಪರಿಶೀಲಿಸಿತು.

# ಪಂಚಭೂತಗಳಲ್ಲಿ ಲೀನವಾದ ಹಾಸ್ಯ ಮಾಂತ್ರಿಕ ರಾಜು ತಾಳಿಕೋಟೆ



ಮಲ್ಲಮ್ಮ ನುಡಿ ವಾರ್ತೆ

ವಿಜಯಪುರ:ಅ.14:ನಗುವಿನ ನಶೆಯಲ್ಲಿ ತೇಲಿಸಿ, ನಮ್ಮನ್ನು ನಕ್ಕು ನಗಿಸುತ್ತಿದ್ದ ಕಲಿಯುಗದ ಕುಡುಕ ಎಂದೇ ಖ್ಯಾತಿ ಗಳಿಸಿದ್ದ ವಿಜಯಪುರದ ರಾಜು ತಾಳಿಕೋಟೆ ಮಿಂಚಿಮರೆಯಾಗಿದ್ದಾರೆ. ನಿನ್ನ ಹಠಾತ್ತನೆ ಸಂಭವಿಸಿದ ಹೃದಯಾಘಾತದಿಂದ ಸಾವನಪ್ಪಿದ್ದು ಇಡೀ ಹಾಸ್ಯ ರಂಗಕ್ಕೆ ಬರಸಿಡಿಲು ಬಡಿದಂತಾಗಿದೆ. ಇಡೀ ಚಿತ್ರರಂಗ ಸೇರಿ, ವೃತ್ತಿ ರಂಗ ಭೂಮಿ ಇವರಿಗೆ ಅಂತಿಮ ನಮನ ಸಲ್ಲಿಸಲಾಯಿತು.

ರಂಗನಾಯಕ ಡಾ. ರಾಜು ತಾಳಿಕೋಟೆ ಇನ್ನಿಲ್ಲ ಎಂಬುದು ಇಡೀ ನಾಟಕ ರಂಗಕ್ಕೆ ಬರಸಿಡಿಲು ಬಡಿದಂತಾಗಿದೆ. ಕಲಿಯುಗದ ಕುಡುಕ'ನೇ ಎಂದೇ ಖ್ಯಾತಿ ಗಳಿಸಿದ್ದ ಹಿರಿಯ ನಟ, ನಿರ್ದೇಶಕ ಡಾ. ರಾಜು ತಾಳಿಕೋಟೆ ಬದುಕಿನ ನಾಟಕಕ್ಕೆ ವಿದಾಯ ಹೇಳಿದ್ದಾರೆ. ವಿಶಿಷ್ಟ ಶೈಲಿಯ ಮಾತುಗಾರ ರಾಜು ನಿನ್ನೆ ಹೃದಯಘಾತದಿಮದ ನಿಧನರಾಗಿದ್ದರೆ. ನಿನ್ನೆ ಶೈನ್ ಶೆಟ್ಟಿ ನಟನೆಯ ಶಂಕರಾಭರಣ ಸಿನಿಮಾ ಚಿತ್ರೀಕರಣದಲ್ಲಿ ಭಾಗಿಯಾಗಿ ಸಂಜೆ ವಿಶ್ರಾಂತಿ ಪಡೆಯುವ ವೇಳೆ ಹಠಾತ್ ಹೃದಯಾಘಾತ ಸಂಭವಿಸಿ ಕೊನೆ ಉಸಿರೆಳೆದಿದ್ದಾರೆ.

ರಾಜು ತಾಳಿಕೋಟೆ ಜೀವನವೇ ಒಂದು ಅಚ್ಚರಿಯ ಬದುಕು. ಬಹಳ ಸರಳ ಸಹಜವಾಗಿ ಬದುಕಿದ್ದ ರಾಜು ಕೋಟೆಯ ನಿಜನಾಮ ರಾಜೇಸಾಬ್ ಮುಕ್ತಂಸಾಬ್ ಯಂಕಂಚಿ. ಮುಕ್ತಂ ಮತ್ತು ಮೆಹಬೂಬ್ ದಂಪತಿಯ ಪುತ್ರ. ಇಸ್ಲಾಂ ಧರ್ಮದವರಾದರೂ, ರಾಜು ಎಂದೇ ಪ್ರಖ್ಯಾತಿ ಪಡೆದಿದ್ದರು. ಇದೀಗ ಇಬ್ಬರು ಪತ್ನಿಯರು, ಐವರು ಮಕ್ಕಳನ್ನು ತ್ಯಜಿಸಿ ಹೊರಟಿದ್ದಾರೆ.

ಯುವಪೀಳಿಗೆಗೆ ನಾಟಕದ ಅಭಿರುಚಿ ಹೆಚ್ಚಿಸಲು ಸ್ವತಃ ರಂಗಮಂದಿರವನ್ನು ಕಟ್ಟಿದವರು. ಧಾರವಾಡದ ರಂಗಾಯಣದ ನಿರ್ದೇಶಕರಾಗಿದ್ದ ರಾಜು ತಾಳಿಕೋಟೆ ಇಡೀ ರಾಜ್ಯಾದ್ಯಂತ ಸುತ್ತಿ ಹೊಸ ತಂಡವನ್ನ ರಚಿಸಿ ನಾಟಕ ಅಭಿನಯ ಮಾಡಿಸುತ್ತಿದ್ದವರು.

ಇವರು ಕೇವಲ ರಂಗಭೂಮಿ ಅಷ್ಟೇ ಅಲ್ಲದೆ ಸಿನಿಮಾ ರಂಗದಲ್ಲೂ ಅಭಿಮಯಿಸಿ ಸೈ ಎನಿಸಿಕೊಂಡಿದ್ದವರು. (ಸಿನಿಮಾ ಡೈಲಾಗ್ ಫ್ಲೋ) ಇವರ ನಟನೆಗೆ ಹಾಸ್ಯ ರತ್ನಾಕರ, ಹಾಸ್ಯ ಸಾಮ್ರಾಟ, ಕಾಮಿಡ್ ಕಿಂಗ್, ಕೆಸೆಟ್ ಕಿಂಗ್ ಎಂಬೆಲ್ಲಾ ಬಿರುದುಗಳನ್ನು ಮುಡಿಗೇರಿಸಿಕೊಂಡಿದ್ದವರು.

ಇನ್ನು ಹಾಸ್ಯನಟ, ರಂಗಾಯಣ ನಿರ್ದೇಶಕ ರಾಜು ತಾಳಿಕೋಟೆಯ ಪಾರ್ಥಿವ ಶರೀರವನ್ನು ಧಾರವಾಡ ರಂಗಾಯಣದಲ್ಲಿ ಅಂತಿಮ ದರ್ಶನಕ್ಕೆ ಅವಕಾಶ ಮಾಡಿಕೊಡಲಾಗಿತ್ತು. ರಾಜು ತಾಳಿಕೋಟೆ ಅಂತಿಮ ದರ್ಶನವನ್ನು ಧಾರವಾಡ ಜಿಲ್ಲಾಧಿಕಾರಿ, ಸಿಇಓ ಸೇರಿ ಅನೇಕ ಕಲಾವಿದರು ಅಂತಿಮ ದರ್ಶನ ಪಡೆದುಕೊಂಡರು. ಇನ್ನು ಪಾರ್ಥಿವ ಶರೀರದ ಎದುರು ಕಾಮಿಡಿ ಕಿಲಾಡಿ ಖ್ಯಾತಿಯ ಸಂಜು ಬಿಕ್ಕಿ ಬಿಕ್ಕಿ ಕಣ್ಣಿರು ಹಾಕಿದರು. ಇನ್ನು ತಾಳಿಕೋಟೆಯ ಧಾರವಾಡದಿಂದ ವಿಜಯಪುರಕ್ಕೆ ಕೊಂಡೊಯ್ದು ವಿಜಯಪುರ ಜಿಲ್ಲೆ ಸಿಂದಗಿ ತಾಲೂಕಿನ ಚಿಕ್ಕಸಿಂದಗಿ ಗ್ರಾಂದಲ್ಲಿರುವ ಅವರ ತೋಟದಲ್ಲಿ ಅಂತ್ಯಕ್ರಿಯೆ ನಡೆಯಿತು.

ಅಂತ್ಯಕ್ರಿಯೆ ವೇಳೆ ಮೃತ ಕುಟುಂಬಸ್ಥರ ಕಣ್ಣೀರು ಮುಗಿಲು ಮುಟ್ಟಿತ್ತು. ಒಟ್ಟಾರೆ ಇಡೀ ಕನ್ನಡ ಚಿತ್ರರಂಗವನ್ನು ಮತ್ತು ರಂಗಭೂಮಿಯನ್ನು ನಗುವಿನ ನಶೆಯಲ್ಲಿ ತೇಲಿಸುತ್ತಿದ್ದ ರಾಜೂ ತಾಳಿಕೋಟೆಯ ಸಾವು ನಿಜಕ್ಕೂ ಬರಸಿಡಿಲು ಬಡಿದಂತಾಗಿದೆ. ರಂಗಭೂಮಿಗೆ ಇವರ ಸಾವು ತುಂಬಲಾರದ ನಷ್ಟವಾಗಿದೆ.

# ರಾಜು ತಾಳಿಕೋಟಿ ಜವಾರಿ ಮಾತಿನ ಸರದಾರ: ಜಂಗಮಶೆಟ್ಟಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ14–ಉತ್ತರಕರ್ನಾಟಕ ಕಂಪನಿನಾಟಕಗಳ ಮೂಲಕ ಮನೆಮಾತಾಗಿದ್ದ ರಾಜು ತಾಳಿಕೋಟಿ (ಮೂಲ ಹೆಸರು: ರಾಜೇಸಾಬ ಮುಕ್ತುಮಸಾಬ್ ತಾಳಿಕೋಟಿ) ಅವರು ನಮ್ಮ ಉತ್ತರ ಕರ್ನಾಟಕದ ಜವಾರಿ ಮಾತಿನ ಸರದಾರರಾಗಿದ್ದರು ಎಂದು ಕಲಬುರಗಿ ರಂಗಾಯಣ ನಿರ್ದೇಶಕರಾದ ಸುಜಾತಾ ಜಂಗಮಶೆಟ್ಟಿ ಅವರು ರಾಜು ತಾಳಿಕೋಟಿ ಸ್ಮರಿಸಿಕೊಂಡರು. ಸೋಮವಾರ ಹೃದಯಘಾತದಿಂದ ನಿಧನರಾದ ವೃತ್ತಿ ರಂಗಭೂಮಿ, ಸಿನಿಮಾ ಮತ್ತು ಟಿವಿಲೋಕದ ಖ್ಯಾತ ಕಲಾವಿದ ರಾಜು ತಾಳಿಕೋಟಿ ಅವರಿಗೆ ಕಲಬುರಗಿ ರಂಗಾಯಣದಲ್ಲಿ ಹಮ್ಮಿಕೊಳ್ಳಲಾಗಿದ್ದ ರಂಗನಮನದಲ್ಲಿ ಮಾತನಾಡಿದ ಅವರು ನಾವೆಲ್ಲ ಒಟ್ಟೊಟ್ಟಿಗೆ ಬೇರೆ ಬೇರೆ ರಂಗಾಯಣಗಳಿಗೆ ಕಳೆದ ವರ್ಷ ಸರ್ಕಾರದಿಂದ ನಿರ್ದೇಶಕರುಗಳಾಗಿ ಆಯ್ಕೆಯಾಗಿದ್ದನ್ನು ಸ್ಮರಿಸಿಕೊಂಡು ಅವರ ಅಗಲಿಕೆ ಕನ್ನಡ ವೃತ್ತಿ ರಂಗಭೂಮಿಗೆ ತುಂಬಲಾರದ ನಷ್ಟ ಎಂದು ಹೇಳಿದರು.

ಧಾರವಾಡ ರಂಗಾಯಣದ ನಿರ್ದೇಶಕರನ್ನಾಗಿ ಸರ್ಕಾರ ಅವರನ್ನು ಆಯ್ಕೆಮಾಡಿದಾಗ ಬಹುತೇಕರು ಅಸಹನೆ ವ್ಯಕ್ತಪಡಿಸಿದ್ದರು, ಇದೆಲ್ಲವನ್ನೂ ಮೀರಿ ಅವರು ಎಲ್ಲವನ್ನು ನಗುತ್ತಲೇ ಸ್ವೀಕರಿಸಿ ಧಾರವಾಡ ರಂಗಾಯಣದ ಬಗ್ಗೆ ಹಲವು ಕನಸುಗಳನ್ನು ಹಂಚಿಕೊಂಡಿದ್ದರು. ಮೊದಲ ಭೇಟಿಗೆ ಸಾಕಷ್ಟು ಪರಿಚಯದವರಂತೆ ಮಾತಾಡಿಸಿದ ನೆನಪು ಇನ್ನೂ ಮಾಸಿಲ್ಲ ಎಂದರು. ಎಲ್ಲರೂ ಇಂದಲ್ಲ ನಾಳೆ ಹೋಗುತ್ತೇವೆ, ಆದರೆ ಹೋದವರು ಬಿಟ್ಟು ಹೋದ ಹೆಜ್ಜೆಗಳು ನೆನಪಿರುತ್ತವೆ. ಅವರೊಬ್ಬ ಉತ್ತರ ಕರ್ನಾಟಕದ ಜವಾರಿ ಮಾತಿನ ಸರದಾರ, ತಾಳಿಕೋಟಿಯವರು ಲಕ್ಷಾಂತರ ಅಭಿಮಾನಿಗಳನ್ನು ಹೊಂದಿದ್ದಾರೆ. ಕೇವಲ ನಾಲ್ಕನೇ ಕ್ಲಾಸ್ ಓದಿ, ಲಾರಿ ಚಾಲಕರಾಗಿ ಕೆಲಸ ಆರಂಭಿಸಿ ನಂತರ ರಂಗಭೂಮಿ ಕಡೆ ಬಂದವರು, ಕಲಿಯುಗದ ಕುಡುಕ ನಾಟಕದ ಮೂಲಕ ಪ್ರತಿಮನೆ-ಮನೆಯಲ್ಲಿ ಪ್ರಖ್ಯಾತಿ ಪಡೆದವರು. ಅವರ ಆತ್ಮಕ್ಕೆ ಶಾಂತಿ ಸಿಗಲೆಂದು ಪ್ರಾರ್ಥಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕಲಬುರಗಿ ಜಂಟಿ ನಿರ್ದೇಶಕ ಬಸವರಾಜ ಹೂಗಾರ ಅವರು ಮಾತನಾಡಿ ಕೇವಲ ಒಂದು ತಿಂಗಳ ಹಿಂದೆ ಕಲಬುರಗಿ ರಂಗಾಯಣಕ್ಕೆ ಭೇಟಿ ನೀಡಿದ್ದರು, ಜೀವನ ತುಂಬಾ ಕ್ಷಣಿಕ, ಇಂದು ಯಾರೂ ಯಾವಾಗ ಹೋಗ್ತಾರೆ ಎನ್ನುವುದು ಗೊತ್ತಾಗುವುದಿಲ್ಲ ಎಂದು ಆಶ್ಚರ್ಯ ವ್ಯಕ್ತಪಡಿಸಿದರು. ರಾಜು ತಾಳಿಕೋಟಿಯವರ ಸರಳ ಅಭಿನಯ ನೋಡುಗರನ್ನು ಮನಸೋರೆಗೊಳಿಸಿತ್ತು. ರಾಜು ಅವರು ಅಷ್ಟೊಂದು ಪ್ರತಿಭೆ ಇದ್ದರೂ ಕೂಡ ಹೊಟ್ಟೆಪಾಡಿಗಾಗಿ ಡಬಲ್ ಮೀನಿಂಗ್ ಪದಬಳಕೆ ಹೆಚ್ಚಿತ್ತು ಎನ್ನುವುದು ಅವರ ಮೇಲಿದ್ದ ಅಪವಾದ ಇದ್ದರು ಸಹಜನರಿಗೆ ಮನರಂಜನೆ ನೀಡುವುದು ಅವರ ಮುಖ್ಯ ಉದ್ದೇಶವಾಗಿತ್ತು, ಉತ್ತರಕರ್ನಾಟಕದಲ್ಲಿ ಪ್ರಸಿದ್ದಿಯಾಗಿದ್ದ ಅವರಿಗೆ ಸಿನಿಮಾ ಹಾಗೂ ಟಿವಿ ರಾಜ್ಯಕ್ಕೆ ಪರಿಚಯಿಸಿತ್ತು. ರಂಗಭೂಮಿಯನ್ನು ರಂಗಭೂಮಿಯನ್ನಾಗಿ ನೋಡುವ ಕಾಲ ಬಂದಾಗ ಕಲೆಗೆ ಬೆಲೆ. ಟಿವಿ-ಸಿನಿಮಾಗಳಲ್ಲಿ ಸಹಜನಟನೆಯನ್ನು ಪರಿಚಯಿಸಿದವರು. ಅವರ ಕಲಾರಾಧನೆ ನಮ್ಮೆಲ್ಲರಿಗೂ ಮಾರ್ಗದರ್ಶನ ಎಂದರು. ಕಲಬುರಗಿ ರಂಗಾಯಣ ಮಾಜಿ ನಿರ್ದೇಶಕ ಪ್ರಭಾಕರ್ ಜೋಷಿ ಅವರು ಮಾತನಾಡಿ ಇತ್ತೀಚಿನ ದಿನಗಳಲ್ಲಿ ಹಲವು ಸೃಜನಶೀಲ ವ್ಯಕ್ತಿಗಳ ಸಾವು ತುಂಬಾ ನೋವುಂಟು ಮಾಡಿದೆ, ಸೃಜನಶೀಲರ ಹೃದಯ ಬಹುಶಃ ತುಂಬಾ ಸೂಕ್ಷ್ಮವಾಗಿರಬೇಕು. ಬೇರೆ ಬೇರೆ ಸಂದರ್ಭಗಳಲ್ಲಿ ಅವರನ್ನು ನೆನಪಿಸಿಕೊಳ್ಳುವುದಷ್ಟೆ ಅವರಿಗೆ ನಾವು ಸಲ್ಲಿಸುವ ಗೌರವ. ಕಂಪನಿ ನಾಟಕದಿಂದ ಬಂದವರು ಧಾರವಾಡ ರಂಗಾಯಣಕ್ಕೆ ಸರ್ಕಾರ ನಿರ್ದೇಶಕರನ್ನಾಗಿ ನೇಮಿಸಿತ್ತು. ಇದೊಂದು ದೊಡ್ಡ ಸಾಧನೆ ಎಂದು ಹೇಳಿದರು. ಬೀದರ್ ರಂಗಕರ್ಮಿ ಕಲಾವಿದ ಹಾಗೂ ನಾಟಕ ಅಕಾಡೆಮಿ ಸದಸ್ಯ ವಿಜಯ್ಕುಮಾರ್ ಸೋನೆ ಅವರು ಮಾತನಾಡಿ ಅವರ ಹೆಸರಲ್ಲಿ ಬಹಳಷ್ಟು ಜನರು ಜೀವನ ಕಟ್ಟಿಕೊಂಡಿದ್ದಾರೆ, ಅವರ ಕಂಪನಿ ನಾಟಕದಲ್ಲಿ ನೂರಾರು ಜನರು ಜೀವನ ನಡೆಸುತ್ತಿದ್ದಾರೆ. ಅವರ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಲಕ್ಷಾಂತರ ಜನರು ಅವರ ಆತ್ಮಕ್ಕೆ ಶಾಂತಿ ಕೋರಿರುವುದು ಅವರ ಖ್ಯಾತಿಯನ್ನು ಸೂಚಿಸುತ್ತದೆ ಎಂದರು. ಮೈಸೂರು ರಂಗಾಯಣದ ನಿವೃತ್ತ ಹಿರಿಯ ಕಲಾವಿದ ಹುಲುಗಪ್ಪ ಕಟ್ಟಿಮನಿಯವರು ಮಾತನಾಡಿ ತಾಳಿಕೋಟಿ ಬಿಚ್ಚು ಮನಸ್ಸಿನ ಜವಾರಿ ಮನುಷ್ಯ, ನಮಗಿಂತ ಹೆಚ್ಚಾಗಿ ವಿಜಯಪುರದ ಜನರಿಗೆ ಅವರು ಡಾ ರಾಜಕುಮಾರ್ ಇದ್ದಂತೆ. ಬಡಜನರ ಕೂಲಿಕಾರ್ಮಿಕರ ಮನರಂಜನೆಯ ಹೀರೋ ಆಗಿ ಮೆರೆದವರು, ಇಂತಹವರಿಗೆ ಸಾವಿಲ್ಲ, ಜನಮಾನಸದಲ್ಲಿ ಉಳಿದವರಿಗೆ ಸಾವಿಲ್ಲ ಎಂದು ಹೇಳಿದರು. ಯಾವುದೇ ಕಲೆಯ ಮೂಲಕ ಜನರನ್ನು ತಲುಪುವುದು ಕಲಾವಿದರ ಧರ್ಮ, ಉತ್ತರ ಕರ್ನಾಟಕದ ಕಂಪನಿ ನಾಟಕದ ಧ್ರುವತಾರೆ ರಾಜು ತಾಳಿಕೋಟೆ. ಅವರು ಮಾತಾಡಿದ್ರೆ ನಗು ಬರುತ್ತಿತ್ತು, ಒತ್ತಡ ರಹಿತ ಜೀವನದಲ್ಲಿ ಬದುಕಲು ಹೊರಟ ಮನುಷ್ಯನಿಗೆ ಹೃದಯ ಸ್ತಂಭನವಾಗಿರುವುದು ದುರಂತ ಎಂದರು. ಕಾರ್ಯಕ್ರಮದ ಕೊನೆಯಲ್ಲಿ ಕಲಬುರಗಿ ರಂಗಾಯಣದ ಕಲಾವಿದರು ಅಗಲಿದ ರಂಗಭೂಮಿಯ ಚೇತನಕ್ಕೆ ರಂಗಗೀತ ಗಾಯನದ ಮೂಲಕ ರಂಗನಮನ ಸಲ್ಲಿಸಿದರು.

# 3 ತಿಂಗಳಿಂದ ಸಿಗದ ವೇತನ ಗ್ರಂಥಾಲಯ ಮೇಲ್ವಿಚಾರಕಿ ಆತ್ಮಹತ್ಯೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಅ.14:3 ತಿಂಗಳಿಂದ ಸಂಬಳ ಸಿಗದಿದ್ದಕ್ಕೆ ಬೇಸರಗೊಂಡ ಗ್ರಂಥಾಲಯ ಮೇಲ್ವಿಚಾರಕಿಯೋರ್ವರು ಆತ್ಮಹತ್ಯೆಗೆ ಶರಣಾದ ಘಟನೆ ಕಲಬುರಗಿ ಜಿಲ್ಲೆಯ ಸೇಡಂ ತಾಲೂಕಿನ ಮಳಖೇಡ ಗ್ರಾಮದಲ್ಲಿ ನಡೆದಿದೆ. ಮೃತರನ್ನು ಭಾಗ್ಯಶ್ರೀ (45) ಎಂದು ಗುರುತಿಸಲಾಗಿದ್ದು, ಅವರು ಮಳಖೇಡ ಸರ್ಕಾರಿ ಗ್ರಂಥಾಲಯದಲ್ಲಿ ಮೇಲ್ವಿಚಾರಕಿಯಾಗಿ ಸೇವೆ ಸಲ್ಲಿಸುತ್ತಿದ್ದರು. ಗ್ರಾಮ ಪಂಚಾಯಿತಿ ಸದಸ್ಯ ಪಾಂಡುಸಿಂಗ್ ಚವ್ಹಾಣ್ ಅವರ ಹೇಳಿಕೆಯ ಪ್ರಕಾರ, 'ಮೂರು ತಿಂಗಳಿಂದ ವೇತನ ಪಾವತಿ ಆಗಿರಲಿಲ್ಲ. ಅಧಿಕಾರಿಗಳು ಸತಾಯಿಸುತ್ತಿದ್ದರು.

ಇದೇ ಕಾರಣಕ್ಕೆ ನೊಂದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಆತ್ಮಹತ್ಯೆ ಪತ್ರ ಬರೆದಿಟ್ಟಿದ್ದಾರೆ. ಡೆತ್ ನೋಟ್‌ನಲ್ಲಿ ಪಿಡಿಓ ಗ್ರಾಮಪಂಚಾಯತಿ ಅಧ್ಯಕ್ಷರ ಹೆಸರು ಉಲ್ಲೇಖಿಸಿ ಮಳಖೇಡ ಗ್ರಾಮಪಂಚಾಯತಿಯ ಆವರಣದಲ್ಲಿ ಆತ್ಮಹತ್ಯೆಗೆ ಶರಣಾಗಿದ್ದಾರೆ ಎಂದು ತಿಳಿಸಿದ್ದಾರೆ.

ಘಟನೆಯ ನಂತರ ಗ್ರಾಮದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಗಿದ್ದು,

ಸ್ಥಳೀಯರು ಸೇಡಂ ಶಾಸಕ ಡಾ. ಶರಣಪ್ರಕಾಶ ಪಾಟೀಲ್

ಸ್ಥಳಕ್ಕೆ ಬರುವವರೆಗೂ ಮೃತದೇಹವನ್ನು ಹೊರತೆಗೆಯುವುದಿಲ್ಲ ಎಂದು ಪಟ್ಟು ಹಿಡಿದು ಗ್ರಂಥಾಲಯದ ಎದುರು ಪ್ರತಿಭಟನೆ ನಡೆಸಿದರು.

# ಕುಸಿದ ಶಾಲೆಯ ಮೇಲ್ಚಾವಣಿ; ಜಾತಿ ಗಣತಿ ರಜೆಯಿಂದ ವಿದ್ಯಾರ್ಥಿಗಳು ಬಚಾವ್

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಅ.14:ಕಲಬುರಗಿ ಜಿಲ್ಲೆಯ ಚಿತ್ತಾಪುರದ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ ಕೊಠಡಿಯೊಂದರ ಕಾಂಕ್ರೀಟ್ ಛಾವಣಿ ಕುಸಿದು ಬಿದ್ದಿದ್ದು, 'ಜಾತಿ ಗಣತಿ' ನಿಮಿತ್ತ ಶಾಲೆಗೆ ರಜೆ ಇದ್ದಿದ್ದರಿಂದ ಯಾರಿಗೂ ತೊಂದರೆ ಆಗಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಮೂಲಗಳ ಪ್ರಕಾರ, ಸೋಮವಾರ ಮಧ್ಯಾಹ್ನ ಶಾಲೆಯ ಮೇಲ್ಚಾವಣಿ ಕುಸಿದು ಬಿದ್ದಿದ್ದು, ಯಾವುದೇ ಸಾವುನೋವು ಸಂಭವಿಸಿಲ್ಲ ಎಂದು ವರದಿಯಾಗಿದೆ.

ಮೇಲ್ಚಾವಣಿ ಕುಸಿದು ಬಿದ್ದ ಪರಿಣಾಮ ಕೋಣೆಯೊಳಗಿನ ಎಲ್ಲಾ ಪೀಠೋಪಕರಣಗಳು ನಾಶವಾಗಿವೆ ಮತ್ತು ಕಿಟಕಿಗಳು ಪುಡಿಪುಡಿಯಾಗಿವೆ. 50 ವರ್ಷ ಹಳೆಯದಾಗಿರುವ ಈ ಶಾಲಾ ಕಟ್ಟಡದಲ್ಲಿ ಕನ್ನಡ, ಉರ್ದು ಮತ್ತು ಮರಾಠಿ ಮಾಧ್ಯಮ ತರಗತಿಗಳನ್ನು ನಡೆಸಲಾಗುತ್ತಿತ್ತು. ಇಲ್ಲಿ ನಿತ್ಯ ನೂರಾರು ವಿದ್ಯಾರ್ಥಿಗಳಿಗೆ ಪಾಠ ಮಾಡಲಾಗುತ್ತದೆ. ಆದರೆ ಜಾತಿ ಗಣತಿ ಹಿನ್ನೆಲೆಯಲ್ಲಿ ರಜೆ ನೀಡಲಾಗಿದ್ದು, ಮಕ್ಕಳು ಅಪಾಯದಿಂದ ಪಾರಾಗಿದ್ದಾರೆ. ಇಡೀ ಕಟ್ಟಡ ಕುಸಿದು ಮಕ್ಕಳ ಪ್ರಾಣ ಕಳೆದುಕೊಳ್ಳಬಹುದು ಎಂಬ ಆತಂಕದಲ್ಲಿ ಶಿಕ್ಷಕರು ಪಾಠ ಮಾಡುತ್ತಿದ್ದರು ಎಂದು ನಿವಾಸಿಯೊಬ್ಬರು ಪಿಟಿಐಗೆ ತಿಳಿಸಿದ್ದಾರೆ.

ನಮ್ಮ ಶಾಲಾ ಕಟ್ಟಡ ಹೊರಗಿನಿಂದ ಚೆನ್ನಾಗಿ ಕಾಣುತ್ತದೆ. ಆದರೆ ಒಳಗಿನ ಸ್ಥಿತಿ ಭಯಾನಕವಾಗಿದೆ. ಎಲ್ಲಾ ಕೊಠಡಿಗಳ ಕಾಂಕ್ರೀಟ್ ಛಾವಣಿ ಕುಸಿದು ಬೀಳುವ ಹಂತದಲ್ಲಿದೆ. ದಸರಾ ರಜೆಯ ನಂತರ ಶಾಲೆ ಪ್ರಾರಂಭವಾದಾಗ, ನಾವು ಹೊರಗೆ ತರಗತಿಗಳನ್ನು ನಡೆಸುತ್ತೇವೆ ಎಂದು ಶಿಕ್ಷಕರು ಹೇಳಿದ್ದಾರೆ.

# ಹಿರಿಯ ಸಹಾಯಕ ನಿರ್ದೇಶಕರಾಗಿ ಡಾ.ಸುರೇಶ ಜಿ ಅಧಿಕಾರ ಸ್ವೀಕಾರ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅ 14 : ಕೊಪ್ಪಳ ಜಿಲ್ಲೆಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾಗಿರುವ ಡಾ.ಸುರೇಶ ಜಿ. ಅವರು, ರಾಯಚೂರಿನ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಪ್ರಭಾರಿ ಹಿರಿಯ ಸಹಾಯಕ ನಿರ್ದೇಶಕರಾಗಿ ಅಕ್ಟೋಬರ್ 14 ರಂದು ಅಧಿಕಾರ ಸ್ವೀಕರಿಸಿದರು. ಯಾದಗಿರಿ ಜಿಲ್ಲೆಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾಗಿರುವ ಸುಲೈಮಾನ್ ಡಿ.ನಧಾಫ್ ಅವರು, ಸುರೇಶ ಅವರಿಗೆ ರಾಯಚೂರು ಕಚೇರಿಯ ಹಿರಿಯ ಸಹಾಯಕ ನಿರ್ದೇಶಕರ ಹುದ್ದೆಯ ಅಧಿಕಾರವನ್ನು ಹಸ್ತಾಂತರ ಮಾಡಿದರು.

# ಅಲೋಕ್ ಕುಮಾರ್ : ತನಿಖಾ ಆದೇಶ ರದ್ದು

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.14: ನಿವೃತ್ತ ಎಡಿಜಿಪಿ ಭಾಸ್ಕರ್ ರಾವ್ ವಿರುದ್ಧದ ಫೋನ್ ಟ್ಯಾಪಿಂಗ್ ಪ್ರಕರಣದಲ್ಲಿ ಅಲೋಕ್ ಕುಮಾರ್ ವಿರುದ್ಧದ ಇಲಾಖಾ ತನಿಖೆ ಆದೇಶವನ್ನ ಕೇಂದ್ರ ಆಡಳಿತಾತ್ಮಕ ನ್ಯಾಯಮಂಡಳಿ ರದ್ದು ಮಾಡಿದೆ. ಈ ಮೂಲಕ ರಾಜ್ಯ ಸರ್ಕಾರದ ಆದೇಶಕ್ಕೆ ಭಾರೀ ಹಿನ್ನಡೆಯಾಗಿದೆ. 2018–19 ರಲ್ಲಿ ಕುಮಾರಸ್ವಾಮಿ ಮುಖ್ಯಮಂತ್ರಿಯಿದ್ದಾಗ ಅಲೋಕ್ ಕುಮಾರ್ ಬೆಂಗಳೂರು ಪೊಲೀಸ್ ಅಯುಕ್ತರಾಗಿದ್ದರು. ಈ ವೇಳೆ ಎಡಿಜಿಪಿ ಭಾಸ್ಕರ್ ರಾವ್ ಫೋನ್ ಟ್ಯಾಪಿಂಗ್ ಮಾಡಿದ್ದ ಆರೋಪ ಕೇಳಿಬಂದಿತ್ತು. ಪ್ರಕರಣದಲ್ಲಿ ಸಿಬಿಐ ತನಿಖೆಯಾಗಿ 2024 ರಲ್ಲಿ ಬಿ ರಿಪೋರ್ಟ್ ಸಲ್ಲಿಕೆ ಮಾಡಲಾಗಿತ್ತು. ಕಳೆದ ಮೇ ತಿಂಗಳಲ್ಲಿ ರಾಜ್ಯ ಸರ್ಕಾರ ಭಾಸ್ಕರ್ ರಾವ್ ವಿರುದ್ಧದ ಫೋನ್ ಟ್ಯಾಪಿಂಗ್ ಪ್ರಕರಣವನ್ನ ಇಲಾಖಾ ತನಿಖೆಗೆ ಆದೇಶಿಸಿತ್ತು. ಸರ್ಕಾರದ ಆದೇಶ ಪ್ರಶ್ನಿಸಿ ಅಲೋಕ್ ಕುಮಾರ್ ಸಿಎಟಿ ಮೊರೆ ಹೋಗಿದ್ದರು. ಇಬ್ಬರು ನ್ಯಾಯಾಧೀಶರ ನಡುವೆ ವಿಭಿನ್ನ ತೀರ್ಪು ಬಂದ ಹಿನ್ನೆಲೆ, ಸಿಎಟಿ ಚೇರ್‌ಮನ್ ನ್ಯಾಯಮೂರ್ತಿ ರಣಜೀತ್‌ರಿಗೆ ಕೇಸ್ ವರ್ಗಾವಣೆಯಾಗಿತ್ತು. ಡಿಜಿಪಿ ಹುದ್ದೆಗೆ ಬಡ್ತಿ ತಡೆಯಲು ಅಲೋಕ್ ವಿರುದ್ಧ ಸರ್ಕಾರ ಇಲಾಖಾ ವಿಚಾರಣೆಗೆ ಆದೇಶ ನೀಡಿದೆ ಅಂತಾ ಅಲೋಕ್ ಕುಮಾರ್ ಪರ ವಕೀಲರು ವಾದ ಮಂಡಿಸಿದ್ದರು.

# ಗಾಂಜಾ ಜಪ್ತಿ : ಇಬ್ಬರು ಬಂಧನ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಅ.14:ತಾಲೂಕಿನ ಮನ್ನಾಏಖೇಳ್ಳಿ ಮತ್ತು ಮೀನಕೇರಾ ಕ್ರಾಸ್ ಹತ್ತಿರ ಅಕ್ರಮವಾಗಿ ಬೈಕ್ ಮೇಲೆ ಗಾಂಜಾ ಸಾಗಿಸುತ್ತಿದ್ದಾಗ ಅಕ್ಟೋಬರ್ 12ರಂದು ರಾತ್ರಿ ಖಚಿತ ಮಾಹಿತಿ ಮೇರೆಗೆ ಪೊಲೀಸ್ ಜಿಲ್ಲಾ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ, ಹೆಚ್ಚುವರಿ ಜಿಲ್ಲಾ ವರಿಷ್ಠಾಧಿಕಾರಿ ಚಂದ್ರಕಾಂತ ಪೂಜಾರಿ,

ಡಿವೈಎಸ್ಪಿ ಮಾಡೋಳಪ್ಪ ಇವರ ಮಾರ್ಗದರ್ಶನದ ಮೇರೆಗೆ ಪಿಎಸ್ಐ ಮಹಿಂದ್ರಕುಮಾರ್ ಮತ್ತು ಸಿಬ್ಬಂದಿ ವರ್ಗದವರು ದಾಳಿ ಮಾಡಿ ಇಬ್ಬರ ಆರೋಪಿತರನ್ನು ದಸ್ತರಿಗಿ ಮಾಡಿ ಆರೋಪಿತರ ವಶದಿಂದ 20.ಲಕ್ಷ ರೂಪಾಯಿ

ಮೌಲ್ಯವುಳ್ಳ 20.120 ಕೆ.ಜಿ ಗಾಂಜಾ ಸಾಗಣಿಕೆಗೆ ಬಳಸಿದ ದ್ವಿಚಕ್ರ ವಾಹನ ಹಾಗೂ ಮೊಬೈಲ್ ಒಟ್ಟು 20,19,000 ರೂಪಾಯಿ ಮೌಲ್ಯದ ಮುದ್ದೆಮಾಲನ್ನು ಜಪ್ತಿ ಮಾಡಿಕೊಂಡು ತಹಶೀಲ್ದಾರ್ ಮಂಜುನಾಥ್ ಪಂಚಾಳ ಇವರ ಸಮುಖದಲ್ಲಿ ಪಂಚನಾಮೆ ಮಾಡಿಕೊಂಡು ಮಾದಕ ವಸ್ತುಗಳ ಸಾಗಾಣಿಕೆ ಕಾಯ್ದೆ ಅಡಿಯಲ್ಲಿ ಆರೋಪಿತರನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

# ಕೇಂದ್ರ ತಂಡದಿಂದ ಈರುಳ್ಳಿ ಬೆಳೆ ವೀಕ್ಷಣೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.14–ಬಾಗಲಕೋಟೆ ಜಿಲ್ಲೆಗೆ ಮಂಗಳವಾರ ಆಗಮಿಸಿದ್ದ ಕೇಂದ್ರದ ಉಪ ಕೃಷಿ ಮಾರುಕಟ್ಟೆ ಸಲಹೆಗಾರ ಬಿ.ಕೆ.ಪ್ರುಷ್ಟಿ ನೇತೃತ್ವದ ಕೇಂದ್ರ ತಂಡ ವಿವಿಧೆಡೆ ಈರುಳ್ಳಿ ಬೆಳೆದ ಕ್ಷೇತ್ರಗಳಿಗೆ ಭೇಟಿ ನೀಡಿ ಬೆಳೆಯ ಸ್ಥಿತಿಗತಿಯನ್ನು ವೀಕ್ಷಣೆ ಮಾಡಿದರು.



ಜಿಲ್ಲೆಯ ವಿವಿಧ ಈರುಳ್ಳಿ ಬೆಳೆ ತಾಕುಗಳಿಗೆ ಭೇಟಿ ನೀಡಿ ಬೆಳೆ ಹಾನಿ ವೀಕ್ಷಣೆ ಮಾಡಿದರಲ್ಲದೇ ರೈತರಿಂದ ಹಾನಿಯ ಮಾಹಿತಿಯನ್ನು ಪಡೆದುಕೊಂಡು ನಂತರ ಬಾಗಲಕೋಟೆ ಕೃಷಿ ಮಾರುಕಟ್ಟೆ ಪ್ರಾಂಗಣಕ್ಕೆ ಭೇಟಿ ನೀಡಿ ಈರುಳ್ಳಿ ಮಾರಾಟದ ಹರಾಜು ಪ್ರಕ್ರಿಯೆಯನ್ನು ವೀಕ್ಷಿಸಿದರು. ನಂತರ ಜಿಲ್ಲಾಧಿಕಾರಿಗಳನ್ನು ಭೇಟಿ ಮಾಡಿ ಜಿಲ್ಲೆಯಲ್ಲಿ ಹಾನಿಗೊಳಗಾದ ಈರುಳ್ಳಿ ಬೆಳೆಯ ಮಾಹಿತಿಯನ್ನು ಪಡೆದುಕೊಂಡು ಹಾನಿ ಕುರಿತು ಸರಕಾರಕ್ಕೆ ಪ್ರಸ್ತಾವಣೆ ಕಳುಹಿಸುವುದಾಗಿ ಹೇಳಿದರು.

ರೈತರು ಬೆಳೆದ ಈರುಳ್ಳಿ ಬೆಳೆ ಸಂಪೂರ್ಣವಾಗಿ ಹಾನಿಗೊಳಗಾಗಿದ್ದು, ರೈತರಿಗೆ ಸೂಕ್ತ ಪರಿಹಾರ ದೊರೆಯುಂತೆ ಮಾಡಬೇಕೆಂದು ಸಂಸದ ಪಿ.ಸಿ.ಗದ್ದಿಗೌಡರ ಮತ್ತು ಜಿಲ್ಲಾಧಿಕಾರಿ ಸಂಗಪ್ಪ ಕೇಂದ್ರ ತಂಡಕ್ಕೆ ಮನವಿ ಮಾಡಿಕೊಂಡರು.

ಕೇಂದ್ರ ತಂಡದಲ್ಲಿ ಡಿಪಿಪಿಕ್ಯೂನ ಉಪನಿರ್ದೇಶಕ ಡಾ.ವಿ.ಡಿ.ನಿಗಮ್, ಗ್ರಾಹಕರ ವ್ಯವಹಾರಗಳ ಇಲಾಖೆಯ ಬೆಲೆ ಮೇಲ್ವಿಚಾರಣಾ ವಿಭಾಗದ ಉಪ ನಿರ್ದೇಶಕ ರಾಜೀವ್ ಕುಮಾರ, ಡಿ.ಎ ಮತ್ತು ಎಫ್.ಡಬ್ಲೂನ ಅಂಡರ್ ಸೆಕ್ರೆಟರಿ ಮನೋಜ್ ಕೆ, ಎನ್.ಎಚ್.ಆರ್.ಡಿ.ಎಫ್‌ನ ಕೇಂದ್ರದ ಮುಖ್ಯಸ್ಥ ಡಾ.ತಿಲಕ ಜೆ.ಸಿ, ಬೆಳಗಾವಿ ವಿಭಾಗೀಯ ತೋಟಗಾರಿಕೆ ಜಂಟಿ ನಿರ್ದೇಶಕ ಐ.ಕೆ.ದೊಡಮನಿ, ಜಿಲ್ಲಾ ತೋಟಗಾರಿಕೆ ಜಂಟಿ ನಿರ್ದೇಶಕ ರವೀಂದ್ರ ಹಕಾಟಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.